ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ  Postal Reg. No. BDR/054/2026-2027 Email: mallmmanudi@gmail.com E-paper: www.mallmmanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy

VOLUME - 13 ಸಂಪುಟ-13 | ISSUE - 28 ಸಂಚಿಕೆ- 28 | PAGE- 8 ಪುಟ-8 | ಮಂಗಳವಾರ 04.03.2025 | RS.2/- ಬೆಲೆ 2/-

# ಮೊಯ್ಲಿ ಹೇಳಿಕೆಗಿಂತ ಹೈಕಮಾಂಡ್ ಹೇಳಿಕೆ ಮುಖ್ಯ : ಸಿಎಂ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮಾ.3: ವೀರಪ್ಪ ಮೊಯ್ಲಿ ಅಥವಾ ಬೇರೆಯವರು ಸಿಎಂ ಬದಲಾವಣೆ ವಿಚಾರ ಹೇಳುವುದು ಮುಖ್ಯವಲ್ಲ. ಹೈಕಮಾಂಡ್ ಏನು ಹೇಳುತ್ತಾರೋ ಅದು ಮುಖ್ಯ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.ಡಿಕೆಶಿ ಸಿಎಂ ಆಗೇ ಆಗ್ತಾರೆ ಎಂಬ ವೀರಪ್ಪ ಮೊಯ್ಲಿ ಹೇಳಿಕೆ ವಿಚಾರವಾಗಿ ವಿಧಾನಸೌಧದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ್ದಾರೆ. ಹೈಕಮಾಂಡ್ ತೀರ್ಮಾನವೇ ಅಂತಿಮ ತೀರ್ಮಾನ. ಹೈಕಮಾಂಡ್ ತೀರ್ಮಾನಕ್ಕೆ ನಾನು ಬದ್ಧನಾಗಿದ್ದೇನೆ. ಬೇರೆ ಅವರು ಮಾತನಾಡಿದರೆ ನಾನೇನು ಮಾತನಾಡಲಿ. ನಾನು ಹೈಕಮಾಂಡ್ ನಿರ್ದೇಶನದಂತೆ ಹೋಗುತ್ತೇನೆ ಎಂದು ಸ್ಪಷ್ಟನೆ ನೀಡಿದರು. ಗುತ್ತಿಗೆದಾರರಿಗೆ ಏಪ್ರಿಲ್‌ನಲ್ಲಿ ಹಣ ಬಿಡುಗಡೆ ಮಾಡುತ್ತೇನೆ ಎಂದು ಹೇಳಿದ್ದೇನೆ. 30 ಸಾವಿರ ಕೋಟಿ ರೂ. ಬಾಕಿ ಇದೆ. 15 ಸಾವಿರ ಕೋಟಿ ರೂ. ಕೊಡಬೇಕು ಎಂದು ಹೇಳಿದ್ದಾರೆ. ಆದರೆ ಅಷ್ಟೆಲ್ಲಾ ಕೊಡಲು ಆಗುವುದಿಲ್ಲ. ಎಷ್ಟು ಸಾಧ್ಯವೋ ಅಷ್ಟು ಕೊಡುತ್ತೇವೆ ಎಂದರು.



ಹೈಕಮಾಂಡ್ ದೂರು ನೀಡುತ್ತೇವೆ ಎಂಬ ಗುತ್ತಿಗೆದಾರರ ಸಂಘದವರ ಹೇಳಿಕೆ ವಿಚಾರವಾಗಿ ಪ್ರತಿಕ್ರಿಯಿಸಿ, ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿಯಾಗಲಿ ಯಾರು ಬೇಡ ಅಂದರು. ನಾವು ಹಣಕಾಸು ಪರಿಸ್ಥಿತಿ ನೋಡಿಕೊಂಡು ಹಣ ಬಿಡುಗಡೆ ಮಾಡುತ್ತೇವೆ. ಹಣ ಬಾಕಿ ಉಳಿದಿದ್ದು ಯಾರಿಂದ? ಬಜೆಟ್‌ನಲ್ಲಿ ಹಣ ಇಡದೇ ಟೆಂಡರ್ ಕರೆದು ಕೆಲಸ ಶುರು ಮಾಡಿದರು. ಅದಕ್ಕೆ ನಾವು ಹೊಣೆನಾ? ಗುತ್ತಿಗೆದಾರರು ಯಾರಿಗಾದರೂ ದೂರು ಕೊಡಲಿ. ನಾವು ಹಣಕಾಸು ಪರಿಸ್ಥಿತಿ ನೋಡಿಕೊಂಡು ಹಣ ಬಿಡುಗಡೆ ಮಾಡುವುದು ಎಂದು ಖಡಕ್ ಉತ್ತರ ನೀಡಿದರು. ಅಧಿಕಾರಿಗಳು ಕಮಿಷನ್ ಕೇಳುತ್ತಾರೆ ಎಂಬ ಆರೋಪ ಕುರಿತು ಮಾತನಾಡಿ, ಅಧಿಕಾರಿಗಳು ಕಮಿಷನ್ ಕೇಳಿದರೆ ಕೊಡುವುದು ಬೇಡ. ಯಾಕೆ ಕಮಿಷನ್ ಕೊಡುತ್ತೀರಾ. ಲಂಚ ತೆಗೆದುಕೊಳ್ಳುವುದು ಅಪರಾಧ. ಅದೇ ರೀತಿ ಲಂಚ ಕೊಡುವವನು ಅಪರಾಧಿನೇ. ಕಮಿಷನ್ ಯಾರು ಕೊಡಬಾರದು. ನಾನು ಇದೂವರೆಗೂ ಹಣ ಬಿಡುಗಡೆಗೆ ದುಡ್ಡು ಕೇಳಿಲ್ಲ ಎಂದು ಹೇಳಿದರು.ಬಜೆಟ್ ನಿರೀಕ್ಷೆ ವಿಚಾರದ ಬಗ್ಗೆ ಪ್ರತಿಕ್ರಿಯಿಸಿ, ಮಾ. 7ರಂದು ಬಜೆಟ್ ಮಂಡನೆ ಮಾಡುತ್ತೇವೆ. ಬಜೆಟ್ ಮಂಡನೆ ಆದ ಮೇಲೆ ನೋಡಿ. ಬಜೆಟ್ ಮಂಡನೆ ಮಾಡೋವರೆಗೂ ಅದು ಸೀಕ್ರೆಟ್ ಡಾಕ್ಯುಮೆಂಟ್ ಆಗಿರುತ್ತದೆ. ಅದರಲ್ಲಿ ಏನಿದೆ ಅಂತ ಹೇಳಲು ಆಗುವುದಿಲ್ಲ ಎಂದು ಹೇಳಿದರು.

# ರಾಜ್ಯದ ಅಭಿವೃದ್ಧಿ ವೇಗ ಚುರುಕು, ಹಣಕಾಸು ಪರಿಸ್ಥಿತಿ ಸದೃಢ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮಾ.3: ರಾಜ್ಯದ ಅಭಿವೃದ್ಧಿಯ ವೇಗವನ್ನು ಚುರುಕುಗೊಳಿಸುವುದರಲ್ಲಿ ಮತ್ತು ಹಣಕಾಸು ವ್ಯವಸ್ಥೆಯನ್ನು ಇನ್ನಷ್ಟು ಸದೃಢಗೊಳಿಸುವಲ್ಲಿ ರಾಜ್ಯ ಸರ್ಕಾರ ಯಶಸ್ವಿಯಾಗಿದೆ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಸೋಮವಾರ ಹೇಳಿದ್ದಾರೆ.ಬಜೆಟ್ ಅಧಿವೇಶನದ ಮೊದಲ ದಿನವಾದ ಇಂದು ವಿಧಾನಮಂಡಲದ ಜಂಟಿ ಅಧಿವೇಶನವನ್ನುದ್ದೇಶಿಸಿ ಭಾಷಣ ಮಾಡಿದ ರಾಜ್ಯಪಾಲರು, ಮಹಾತ್ಮಾಗಾಂಧಿಯವರು ಹೇಳಿದಂತೆ ಆಡಳಿತವನ್ನು ಅಂತಿಮ ವ್ಯಕ್ತಿಯ ಕಣ್ಣೀರು ಒರೆಸುವ ಅವಕಾಶವೆಂಬಂತೆ ಬಳಸಿಕೊಳ್ಳಲು ನನ್ನ ಸರ್ಕಾರ ಕಟಿಬದ್ಧವಾಗಿದೆ. ರಾಜ್ಯದ ಆದಾಯ ಹೆಚ್ಚುತ್ತಿದೆ. ರಾಜ್ಯಕ್ಕೆ ಖಾಸಗಿ ಬಂಡವಾಳ ದಾಖಲೆ ಪ್ರಮಾಣದಲ್ಲಿ ಹರಿದು ಬರುತ್ತಿದೆ. ಕಲ್ಯಾಣ ಕಾರ್ಯಕ್ರಮಗಳ ಸಮರ್ಪಕ ಅನುಷ್ಠಾನದಿಂದಾಗಿ ಅಸಮಾನತೆಯ ತೀವ್ರತೆ ಕಡಿಮೆಯಾಗುತ್ತಿದೆ. ವಿದೇಶಿ ಬಂಡವಾಳ ಹೂಡಿಕೆಯಲ್ಲಿ ಎರಡನೆ ಸ್ಥಾನದಲ್ಲಿದೆ. ಜಿಎಸ್‌ಟಿ ಬೆಳವಣಿಗೆ ದರ ಉತ್ತಮವಾಗಿದೆ ಎಂದರು.2024–25ನೇ ಸಾಲಿನ ಬಜೆಟ್‌ನಲ್ಲಿ ಆದೇಶ ಹೊರಡಿಸಬೇಕಾಗಿದ್ದ 344 ಘೋಷಣೆಗಳ ಪೈಕಿ 331 ಘೋಷಣೆಗಳಿಗೆ ಸರ್ಕಾರಿ ಆದೇಶ ಹೊರಡಿಸಲಾಗಿದೆ. ಘೋಷಣೆ ಮಾಡಿದ್ದ ಕಾರ್ಯಕ್ರಮಗಳೂ ಸಹ ಸಮರ್ಪಕವಾಗಿ ಅನುಷ್ಠಾನವಾಗುತ್ತಿವೆ. ಇನ್ನುಳಿದ ಘೋಷಣೆಗಳೂ ಆದೇಶ ಹೊರಡಿಸುವ ಹಂತದಲ್ಲಿವೆ ಎಂದು ಮಾಹಿತಿ ನೀಡಿದರು.ರಾಜ್ಯದಲ್ಲಿ ಉತ್ತಮ ಮಳೆಯಾಗಿದೆ. ತೀವ್ರರೂಪದ ಅತಿವೃಷ್ಟಿ ಅನಾವೃಷ್ಟಿಗಳಿಲ್ಲದ ಕಾರಣ ರೈತರ ಕೈಗೆ ಉತ್ತಮ ಫಸಲು



(2ನೇ ಪುಟ ನೋಡಿ)

# ಮಾಜಿ ಎಂಎಲ್‌ಸಿ ಅರಶದ್ ಅಲಿ ಇನ್ನಿಲ್ಲ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ.03 : ವಿಧಾನ ಪರಿಷತ್ ಮಾಜಿ ಸದಸ್ಯ ಕಾಜಿ ಅರಶದ್ ಅಲಿ (75) ನಗರದಲ್ಲಿ ಸೋಮವಾರ ಹೃದಯಾಘಾತದಿಂದನಿಧನರಾದರು. ಅವರಿಗೆ ಪತ್ನಿ, ಪುತ್ರ ಹಾಗೂ ಮೂವರು ಪುತ್ರಿಯರು ಇದ್ದಾರೆ. ಮಂಗಳವಾರ (ಮಾ.4) ಮಧ್ಯಾಹ್ನ 1.30ಕ್ಕೆ ನಗರದ ಜಾಮಿಯಾ ಮಸೀದಿಯಲ್ಲಿ ಅವರ 'ನಮಾಜ್ ಎ ಜನಾಜಾ' ನಡೆಯಲಿದೆ. ಬಳಿಕ ಭಾಲ್ಕಿಯ ಅವರ ಜಮೀನಿನಲ್ಲಿರುವ ಸ್ಮಶಾನದಲ್ಲಿ ಅಂತ್ಯಕ್ರಿಯೆ ನೆರವೇರಲಿದೆ.ಬೀದರ್ ಕೀ ಆವಾಜ್ ಹಿಂದಿ ಹಾಗೂ ಸುರ್ಖ್‌ ಝುಮೀನ್ ಉರ್ದು ದಿನಪತ್ರಿಕೆಯ ಸಂಪಾದಕರಾಗಿದ್ದ ಅವರು, ಎರಡು ಅವಧಿಗೆ ವಿಧಾನ ಪರಿಷತ್ ಸದಸ್ಯ, ಬೀದರ್ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ, ಕಾಂಗ್ರೆಸ್ ಜಿಲ್ಲಾ ಘಟಕದ ಅಧ್ಯಕ್ಷ ಸೇರಿದಂತೆ ವಿವಿಧ ಹುದ್ದೆಗಳಲ್ಲಿ ಸಮರ್ಥವಾಗಿ ಕಾರ್ಯ ನಿರ್ವಹಿಸಿದ್ದರು. ಜಿಲ್ಲೆಯ ಅಭಿವೃದ್ಧಿಗೆ ತನ್ನದೇ ಆದ ಕೊಡುಗೆ ನೀಡಿದ್ದರು.

ಕಾಜಿ ಅರಶದ್ ಅಲಿ ಅವರ ನಿಧನಕ್ಕೆ ಜಿಲ್ಲೆಯ ರಾಜಕೀಯ ಗಣ್ಯರು, ಪತ್ರಕರ್ತರು ಸೇರಿದಂತೆ ಅನೇಕರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

# ರಾಹುಲ್ ದ್ರಾವಿಡ್ ದಾಖಲೆ ಸರಿಗಟ್ಟಿದ ಕೊಹ್ಲಿ

ಮಲ್ಲಮ್ಮನುಡಿ ವಾರ್ತೆ ದುಬೈ. ಮಾ.3: ಟೀಮ್ ಇಂಡಿಯಾದ ಮಾಜಿ ನಾಯಕ ರಾಹುಲ್ ದ್ರಾವಿಡ್ ಅವರ ಹೆಸರಿನಲ್ಲಿದ್ದ ವಿಶೇಷ ದಾಖಲೆಯನ್ನು ಸರಿಗಟ್ಟುವಲ್ಲಿ ವಿರಾಟ್ ಕೊಹ್ಲಿ ಯಶಸ್ವಿಯಾಗಿದ್ದಾರೆ. ಇದರೊಂದಿಗೆ 56 ದಾಖಲೆಗಳ ಸರದಾರ ವಿರಾಟ್ ಕೊಹ್ಲಿ ಹೆಸರಿಗೆ ಮತ್ತೊಂದು ದಾಖಲೆ ಸೇರ್ಪಡೆಯಾಗಿದಂತಾಗಿದೆ.



ಆದರೆ ಈ ಬಾರಿ ದಾಖಲೆ ನಿರ್ಮಿಸಿದ್ದು ಬ್ಯಾಟ್‌ನಿಂದಲ್ಲ. ಬದಲಾಗಿ ಅದ್ಭುತ ಫೀಲ್ಡಿಂಗ್ ಮೂಲಕ ಎಂಬುದು ವಿಶೇಷ ದುಬೈನ ಇಂಟರ್‌ನ್ಯಾಷನಲ್ ಸ್ಟೇಡಿಯಂನಲ್ಲಿ ನಡೆದ ಚಾಂಪಿಯನ್ಸ್ ಟ್ರೋಫಿಯ ನ್ಯೂಝಿಲೆಂಡ್ ವಿರುದ್ಧದ ಪಂದ್ಯದಲ್ಲಿ ಅವರು ಈ ಸಾಧನೆ ಮಾಡಿದ್ದಾರೆ.

ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಟೀಮ್ ಇಂಡಿಯಾ 249 ರನ್ ಕಲೆಹಾಕಿತು. ಈ ಗುರಿಯನ್ನು ಬೆನ್ನತ್ತಿದ ನ್ಯೂಝಿಲೆಂಡ್ ಪರ 9ನೇ ಕ್ರಮಾಂಕದಲ್ಲಿ ಕಣಕ್ಕಿಳಿದ ಮ್ಯಾಟ್ ಹೆನ್ರಿ ವಿರಾಟ್ ಕೊಹ್ಲಿಗೆ ಕ್ಯಾಚ್ ನೀಡಿದ್ದರು. ಈ ಕ್ಯಾಚ್‌ನೊಂದಿಗೆ ಕಿಂಗ್ ಕೊಹ್ಲಿ ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಅತ್ಯಧಿಕ ಕ್ಯಾಚ್ ಹಿಡಿದ ಭಾರತೀಯ ಎನಿಸಿಕೊಂಡಿದ್ದಾರೆ.

ಇದಕ್ಕೂ ಮುನ್ನ ಈ ದಾಖಲೆ ಟೀಮ್ ಇಂಡಿಯಾದ ಮಾಜಿ ನಾಯಕ ರಾಹುಲ್ ದ್ರಾವಿಡ್ ಹೆಸರಿನಲ್ಲಿತ್ತು. ಭಾರತದ ಪರ 504 ಅಂತಾರಾಷ್ಟ್ರೀಯ ಪಂದ್ಯಗಳನ್ನಾಡಿರುವ ರಾಹುಲ್ ದ್ರಾವಿಡ್ ಒಟ್ಟು 333 ಕ್ಯಾಚ್‌ಗಳನ್ನು ಹಿಡಿದು ದಾಖಲೆ ನಿರ್ಮಿಸಿದ್ದರು. ಇದೀಗ ಈ ದಾಖಲೆಯನ್ನು ವಿರಾಟ್ ಕೊಹ್ಲಿ ಅಳಿಸಿ ಹಾಕಿದ್ದಾರೆ.

ಇದೀಗ ಟೀಮ್ ಇಂಡಿಯಾ ಪರ 548 ಪಂದ್ಯಗಳನ್ನಾಡಿರುವ ವಿರಾಟ್ ಕೊಹ್ಲಿ ಈವರೆಗೆ 334 ಕ್ಯಾಚ್‌ಗಳನ್ನು ಹಿಡಿದಿದ್ದಾರೆ. ಈ

(2ನೇ ಪುಟ ನೋಡಿ)

# ಪತ್ನಿಯ ಕಿರುಕುಳ ಮದುವೆಯಾಗಿ ಆರು ತಿಂಗಳಲ್ಲೆ ಪತಿ ಆತ್ಮಹತ್ಯೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.3:ಮದುವೆಯಾಗಿ ಕೇವಲ ಆರು ತಿಂಗಳಲ್ಲಿ ಪತ್ನಿಯ ಕಿರುಕುಳಕ್ಕೆ ಬೇಸತ್ತು ಪತಿ ಆತ್ಮಹತ್ಯೆ ಮಾಡಿಕೊಂಡ ಘಟನೆ ಕಲಬುರಗಿ ನಗರದ ಮಹಾದೇವ ನಗರದಲ್ಲಿ ನಡೆದಿದೆ.

ಆಳಂದ ತಾಲೂಕಿನ ನವಜಾಪುರ ಗ್ರಾಮದ ರಾಕೇಶ್ ಬಿರಾದಾರ (30) ಆತ್ಮಹತ್ಯೆಗೆ ಶರಣಾದ ವ್ಯಕ್ತಿ. ರಾಕೇಶ್ ಹಾಗೂ ಯಡ್ರಾಮಿ ತಾಲೂಕಿನ ಕುಳಗೇರಿಯ ಮೇಘಾ ಎಂಬುವಳೊಂದಿಗೆ ಆರು ತಿಂಗಳ ಹಿಂದೆ ಮದುವೆ ನಡೆದಿತ್ತು. ಈ ಮಧ್ಯೆ ಮನೆಯಲ್ಲಿ ಕೆಲಸ ಮಾಡುವ ಸಂಬಂಧ ಗಂಡ–ಹೆಂಡತಿ ಮಧ್ಯೆ ಆಗಾಗ ಮಾತಿನ ಚಕಮಕಿ ನಡೆಯುತ್ತಿತ್ತು. ಈ ಮಧ್ಯೆ ಮೇಘಾ ಹಿರಿಯ



ಸಹೋದರಿ ಪ್ರಿಯಾಂಕಾ ಹಾಗೂ ತಾಯಿ ರೇಣುಕಾ ಸಹ ಇತ್ತೀಚೆಗೆ ರಾಕೇಶ್ ಗೆ ಜೀವ ಬೆದರಿಕೆ ಹಾಕಿದ್ದಲ್ಲದೆ ತಮ್ಮ ಮಗಳಿಗೆ ಏನಾದರೂ ಆದರೆ ಪೊಲೀಸ್‌ರಿಗೆ ದೂರು ನೀಡುವುದಾಗಿ ಬೆದರಿಕೆ ಹಾಕಿದ್ದರು ಎನ್ನಲಾಗಿದೆ.

ಈ ಎಲ್ಲ ಬೆಳವಣಿಗೆಗಳ ಮಧ್ಯೆ ಎರಡು ದಿನಗಳ ಹಿಂದೆ ಹಾಲು– ಮೊಸರು ತರುವ ಸಂಬಂಧ ಗಂಡ–ಹೆಂಡತಿ ಮಧ್ಯೆ ಜಗಳ ನಡೆದಿದೆ ಎನ್ನಲಾಗಿದೆ. ಆ ಬಳಿಕ ದಂಪತಿಯ ನಡುವೆ ಏರ್ಪಟ್ಟ ವಿರಸಕ್ಕೆ ತೆರೆ ಎಳೆಯಲು ಮನೆಯ ಹಿರಿಯರು ಇಬ್ಬರಿಗೂ ಬುದ್ಧಿವಾದ ಹೇಳಿ ಒಂದುಗೂಡಿಸಿದ್ದರಾದರೂ, ದಂಪತಿ ಮಧ್ಯೆ ಬಿಗುಮಾನ ಮುಂದುವರೆದಿತ್ತು ಎಂದು ಹೇಳಲಾಗಿದೆ. ಈ ಮಧ್ಯೆ, ಇಂದು ಬೆಳಗ್ಗೆ ಗಂಡನ ವಿರುದ್ಧ ದೂರು ನೀಡುವುದಾಗಿ ಪತ್ನಿ ಮೇಘಾ ಬೆದರಿಕೆ ಹಾಕಿದ ಹಿನ್ನೆಲೆಯಲ್ಲಿ ಬೇಸತ್ತ ರಾಕೇಶ್ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ.

ಘಟನೆಯ ಹಿನ್ನೆಲೆಯಲ್ಲಿ ಪತ್ನಿ ಮೇಘಾ ಸೇರಿದಂತೆ ಮೂವರ ವಿರುದ್ಧ ಚೌಕ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

# ಹಕ್ಕಿಜ್ವರ: ಜಿಲ್ಲೆಯ ಗಡಿಭಾಗಗಳಲ್ಲಿ 13 ಚೆಕ್‌ಪೋಸ್ಟ ಕೋಳಿ ಫಾರ್ಮ ಸುತ್ತಲಿನ ಮನೆ ಮನೆ ಸಮೀಕ್ಷೆ ನಡೆಸಿ



ಮಲ್ಲಮ್ಮನುಡಿ ವಾರ್ತೆ ಬೀದರ: ಮಾ.03:ಮಹಾರಾಷ್ಟ್ರದಲ್ಲಿ ಹಕ್ಕಿಜ್ವರ ದೃಢಪಟ್ಟಿರುವ ಹಿನ್ನೆಲೆಯಲ್ಲಿ ಗಡಿಭಾಗಗಳಲ್ಲಿ 9 ಚೆಕ್‌ಪೋಸ್ಟ್ ಹಾಗೂ ಮಾರ್ಚ.3 ರಿಂದ ತೆಲಂಗಾಣ ಗಡಿಯಲ್ಲಿ 4 ಚೆಕ್‌ಪೋಸ್ಟ್‌ಗಳನ್ನು ತೆರೆಯಲಾಗಿದ್ದು ಅಧಿಕಾರಿ ಸಿಬ್ಬಂದಿ ಕೆಲಸ ನಿರ್ವಹಿಸುತ್ತಿದ್ದಾರೆ ಎಂದು ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ತಿಳಿಸಿದ್ದಾರೆ.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿಂದು ಆರೋಗ್ಯ ಇಲಾಖೆಯ ಕಾರ್ಯಕ್ರಮಗಳ ಪರಿಶೀಲನೆ ಸಭೆಯಲ್ಲಿ ಅವರು ಮಾತನಾಡುತ್ತಾ, ಬೀದರ ಜಿಲ್ಲೆಯಲ್ಲಿ ಈವರೆಗೂ ಯಾವುದೇ ಹಕ್ಕಿಜ್ವರ ಪ್ರಕರಣಗಳು ಕಂಡುಬಂದಿಲ್ಲ. ಕೋಳಿ ಫಾರ್ಮ ಮಾಲೀಕರಿಗೆ ಕಟ್ಟುನಿಟ್ಟಿನ ಸೂಚನೆಗಳನ್ನು ಪಾಲಿಸುವಂತೆ ಈಗಾಗಲೇ ಸೂಚಿಸಲಾಗಿದೆ. ಎಲ್ಲಾದರೂ ಹಠಾತ್ ಆಗಿ ಕೋಳಿಗಳು ಸಾವನ್ನಪಿದ್ದರೆ ಗಮನಕ್ಕೆ ತರುವಂತೆ

ತಿಳಿಸಲಾಗಿದೆ. ಮಹಾರಾಷ್ಟ್ರದಿಂದ ಕೋಳಿ ಹಾಗೂ ಮೊಟ್ಟೆ ಸಾಗಾಟವಾಗದಂತೆ ಚೆಕ್‌ಪೋಸ್ಟ್‌ಗಳಲ್ಲಿ ಕಟ್ಟುನಿಟ್ಟಿನ ನಿಗಾವಹಿಸುವಂತೆ ಪಶುಪಾಲನಾ ಮತ್ತು ಪಶು ವೈದ್ಯಕೀಯ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು. ಬೀದರ ಜಿಲ್ಲೆಯಲ್ಲಿ ಮಾಂಸಾಹಾರ ಪ್ರಿಯರು ಮಾಂಸ ಹಾಗೂ ಮೊಟ್ಟೆಗಳನ್ನು ಹೆಚ್ಚು ಬೇಯಿಸಿ ತಿನ್ನುವಂತೆ ತಿಳಿಸಿದರು. ಸಧ್ಯ ಸಾರ್ವಜನಿಕರು ಭಯಪಡುವ ಅಗತ್ಯವಿಲ್ಲ ಆದರೆ ಎಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕೆಂದರು.

ಆಯುಷ್ಮಮಾನಭಾರತ ಆರೋಗ್ಯ ಕರ್ನಾಟಕ ಯೋಜನೆಯಡಿ ಐದು ಲಕ್ಷದವರೆಗೆ ಉಚಿತ ಚಿಕಿತ್ಸೆ ನಿಯಮವಿದ್ದರೂ ಕೆಲ ಆಸ್ಪತ್ರೆಗಳು ರೋಗಗಳಿಂದ ಹಣ ಪಡೆಯುತ್ತಿರುವ ಪ್ರಕರಣಗಳ ಬಗ್ಗೆ ಜಿಲ್ಲಾ ಆರೋಗ್ಯ ಕುಟುಂಬ ಅಧಿಕಾರಿಗಳಾದ ಡಾ.ಜ್ಞಾನೇಶ್ವರ ನಿರಗುಡೆ ಜಿಲ್ಲಾದಿಕಾರಿಗಳ ಗಮನಕ್ಕೆ ತಂದರು. ಹಣ ಪಡೆದ ಆಸ್ಪತ್ರೆಗಳು ಹಣವನ್ನು ಮರಳಿ ರೋಗಿಗಳಿಗೆ ಸಂದಾಯ ಮಾಡುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಆರೋಗ್ಯ ಇಲಾಖೆಗಳ ಅಧಿಕಾರಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ರಾಜ್ಯಪಾಲರ ಭಾಷಣವು ಸರ್ಕಾರದ ಯಶೋಗಾಥೆ: ಈಶ್ವರ ಖಂಡ್ರೆ

ಮಲ್ಲಮ್ಮನುಡಿ ವಾರ್ತೆ ಬೀದರ. ಮಾ. 03 : ರಾಜ್ಯಪಾಲರು ಉಭಯ ಸದನ ಉದ್ದೇಶಿಸಿ ಮಾಡಿದ ಭಾಷಣ ಸರ್ಕಾರದ ಯಶೋಗಾಥೆಯಾಗಿದೆ ಎಂದು ಅರಣ್ಯ ಸಚಿವ ಈಶ್ವರ ಖಂಡ್ರೆ ಹೇಳಿದ್ದಾರೆ. ರಾಜ್ಯಪಾಲರ ಭಾಷಣಕ್ಕೆ ಸೋಮವಾರ (ಮಾ.03) ಪ್ರತಿಕ್ರಿಯೆ ನೀಡಿದ ಅವರು, ಇದು ಸರ್ಕಾರದ ಸಾಧನೆಗಳನ್ನು ಸಮರ್ಥವಾಗಿ ತೆರೆದಿಟ್ಟಿರುವುದಲ್ಲದೆ, ಹೊಸ ಯೋಜನೆಗಳ ಮೂಲಕ ರಾಜ್ಯದ ಅಭಿವೃದ್ಧಿಗೆ ದಿಕ್ಸೂಚಿಯಾಗಿದೆ ಎಂಬುದನ್ನು ಭಾಷಣ ಸ್ಪಷ್ಟವಾಗಿ ಸಾರಿದೆ ಎಂದು ಹೇಳಿದ್ದಾರೆ.



ಗ್ಯಾರಂಟಿಗಳು ಮತ್ತು ಕಲ್ಯಾಣ ಕಾರ್ಯಕ್ರಮಗಳ ಅನುಷ್ಠಾನದಿಂದ ಅಸಮಾನತೆ ತಗ್ಗಿದ್ದರೆ, ರಾಜ್ಯವನ್ನು ಒಂದು ಟ್ರಿಲಿಯನ್ ಡಾಲರ್ ಆರ್ಥಿಕ ರಾಜ್ಯ ಮಾಡುವ ನಿಟ್ಟಿನಲ್ಲಿ ಸಮಗ್ರ ಹಾಗೂ ಸಮರ್ಥ ಪ್ರಯತ್ನ ಮಾಡುವ ಸಂಕಲ್ಪ ರಾಜ್ಯದ ಜನರಲ್ಲಿ ಮತ್ತು ಹೂಡಿಕೆದಾರರಲ್ಲಿ ಹೊಸ ಹುಮ್ಮಸ್ಸು ಮೂಡಿಸಿದೆ ಎಂದು ಖಂಡ್ರೆ ಹೇಳಿದ್ದಾರೆ.

ಕಲ್ಯಾಣ ಕರ್ನಾಟಕ ಪ್ರದೇಶವೂ ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆಗಳು ಪ್ರಾದೇಶಿಕ ಅಸಮತೋಲದಿಂದ ನಲುಗಿವೆ. ಪ್ರಾದೇಶಿಕ ಅಸಮಾನತೆ ಹೋಗಲಾಡಿಸಲು 2002ರಲ್ಲಿ ರಚಿಸಲಾಗಿದ್ದ ಡಾ. ಡಿ.ಎಂ. ನಂಜುಂಡಪ್ಪ ವರದಿ ಆಧರಿಸಿ ಈವರೆಗೆ ಬಿಡುಗಡೆ ಮಾಡಲಾಗಿರುವ 37662 ಕೋಟಿ ರೂಪಾಯಿ ಬಿಡುಗಡೆ ಮಾಡಲಾಗಿದೆ. ವೆಚ್ಚ ಮಾಡಿದ ಸಂಪನ್ಮೂಲದ ಪರಿಣಾಮ ಹಾಗೂ ಮುಂದುವರಿದ

(2ನೇ ಪುಟ ನೋಡಿ)

## ಒಂದನೇ ಪುಟದಿಂದ

## ಯಶೋಗಾಥೆ: ಈಶ್ವರ ಖಂಡ್ರೆ

ಪ್ರಾದೇಶಿಕ ಅಸಮತೋಲನ ಕುರಿತು ಅಧ್ಯಯನ ಮಾಡಲು ನೇಮಕ ಮಾಡಲಾಗಿರುವ ಸಮಿತಿ ನೀಡುವ ವರದಿ ಆಧರಿಸಿ ಅಭಿವೃದ್ಧಿಗೆ ಮುಂದಾಗುವುದಾಗಿ ಘೋಷಿಸಿರುವುದು ಉತ್ತಮ ನಡೆಯಾಗಿದೆ. ವಸತಿ ಸಮಸ್ಯೆಯ ಪರಿಹಾರಕ್ಕೆ, ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ, ಯುವಜನರ ಕೌಶಲ್ಯಾಭಿವೃದ್ಧಿಗೆ ರೂಪಿಸಿರುವ ಕಾರ್ಯಕ್ರಮಗಳ ಬಗ್ಗೆಯೂ ಭಾಷಣದಲ್ಲಿ ಪ್ರಸ್ತಾಪಿಸಲಾಗಿದ್ದು, ಇದೆಲ್ಲವೂ ಯುವ ಜನರಲ್ಲಿ ಹೊಸ ಚೈತನ್ಯ ಮೂಡಿಸುವುದರ ಜೊತೆಗೆ ರಾಜ್ಯದ ಅಭಿವೃದ್ಧಿಗೆ ಪೂರಕವಾಗುತ್ತದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಅರಣ್ಯ ಇಲಾಖೆಯ ಸಾಧನೆ ಪ್ರಸ್ತಾಪಕ್ಕೆ ಸಂತಸ ರಾಜ್ಯಪಾಲರ ಭಾಷಣದಲ್ಲಿ ಅರಣ್ಯ, ಪರಿಸರ ಇಲಾಖೆಯ ಕಾರ್ಯಸಾಧನೆಯ ಪ್ರಸ್ತಾಪ ಸಂತಸ ತಂದಿದೆ. ಅರಣ್ಯ ಒತ್ತುವರಿ ತೆರವು, ಹೊಸ ಅರಣ್ಯ ಪ್ರದೇಶದ ಸೇರ್ಪಡೆ, ಬೆಂಗಳೂರಿನಲ್ಲಿ ಹೊಸದಾಗಿ 153 ಎಕರೆ ಪ್ರದೇಶದಲ್ಲಿ ಬೃಹತ್ ಉದ್ಯಾನ ನಿರ್ಮಾಣ, ಬೆಂಗಳೂರು ನಗರದಲ್ಲಿ ಹಸಿರು ವಲಯ ಸಂರಕ್ಷಿಸಲು ಮತ್ತು ಪಕ್ಷಿಗಳ ನೆಲೆ ಕಾಪಾಡಲು 5678 ಎಕರೆ ಪ್ರದೇಶವನ್ನು ಗ್ರೇಟರ್ ಹೆಸರಘಟ್ಟ ಸಂರಕ್ಷಿತ ಹುಲ್ಲುಗಾವಲು ಎಂದು ಘೋಷಿಸಿರುವುದನ್ನೂ ರಾಜ್ಯಪಾಲರು ತಮ್ಮ ಭಾಷಣದಲ್ಲಿ ಪ್ರಸ್ತಾಪಿಸಿರುವುದು ಪರಿಸರ ಸಂರಕ್ಷಣೆಯ ತಮ್ಮ ಕಾರ್ಯಕ್ಕೆ ಮತ್ತಷ್ಟು ಸ್ಫೂರ್ತಿ ತಂದಿದೆ ಎಂದು ಈಶ್ವರ ಖಂಡ್ರೆ ಹೇಳಿದ್ದಾರೆ.

## ಹಣಕಾಸು ಪರಿಸ್ಥಿತಿ ಸದೃಢ

ಸಿಕ್ಕಿದೆ. ಮುಂಗಾರು ಮತ್ತು ಹಿಂಗಾರು ಹಂಗಾಮುಗಳಿಂದ ಸುಮಾರು 149 ಲಕ್ಷ ಟನ್ನುಗಳಷ್ಟು ಕೃಷಿ ಉತ್ಪಾದನೆ ನಿರೀಕ್ಷಿಸಲಾಗಿದೆ. ಸರ್ಕಾರವು ತೆಗೆದುಕೊಂಡ ಕಲ್ಯಾಣ ಕಾರ್ಯಕ್ರಮಗಳಿಂದ ರಾಜ್ಯದ ರೈತ ಕುಟುಂಬಗಳಲ್ಲಿ ಆತ್ಮಹತ್ಯೆಗಳ ಪ್ರಮಾಣವು ಗಣನೀಯವಾಗಿ ಕಡಿಮೆಯಾಗಿದೆ. ನನ್ನ ಸರ್ಕಾರವು ರಚನೆಯಾದಾಗಿಂದಲೂ ತೊಗರಿ ಮತ್ತು ಕೊಬ್ಬರಿಗೆ ಬೆಲೆಗಳು ಕುಸಿದಾಗ ರೈತರ ನೆರವಿಗೆ ನಿಂತು ಪ್ರೋತ್ಸಾಹ ಧನವನ್ನು ನೀಡಿದೆ.

ಕೃಷಿಭಾಗ್ಯ ಯೋಜನೆಯನ್ನು ಮುಂದುವರೆಸುವ ಮೂಲಕ ಅಗತ್ಯ ಇರುವ ಕಡೆಗಳಲ್ಲೆಲ್ಲಾ ಕೃಷಿ ಹೊಂಡಗಳನ್ನು ನಿರ್ಮಿಸಲಾಗುತ್ತಿದೆ ಎಂದು ತಿಳಿಸಿದರು.ಕರ್ನಾಟಕವು ಹಾಲಿನ ಉತ್ಪಾದನೆಯಲ್ಲಿ ದಾಖಲೆ ಬರೆದಿದೆ. ಕೆಎಂಎಫ್ ಈ ಬಾರಿ ದಿನವೊಂದಕ್ಕೆ 1 ಕೋಟಿ ಲೀಟರ್‌ಗಳಷ್ಟು ಹಾಲನ್ನು ಸಂಗ್ರಹಿಸಿದೆ.

ಹೈನೋದ್ಯಮಕ್ಕೆ ನೀಡುತ್ತಿರುವ ಪ್ರೋತ್ಸಾಹದ ಕಾರಣಕ್ಕಾಗಿಯೆ ಈ ಸಾಧನೆ ಸಾಧ್ಯವಾಗಿದೆ. ಸರ್ಕಾರವು ಇದುವರೆಗೆ ಪಶುಪಾಲಕರಿಗೆ 1500 ಕೋಟಿ ರೂ.ಗಳಷ್ಟು ಪ್ರೋತ್ಸಾಹಧನ ನೀಡಿದೆ. ಸರ್ಕಾರವು ಪಶುಪಾಲಕರ ನೆರವಿಗಾಗಿ ಅನುಗ್ರಹ ಯೋಜನೆಯನ್ನು ಮುಂದುವರೆಸಿದೆ. ಪ್ರಸಕ್ತ ಸಾಲಿನಲ್ಲಿ ಆಕಸ್ಮಿಕವಾಗಿ ಮರಣ ಹೊಂದಿದ 24934 ರಾಸುಗಳು ಹಾಗೂ 33373 ಕುರಿ ಮತ್ತು ಮೇಕೆಗಳಿಗೆ 26.60 ಕೋಟಿ ರೂಪಾಯಿಗಳಷ್ಟು ಪರಿಹಾರವನ್ನು ನೀಡಿದೆ.ಸಮಾಜವು ಸೋಷಿಯಲ್ ಡಾರ್ವಿನಿಸಂ ಕಡೆಗೆ ಹೋಗಬಾರದೆಂದು ನಮ್ಮ ಹಿರಿಯರು ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಮೂಲಕ ಈ ದೇಶಕ್ಕೆ ಅತ್ಯಂತ ಮಾನವೀಯವಾದ ಸಂವಿಧಾನವನ್ನು ಕೊಟ್ಟಿದ್ದಾರೆ. ಸಂವಿಧಾನವು ಅಸಮಾನತೆಯನ್ನು ತಗ್ಗಿಸಿ ಆದಾಯದ ನ್ಯಾಯಯುತ ಪಾಲನ್ನು ಜನರಿಗೆ ಖಾತರಿಪಡಿಸಬೇಕೆಂದು ಹೇಳುತ್ತದೆ. ಈ ನಿಟ್ಟಿನಲ್ಲಿ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರಲಾಗಿದೆ. ಇದಕ್ಕಾಗಿ ವರ್ಷಕ್ಕೆ 52 ಸಾವಿರ ಕೋಟಿಗಳಿಗೂ ಹೆಚ್ಚಿನ ಸಂಪನ್ಮೂಲಗಳನ್ನು ಒದಗಿಸುತ್ತಿದೆ. ನನ್ನ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ 5 ಗ್ಯಾರಂಟಿ ಯೋಜನೆಗಳಿಗಾಗಿ ರೂ.70,000 ಕೋಟಿ ಹಣವನ್ನು ನೇರವಾಗಿ ಜನರ ಖಾತೆಗಳಿಗೆ ವರ್ಗಾಯಿಸಿದೆ ಎಂದು ತಿಳಿಸಿದರು.ಕಲ್ಯಾಣ ಕಾರ್ಯಕ್ರಮಗಳಿಗಾಗಿ ವರ್ಷಕ್ಕೆ ಒಟ್ಟಾರೆ 90 ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚಿನ ಹಣವನ್ನು ಖರ್ಚು ಮಾಡಲಾಗುತ್ತಿದೆ. ಸಾಮಾಜಿಕ ಪಿಂಚಣಿಗಳು, ರೈತರ ಪಂಪು ಸೆಟ್ಟುಗಳಿಗೆ ಉಚಿತ ವಿದ್ಯುತ್, ಕೃಷಿ-ತೋಟಗಾರಿಕೆ,

ರೇಷ್ಮೆ, ಪಶುಪಾಲನೆ, ಮೀನುಗಾರಿಕೆ, ಆಹಾರ ಮತ್ತು ನಾಗರಿಕ ಸರಬರಾಜು, ಕೈಮಗ್ಗ ಮತ್ತು ಜವಳಿ, ವಸತಿ, ಶಿಕ್ಷಣ, ಕೈಗಾರಿಕೆ, ಕೌಶಲ್ಯಾಭಿವೃದ್ಧಿ, ಹಿಂದುಳಿದ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಅಲ್ಪಸಂಖ್ಯಾತ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸೇರಿದಂತೆ ಹಲವಾರು ಇಲಾಖೆಗಳ ವತಿಯಿಂದ ನೀಡುವ ನೇರ ನಗದು ಯೋಜನೆಗಳು ಮತ್ತು ಸಬ್ಸಿಡಿ, ಪ್ರೋತ್ಸಾಹ ಧನಗಳಿಂದ ಸುಮಾರು 1.25 ಕೋಟಿಗೂ ಹೆಚ್ಚು ಕುಟುಂಬಗಳು ಅನುಕೂಲ ಪಡೆಯುತ್ತಿವೆ. ಅಭಿವೃದ್ಧಿಯಲ್ಲಿ ಕರ್ನಾಟಕದ ವಿಶಿಷ್ಟ ಮಾದರಿಯನ್ನು ಸರ್ಕಾರವು ರೂಪಿಸುತ್ತಿದೆ ಎಂದು ಅವರು ಅವರು ತಿಳಿಸಿದರು.

ಕರ್ನಾಟಕ ಮಾದರಿ ಅಭಿವೃದ್ಧಿಯೆಂದರೆ ಜನಕೇಂದ್ರಿತ ಆರ್ಥಿಕ, ಸಾಮಾಜಿಕ ಮತ್ತು ಸಾಂಸ್ಕೃತಿಕ ಆಡಳಿತವನ್ನು ರೂಪಿಸುವುದು ಎಂದರ್ಥ.

ಹಸಿರು ಇಂಧನ, ಮಹಿಳಾ ಸಬಲೀಕರಣ ಮುಂತಾದವುಗಳೂ ಇದರಲ್ಲಿ ಸೇರುತ್ತವೆ. ಕರ್ನಾಟಕದ ಮಾದರಿಯನ್ನು ಜಗತ್ತಿನ ಅನೇಕ ಅರ್ಥಶಾಸ್ತ್ರಜ್ಞರು ಮತ್ತು ವಿಶ್ವವಿದ್ಯಾಲಯಗಳು ಅಧ್ಯಯನ ಮಾಡುತ್ತಿವೆ. ಆಕ್ಸ್‌ಫರ್ಡ್ ವಿಶ್ವವಿದ್ಯಾಲಯವು ಹ್ಯೂಮನ್ ರೈಟ್ಸ್ ಹಬ್‌ನ ಬ್ಲಾಗ್‌ನಲ್ಲಿ "ಶೈನಿಂಗ್ ಎ ಲೈಟ್ ಇನ್ ದ ಡಾರ್ಕ್‌ನೆಸ್" ಎಂದು ಮತ್ತು "ಎ ಬ್ಲ್ಯೂ ಪ್ರಿಂಟ್ ಫಾರ್ ದ ವರ್ಲ್ಡ್" ಎಂದು ಈ ಮಾದರಿಯನ್ನು ವ್ಯಾಖ್ಯಾನಿಸಿವೆ. ಈ ಪ್ರಮೇಯದ ಕುರಿತು ತಿಳಿದುಕೊಳ್ಳಲು ವಿಶ್ವ ಸಂಸ್ಥೆಯ ಮುಖ್ಯಸ್ಥರೆ ರಾಜ್ಯಕ್ಕೆ ಬಂದು ನಮ್ಮ ಯೋಜನೆಗಳನ್ನು ಮುಕ್ತ ಕಂಠದಿಂದ ಶ್ಲಾಘಿಸಿದ್ದಾರೆ ಎಂದು ರಾಜ್ಯಪಾಲರು ತಿಳಿಸಿದರು.

## ದಾಖಲೆ ಸರಿಗಟ್ಟಿದ ಕೊಹ್ಲಿ

ಮೂಲಕ ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ ಅತ್ಯಧಿಕ ಕ್ಯಾಚ್ ಹಿಡಿದ ಭಾರತೀಯ ಹಾಗೂ ವಿಶ್ವದ 5ನೇ ಬೆಸ್ಟ್ ಫೀಲ್ಡರ್ ಎನಿಸಿಕೊಂಡಿದ್ದಾರೆ.ಈ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿರುವುದು ಶ್ರೀಲಂಕಾದ ಮಹೇಲ ಜಯವರ್ಧನೆ.ಅಂತಾರಾಷ್ಟ್ರೀಯ ಕ್ರಿಕೆಟ್‌ನಲ್ಲಿ 652 ಪಂದ್ಯಗಳನ್ನಾಡಿರುವ ಜಯವರ್ಧನೆ ಒಟ್ಟು 440 ಕ್ಯಾಚ್ ಗಳನ್ನು ಹಿಡಿದು ವಿಶ್ವ ದಾಖಲೆ ನಿರ್ಮಿಸಿಟ್ಟಿದ್ದಾರೆ. ಈ ದಾಖಲೆಯನ್ನು ಮುರಿಯುವುದು ಕಷ್ಟಸಾಧ್ಯ ಎಂದೇ ಹೇಳಬಹುದು.

## ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.03:ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪುರುಷೋತ್ತಮ ಬಿಳಿಮಲೆ ಅವರು ಮಾರ್ಚ್ 4 ರಂದು ಮಂಗಳವಾರ ಬೆಳಿಗ್ಗೆ 11.30 ಗಂಟೆಗೆ ಕಲಬುರಗಿಯಿಂದ ರಸ್ತೆ ಮೂಲಕ ಮಹಾರಾಷ್ಟ್ರ ರಾಜ್ಯದ ಅಕ್ಕಲಕೋಟೆಗೆ ಪ್ರಯಾಣಿಸಿ ವಾಸ್ತವ್ಯ ಮಾಡುವರು. ಮಾರ್ಚ್ 5 ರಂದು ಬುಧವಾರ ಬೆಳಿಗ್ಗೆ 9.30 ಗಂಟೆಗೆ ಅಕ್ಕಲಕೋಟೆಯಲ್ಲಿ ಕನ್ನಡ-ಮರಾಠಿ ಸಂಬಂಧ (kannada-Marathi Relation) ಕುರಿತು ಹಮ್ಮಿಕೊಳ್ಳಲಾದ ಎರಡು ದಿನಗಳ ರಾಷ್ಟ್ರೀಯ ಸಮ್ಮೇಳನದಲ್ಲಿ ಭಾಗವಹಿಸುವರು. ನಂತರ ರಾತ್ರಿ 7 ಗಂಟೆಗೆ ಅಕ್ಕಲಕೋಟೆಯಿಂದ ಬೆಂಗಳೂರಿಗೆ ಪ್ರಯಾಣಿಸುವರು.

## ಅರ್ಷದ್ ಅಲಿ ನಿಧನಕ್ಕೆ ವಾಲಿ ಸಂತಾಪ

ಬೀದರ:ಮಾ.3:ಜಿಲ್ಲಾ ಪತ್ರಿಕಾ ರಂಗದ ಭೀಷ್ಮ ಸ್ವಚ್ಛಹಸ್ತ ರಾಜಕಾರಣಿ ಮಾಜಿ ವಿಧಾನಪರಿಷತ ಸದಸ್ಯರು ಮತ್ತು ಬೀದರ ಕೀ ಆವಾಜ ದಿನ ಪತ್ರಿಕೆಯ ಸಂಪಾದಕರು ನಮ್ಮ ಮಾರ್ಗದರ್ಶಕರು ಗುರುಗಳಾದ ಹಿರಿಯ ಚೇತನ ಅಜಾತ ಶತ್ರು ಖಾಜಿ ಅರ್ಷದ್ ಅಲಿ ಅವರ ನಿಧನದ ಸುದ್ದಿ ಕೇಳಿದ ದು:ಖವಾಗಿದೆ. ಅವರ ಅಗಲಿಕೆಯಿಂದ ಪತ್ರಿಕಾ ಜಗತ್ತಿನ ಒಂದು ಸ್ತಂಭ ಕಳಚಿದಂತಾಗಿದೆ. ಬೀದರ ಜಿಲ್ಲಾ ಪತ್ರಿಕಾ ರಂಗಕ್ಕೆ ಅವರ ಅಗಲಿಕೆ ತುಂಬಲಾರದ ನಷ್ಟ.ದೇವರು ಅವರ ಕುಟುಂಬಕ್ಕೆ ಅವರ ಅಗಲಿಕೆ ಸಹಿಸಿಕೊಳ್ಳುವ ಶಕ್ತಿ ನೀಡಲೆಂದು ಪ್ರಾರ್ಥಿಸುತ್ತೇನೆ ಎಂದು ಬಾಬು ವಾಲಿ ಸಂಪಾದಕರು ವಚನಕ್ರಾಂತಿ,ಅಧ್ಯಕ್ಷರು,ಪ್ರಾದೇಶಿಕ ಪತ್ರಿಕೆಯ ಸಂಪಾದಕರ ಸಂಘ,ಮಾಜಿ ಅಧ್ಯಕ್ಷರು,ಬೀದರ ನಗರಾಭಿವೃದ್ಧಿ ಪ್ರಾಧಿಕಾರ,ಬೀದರ ತಿಳಿಸಿದ್ದಾರೆ.

## ಪಟ್ಟಣ ದಂಪತಿಗಳಿಗೆ ಕರ್ನಾಟಕ ಪ್ರೈಡ್ ಬಿಜಿನೆಸ್ ಅವಾರ್ಡ



ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರುಮಾ.03:ಬೆಂಗಳೂರಿನ ಶೇರಟನ್ ಗ್ರ್ಯಾಂಡ್ ಹೋಟೆಲ್‌ನಲ್ಲಿ ಭಾರತದ ಉದ್ಯಮಿ ದಿ. ಶ್ರೀ ರತನ್ ಟಾಟಾ ಅವರ ಸ್ಮರಣಾರ್ಥವಾಗಿ ರಾಜ್ ನ್ಯೂಸ್ ಕನ್ನಡ ಹಾಗೂ ರಾಜ್ ಮ್ಯೂಸಿಕ್ ಕನ್ನಡ ಇವರ ಸಹಭಾಗಿತ್ವದಲ್ಲಿ ಕರ್ನಾಟಕ ಪ್ರೈಡ್ ಬಿಸಿನೆಸ್ ಅವಾರ್ಡ್-2024 ಅನ್ನು ನೀಡಲಾಯಿತು.ಬೆಳಗಾವಿ ಜಿಲ್ಲೆ ರಾಮದುರ್ಗ ಪಟ್ಟಣದ ಹೆಸರಾಂತ ಉದ್ಯಮಿಗಳಾದ ಶ್ರೀ ಪ್ರದೀಪಕುಮಾರ ಪಟ್ಟಣ ಅವರ ಧರ್ಮಪತ್ನಿ ಶ್ರೀಮತಿ ಜಮುನಾ. ಪಿ. ಪಟ್ಟಣ ಅವರಿಗೆ ಕರ್ನಾಟಕ ಪ್ರೈಡ್ ಬಿಸಿನೆಸ್ ಅವಾರ್ಡ್-2024ನ್ನು ಸಭೆಯ ಮುಖ್ಯ ಅಥಿತಿಗಳಾದ ಹಾಗೂ ವಿಧಾನಸಭೆಯ ಅಧ್ಯಕ್ಷರಾದ ಶ್ರೀ ಯು.ಟಿ. ಖಾದರ್ ಇವರು ಪ್ರಶಸ್ತಿ ನೀಡಿ ಗೌರವಿಸಿದರು. ವಿಧಾನಸಭೆ ಮುಖ್ಯಸಚೇತಕರಾದ ಶ್ರೀ ಅಶೋಕ ಮಹದೇವಪ್ಪ ಪಟ್ಟಣ, ರಾಜ್ ನ್ಯೂಸ್ ಕನ್ನಡ ಹಾಗೂ ರಾಜ್ ಮ್ಯೂಸಿಕ್ ಕನ್ನಡ ವಾಹಿನಿಯವರು ಹಾಗೂ ಇತರೇ ಗಣ್ಯರು ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಉಪಸ್ಥಿತರಿದ್ದರು.

## ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.03:ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮೀ ಚೌಧರಿ ಅವರು ಮಾರ್ಚ್ 4 ರಂದು ಮಂಗಳವಾರ ಬೆಳಿಗ್ಗೆ 9 ಗಂಟೆಗೆ ಕಲಬುರಗಿಯಿಂದ ರಸ್ತೆ ಮೂಲಕ ಸಿಂಧಗಿಗೆ ಪ್ರಯಾಣಿಸಿ ನಿಗದಿತ ಕಾರ್ಯಕ್ರಮದಲ್ಲಿ ಭಾಗವಹಿಸುವರು.

ನಂತರ ಯಾದಗಿರಿ ಜಿಲ್ಲೆಯ ಸೈದಾಪುರದಿಂದ ರಸ್ತೆ ಮೂಲಕ ರಾತ್ರಿ 9.30 ಗಂಟೆಗೆ ಕಲಬುರಗಿಗೆ ಆಗಮಿಸಿ ವಾಸ್ತವ್ಯ ಮಾಡುವರು.

## ಬೋರವೆಲ್ ಚಾಲಕನಿಗೆ ಶಿಕ್ಷೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.3- ನಿರ್ಲಕ್ಷತನದಿಂದ ಅತೀ ವೇಗವಾಗಿ ಬೋರವೆಲ್ ವಾಹನ ಚಲಾಯಿಸಿ ಟಂಟಂ ವಾಹನಕ್ಕೆ ಡಿಕ್ಕಿ ಹೊಡೆಸಿ ಓರ್ವ ಮಹಿಳೆ ಸಾವಿಗೆ ಕಾರಣನಾಗಿದ್ದ ಬೋರ್‌ವೆಲ್ ವಾಹನ ಚಾಲಕನಿಗೆ 1 ವರ್ಷ ಶಿಕ್ಷೆ ಹಾಗೂ 7500 ರೂ.ಗಳ ದಂಡ ವಿಧಿಸಿ ಪ್ರಧಾನ ಜೆ.ಎಂ.ಎಫ್.ಸಿ ನ್ಯಾಯಾಲಯ ಆದೇಶ ನೀಡಿದೆ.

ಆರೋಪಿ ಬೋರವೆಲ್ ವಾಹನದ ಚಾಲಕ ಚಿದಾನಂದ ಕಬಾಡದ ಸಂಗಮ ಕ್ರಾಸ್ ಕಡೆಯಿಂದ ಬಾಗಲಕೋಟೆ ನಗರದ ಕಡೆಗೆ ಅತೀ ವೇಗವಾಗಿ ವಾಹನ ಚಲಾಯಿಸಿ ಮುಂದೆ ಹೊರಟಿದ್ದ ಪ್ಯಾಸೆಂಜರ ಟಂಟಂ ವಾಹನಕ್ಕೆ ಅಪಘಾತ ಪಡಿಸಿ ಟಂಟಂದಲ್ಲಿದ್ದ ಓರ್ವ ಮಹಿಳೆಯನ್ನು ಮರಣ ಪಡಿಸಿದ್ದಲ್ಲದೇ ಟಂಟಂ ಚಾಲಕ ಸೇರಿ ಉಳಿದ ಪ್ಯಾಸೆಂಜರ ಗಾಯಗೊಳ್ಳುವಂತೆ ಮಾಡಿದ್ದನು.

ಈ ಕುರಿತು ಬಾಗಲಕೋಟೆ ಸಂಚಾರಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು,ಪಿಎಸ್‌ಐ ಗಣಪತಿ ಕಂಗನೊಳ್ಳಿ, ಸಿಪಿಐ ಶ್ರೀಶೈಲ ಗಾಬಿ ಆರೋಪಿ ವಿರುದ್ದ ದೋಷಾರೋಪಣೆ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿದ್ದರು. ಪ್ರಕರಣದ ವಿಚಾರಣೆ ಕೈಗೊಂಡ ಬಾಗಲಕೋಟೆ ಪ್ರಧಾನ ಜೆ.ಎಂ.ಎಫ್‌ಸಿ ನ್ಯಾಯಾಲಯದ ನ್ಯಾಯಾಧೀಶ ಮುರುಗೇಂದ್ರ ತುಬಾಕೆ ಅವರು, ಆರೋಪಿಯ ವಿರುದ್ದ ಅಪರಾಧ ಸಾಬೀತಾದ ಹಿನ್ನಲೆಯಲ್ಲಿ ಆರೋಪಿಗೆ 1 ವರ್ಷ ಜೈಲು ಶಿಕ್ಷೆ ಹಾಗೂ 7500 ರೂ.ಗಳ ದಂಡ ವಿಧಿಸಿ ತೀರ್ಪು ನೀಡಿರುತ್ತಾರೆ. ಸರಕಾರದ ಪರವಾಗಿ ಸಹಾಯಕ ಸರಕಾರಿ ಅಭಿಯೋಜಕರಾದ ಶಾರದಾ ಬದಾಮಿ ವಾದ ಮಂಡಿಸಿದ್ದರು.

## ಶೌಚಾಲಯದಲ್ಲಿ ನವಜಾತ ಶಿಶು ಪತ್ತೆ

ಮಲ್ಲಮ್ಮ ನುಡಿ ವಾರ್ತೆ


ಬಾಗಲಕೋಟೆ,ಮಾ.3- ತಾಲೂಕಿನ ಕಲಾದಗಿ ಗ್ರಾಮದ ಬಸ್ ನಿಲ್ದಾಣದ ಹಿಂದಿರುವ ಶೌಚಾಲಯದಲ್ಲಿ ನವಜಾತ ಶಿಶುವೊಂದನ್ನು ಶೌಚಾಲಯದ ಮೋರೆಯಲ್ಲಿ ಎಸೆದಿರುವ ಅಮಾನೀಯ ಘಟನೆ ಸೋಮವಾರ ಕಂಡು ಬಂದಿದೆ.

ಮಧ್ಯಾಹ್ನ 4 ಗಂಟೆಯ ಹೊತ್ತಿಗೆ ಇದು ಸಾರ್ವಜನಿಕರ ಗಮನಕ್ಕೆ ಬಂದಿದ್ದು, ಕೆಲವೇ ಗಂಟೆಗಳ ಹಿಂದೆ ಈ ಶಿಶು ಜನಿಸಿತ್ತು ಎನ್ನಲಾಗುತ್ತಿದ್ದು, ಹೆಣ್ಣುಶಿಶುವನ್ನು ಶೌಚಾಲಯದ ಮೋರೆಯಲ್ಲಿ ತುರುಕಿ ಸಾಯಿಸಲಾಗಿದೆ.

ಈ ಸುದ್ದಿಯನ್ನು ಸ್ಥಳೀಯ ಪೋಲಿಸರಿಗೆ ತಿಳಿಸಲಾಗಿದ್ದು, ಪೋಲಿಸರು ಸ್ಥಳಕ್ಕೆ ಆಗಮಿಸಿ ಶಿಶುವನ್ನು ಹೊರತೆಗೆದಿದ್ದು, ಮುಂದಿನ ಕ್ರಮಕ್ಕೆ ಮುಂದಾಗಿದ್ದಾರೆ ಎಂದು ಹೇಳಲಾಗಿದೆ.

## ಎಂ.ಫಾರ್ಮಾ ಕೋರ್ಸ್: ಅಶ್ವಿನಿ, ಸಂಯುಕ್ತಾಗೆ ಬಂಗಾರ ಪದಕ





ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.3- ರಾಜೀವಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಡಿಯಲ್ಲಿ 2023-24 ನೇ ಸಾಲಿನ ವಾರ್ಷಿಕ ಪರೀಕ್ಷೆಯಲ್ಲಿ ಬಾಗಲಕೋಟೆಯ ಹಾನಗಲ್ಲ ಕುಮಾರೇಶ್ವರ ಔಷಧ ವಿಜ್ಞಾನ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಬಂಗಾರದ ಪದಕ ಪಡೆದಿದ್ದಾರೆ.

ಎಮ್.ಫಾರ್ಮಾ ಕೋರ್ಸ್(ಪಾರ್ಮಾಕಾಲಜಿ)ವಿಭಾಗದಲ್ಲಿ ಅಶ್ವಿನಿ ಹೊಸೂರ ಹಾಗೂ ಎಮ್.ಫಾರ್ಮಾ(ಪಾರ್ಮಾಸುಟಿಕ್ಸ್) ವಿಭಾಗದಲ್ಲಿ ಸಂಯುಕ್ತಾ ಬಿಲ್ ಬಂಗಾರ ಪದಕದ ಜೊತೆಗೆ ಕರ್ನಾಟಕಕ್ಕೆ ಪ್ರಥಮ ರ್‍ಯಾಂಕ್ ಗಳಿಸಿದ್ದಾರೆ.

ಎಮ್.ಫಾರ್ಮಾ ಕೋರ್ಸ್(ಪಾರ್ಮಾಕಾಲಜಿ) ವಿಭಾಗದಲ್ಲಿ ಸುಶ್ಮಾ ಕಾಗವಾಡೆ, ಸವಿತಾ ಪಾಟೀಲ ಹಾಗೂ ವಾಣಿ ಚೆಟ್ಟರ ಕ್ರಮವಾಗಿ 3, 4 ಹಾಗೂ 5ನೇ ರ್‍ಯಾಂಕ್ ಪಡೆದುಕೊಂಡಿರುತ್ತಾರೆ.

ಬಿ.ಫಾರ್ಮ 7ನೇ ಸೆಮಿಸ್ಟರನ ಶ್ರೀದೇವಿ ಕುರಿ 3ನೇ ರ್‍ಯಾಂಕ್ ಹಾಗೂ ಫಾರ್ಮ.ಡಿ 4 ನೇ ವರ್ಷದ ಚೈತನ್ಯಾ ಕುಪ್ಪಸ್ತ 10 ನೇ ರ್‍ಯಾಂಕ್ ಪಡೆದುಕೊಂಡಿರುತ್ತಾರೆ. ವಿವಿಧ ವಿಭಾಗಗಳಲ್ಲಿ ಮಹಾವಿದ್ಯಾಯದ 173 ವಿದ್ಯಾರ್ಥಿಗಳು (ವಿಷಯಾಧಾರಿತ) ರ್‍ಯಾಂಕಗಳಲ್ಲಿ ಸ್ಥಾನಪಡೆಯುವಲ್ಲಿ ಯಶಸ್ವಿಯಾಗಿ ಮಹಾವಿದ್ಯಾಲಯಕ್ಕೆ ಕೀರ್ತಿ ತಂದಿದ್ದಾರೆ ಎಂದು ಪ್ರಾಚಾರ್ಯ ಡಾ.ವೈ.ಶ್ರೀನಿವಾಸ ತಿಳಿಸಿದ್ದಾರೆ.

ಬಂಗಾರ ಪದಕ ಹಾಗೂ ರ್‍ಯಾಂಕ್ ಪಡೆದ ವಿದ್ಯಾರ್ಥಿಗಳನ್ನು ಬ.ವಿ.ವಿ.ಸಂಘದ ಕಾರ್ಯಾದ್ಯಕ್ಷ ಡಾ.ವೀರಣ್ಣ ಚರಂತಿಮಠ, ಗೌರವ ಕಾರ್ಯದರ್ಶಿ ಮಹೇಶ ಅಥಣಿ, ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷ ಮಲ್ಲಿಕಾರ್ಜುನ ಸಾಸನೂರ, ಪ್ರಾಚಾರ್ಯ ಡಾ.ವೈ.ಶ್ರೀನಿವಾಸ ಹಾಗೂ ಸಿಬ್ಬಂದಿ ವರ್ಗ ಅಭಿನಂದಿಸಿದ್ದಾರೆ.

# ಹಾನಿಕಾರಕ ಕೈಗಾರಿಕೆ ಸ್ಥಾಪಿಸ ಬೇಡಿ:

## ರಾಜ್ಯ ಸರ್ಕಾರಕ್ಕೆ ಎಚ್ ಡಿ ಕುಮಾರಸ್ವಾಮಿ ಕಿವಿಮಾತು



ಮಲ್ಲಮ ನುಡಿ ವಾರ್ತೆ

ಕೊಪ್ಪಳ:ಮಾ.3: ಪರಿಸರಕ್ಕೆ ಹಾಗೂ ಸಾಮಾನ್ಯ ಜನರಿಗೆ ಹಾನಿಕಾರಕ ಕೈಗಾರಿಕಾ ಘಟಕಗಳನ್ನು ಸ್ಥಾಪಿಸುವುದು ಉಚಿತವಲ್ಲ ಎಂದು ರಾಜ್ಯ ಸರಕಾರಕ್ಕೆ ಹೇಳಿದ್ದೇನೆ ಎಂದು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವರಾದ ಶ್ರೀ ಹೆಚ್ ಡಿ ಕುಮಾರಸ್ವಾಮಿ ಅವರು ರವಿವಾರ ಹೇಳಿದರು.

ಖಾಸಗಿ ಕಾರ್ಯಕ್ರಮಕ್ಕೆ ನಗರಕ್ಕೆ ಆಗಮಿಸಿದ್ದ ಸಚಿವರು ಮಾಧ್ಯಮದವರ ಜೊತೆಗೆ ಮಾತನಾಡಿದರು. ಕೊಪ್ಪಳ ನಗರದಲ್ಲಿ ಬಲ್ದೋಟ ಸಮೂಹದ ಉದ್ದೇಶಿತ ಉಕ್ಕು ಕಾರ್ಖಾನೆ ಸ್ಥಾಪನೆಗೆ ವ್ಯಕ್ತವಾಗಿರುವ ವಿರೋಧ ಹಾಗೂ ಶ್ರೀ ಗವಿಮಠದ ಶ್ರೀ ಗವಿಸಿದ್ದೇಶ್ವರ ಸ್ವಾಮೀಜಿಯವರ ನಿಲುವಿನ ಕುರಿತು ಕೇಳಿದ ಪ್ರಶ್ನೆಗೆ ಸಚಿವರು ಹೇಳಿದ್ದಿಷ್ಟು:" ರಾಜ್ಯ ಸರಕಾರ ಹಾಗೂ ಸ್ಥಳೀಯ ಕಂಪನಿಯೊಂದು ಒಪ್ಪಂದ ಮಾಡಿಕೊಂಡಿವೆ. ಅದು ಕೇಂದ್ರದ ಯೋಜನೆ ಅಲ್ಲ. ಈ ಒಪ್ಪಂದದ ಕುರಿತು ವ್ಯಾಪಕವಾದ ವಿರೋಧ ವ್ಯಕ್ತವಾಗಿದೆ. ಗವಿಸಿದ್ದೇಶ್ವರ ಸ್ವಾಮೀಜಿಯವರು ವಿರೋಧಿಸಿದ್ದಾರೆ. ಪರಿಸರ ಹಾಗೂ ಜನರಿಗೆ ಹಾನಿ ಉಂಟು ಮಾಡುವ ಘಟಕಗಳನ್ನು ಸ್ಥಾಪಿಸಬಾರದು. ಇದನ್ನು ರಾಜ್ಯ ಸರ್ಕಾರಕ್ಕೆ ಸ್ಪಷ್ಟವಾಗಿ ಹೇಳಿದ್ದೇನೆ. ಕೊಪ್ಪಳದಲ್ಲಿ ಕೈಗಾರಿಕಾ ಘಟಕದ ಸ್ಥಾಪನೆಯ ವಿರೋಧಕ್ಕೆ ನಮ್ಮ ಪಕ್ಷದ ಸಹಮತವೂ ಇದೆ. ರಾಜ್ಯ ಸರ್ಕಾರ ಕೊಪ್ಪಳದ ಜನತೆ ಹಾಗೂ ಸ್ವಾಮೀಜಿಯವರ ಜೊತೆ ಸಭೆ ನಡೆಸಿ ಈ ವಿಷಯದ ಕುರಿತಂತೆ ಮುಂದುವರೆಯಬೇಕು."

ರಾಜ್ಯ ಸರಕಾರ ಗ್ಯಾರಂಟಿ ಯೋಜನೆಗಳ ಬಗ್ಗೆ ಮಾತನಾಡುತ್ತಾ ಕೇಂದ್ರ ಸರಕಾರವನ್ನು ಟೀಕಿಸುತ್ತಾ ಒಂದುವರೆ ವರ್ಷ ಹಾಳು ಮಾಡಿದೆ. ಈ ಸರ್ಕಾರದಿಂದ ಹೆಚ್ಚಿನ ನಿರೀಕ್ಷೆ ಇಲ್ಲ. ರಾಜ್ಯ ಸರಕಾರದ ಬೊಕ್ಕಸದಲ್ಲಿ ಹಣವಿದೆ. ಆದರೆ ವ್ಯಾಪಕ ಪ್ರಮಾಣದ ದುರ್ಬಳಕೆಯಿಂದಾಗಿ ಅಭಿವೃದ್ಧಿ ಕೆಲಸಗಳಿಗೆ ಅನುದಾನವೇ ಇಲ್ಲ. ಕಲ್ಯಾಣ ಕರ್ನಾಟಕ ಭಾಗಕ್ಕೆ 5000 ಕೋಟಿ ರೂಪಾಯಿ ಮೀಸಲಿಡಲಾಗಿತ್ತು. ಅದರಲ್ಲಿ ಒಂದು ನಯಾ ಪೈಸಾ ಬಿಡುಗಡೆಯಾಗಿಲ್ಲ. ಕಾಂಗ್ರೆಸ್ ಸರಕಾರ ಗುತ್ತಿಗೆದಾರರಿಂದ ಹೆಚ್ಚಿನ ಕಮಿಷನ್ ವಸೂಲಿ ಮಾಡುತ್ತಿದೆ ಎಂಬ ಆರೋಪಗಳು ಇವೆ ಎಂದು ಟೀಕಿಸಿದರು.

ಮೇಕೆದಾಟು ಯೋಜನೆ ಹಾಗೂ ಚಿತ್ರ ನಗರಿ ಯೋಜನೆಗಳ ಕುರಿತಂತೆ ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರ ಹೇಳಿಕೆಗಳನ್ನು ಪ್ರಸ್ತಾಪಿಸಿದಾಗ, ರಾಜ್ಯದ ಜನತೆ ಅವರ ಪಕ್ಷಕ್ಕೆ ಅಧಿಕಾರ ನೀಡಿದ್ದಾರೆ. ಜನರ ಆಶಯದಂತೆ ಅವರು ಕೆಲಸ ಮಾಡಲಿ. ನಟ್ ಹಾಗೂ ಬೋಲ್ಟ್ ರಿಪೇರಿ ಮಾಡಲು ತಜ್ಞರಿದ್ದಾರೆ. ಅದು ಶಿವಕುಮಾರ್ ಅವರ ಕೆಲಸವಲ್ಲ ಎಂದು ವ್ಯಂಗ್ಯವಾಡಿದರು. ಅಕ್ಟೋಬರ್ ವೇಳೆಗೆ ರಾಜ್ಯ ಸರಕಾರದಲ್ಲಿ ಬದಲಾವಣೆಯಾಗಲಿದೆ ಎಂಬ ಬಿಜೆಪಿ ರಾಜ್ಯಘಟಕದ ಅಧ್ಯಕ್ಷರಾದ ಬಿ ವೈ ವಿಜಯೇಂದ್ರ ಹೇಳಿಕೆ ಕುರಿತಂತೆ ಸಚಿವರು ಹೇಳಿದ್ದು: "ಅವರು ಯಾವ ಅರ್ಥದಲ್ಲಿ ಆ ಹೇಳಿಕೆ ನೀಡಿದ್ದಾರೆಯೋ ನನಗೆ ಗೊತ್ತಿಲ್ಲ."ಈ ಸಂದರ್ಭದಲ್ಲಿ ಪಕ್ಷದ ರಾಜ್ಯ ಕೋರ್ ಕಮಿಟಿ ಸದಸ್ಯರಾದ ಸಿ ವಿ ಚಂದ್ರಶೇಖರ್, ಮಾಜಿ ಸಚಿವರಾದ ವೆಂಕಟರಾವ್ ನಾಡಗೌಡ, ಪಕ್ಷದ ರಾಜ್ಯ ಕಾರ್ಯದರ್ಶಿ ವೀರೇಶ್ ಮಹಾಂತಯ್ಯನಮಠ,ಬಿಜೆಪಿಯ ವಿಧಾನಪರಿಷತ್ ಸದಸ್ಯರಾದ ಶ್ರೀಮತಿ ಹೇಮಲತಾ ನಾಯಕ್, ಬಿಜೆಪಿ ನಾಯಕರಾದ ಡಾ. ಬಸವರಾಜ್ ಕ್ಯಾವಟರ್ ಹಾಗೂ ಎರಡು ಪಕ್ಷಗಳ ಮುಖಂಡರು ಹಾಜರಿದ್ದರು.

## ವಿದ್ಯಾರ್ಥಿಗಳ ಅಂಕಪಟ್ಟಿ ನೀಡದಿದ್ದರೆ ಅಹೋರಾತ್ರಿ ಧರಣಿ ಎಚ್ಚರಿಕೆ



ಮಲ್ಲಮ್ಮ ನುಡಿ ವಾರ್ತೆ


ಬೀದರ. ಮಾ. 03 : ಔರಾದ್‌ನ ಸರ್ಕಾರಿ ಪ್ರಥಮ ದರ್ಜೆ ಮಹಾ ವಿದ್ಯಾಲಯದಲ್ಲಿ 2023-24ನೇ ಸಾಲಿನಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳ ಅಂಕಪಟ್ಟಿ ನೀಡಲು ಆಗ್ರಹಿಸಿ ಎನ್‌ಸಿಯುಐನ ಔರಾದ್ ತಾಲೂಕ ಘಟಕದ ವತಿಯಿಂದ ಔರಾದ್ ತಹಸೀಲ್ದಾರ್ ಮೂಲಕ ಕಲಬುರಗಿ ವಿಶ್ವವಿದ್ಯಾಲಯದ ಮೌಲ್ಯ ಮಾಪನ ವಿಭಾಗದ ಕುಲಸಚಿವರಿಗೆ ಮನವಿ ಪತ್ರ ಸಲ್ಲಿಕೆ ಮಾಡಲಾಯಿತು.

ಕಲಬುರಗಿ ವಿಶ್ವವಿದ್ಯಾಲಯ ಅಡಿಯಲ್ಲಿ ನಡೆಯುತ್ತಿರುವ 2023-24ನೇ ಸಾಲಿನಲ್ಲಿ ಉತ್ತೀರ್ಣರಾದ ಬಿ.ಎ. ಮತ್ತು ಬಿ.ಎಸ್.ಸಿ. ವಿದ್ಯಾರ್ಥಿಗಳ ಅಂತಿಮ ವರ್ಷದ ಅಂಕಪಟ್ಟಿ ಸುಮಾರು ಎರಡು ವರ್ಷಗಳಾದರು ಇನ್ನುವರೆಗೆ ಸಿಕ್ಕಿಲ್ಲಾ, ವಿದ್ಯಾರ್ಥಿಗಳಿಗೆ ಅಂಕಪಟ್ಟಿ ನೀಡಬೇಕು ಇಲ್ಲದಿದ್ದಲ್ಲಿ ಮುಂಬರುವ ದಿನಗಳಲ್ಲಿ ವಿಶ್ವ ವಿದ್ಯಾಲಯದ ಮುಂದೆ ಅಹೋರಾತ್ರಿ ಧರಣಿ ಸತ್ಯಗೃಹ ಮಾಡಲಾಗುವುದು. ಸರ್ಕಾರಿ ಪ್ರಥಮ ದರ್ಜೆ ಕಾಲೇಜನ ಅವೆವಸ್ಥೆ ಸಹಿಸಲಾಗದು. ಜಿಲ್ಲಾದ್ಯಂತ ಎಲ್ಲಾ ಕಾಲೇಜು ವಿದ್ಯಾರ್ಥಿಗಳಿಗೆ

ಅಂಕಪಟ್ಟಿ ಈಗಾಗಲೇ ಸಿಕ್ಕಿದು ಕೇವಲ ಇದೆ ಕಾಲೇಜು ವಿದ್ಯಾರ್ಥಿಗಳಿಗೆ ಸಿಗದೇ ಇರುವುದು ಕಾಲೇಜ್ ಆಡಳಿತ ವ್ಯವಸ್ಥೆ ವಿಫಲವಾಗಿದೆ ಎಂದು ದಿನಗಳಲ್ಲಿ ಕಾಲೇಜಿಗೆ ಬಿಗ್ ಹಾಕಿ ಪ್ರತಿಭಟನೆ ನಡೆಸಲಾಗುವದು ಎಂದು ಎಚ್ಚರಿಕೆ ನೀಡಿದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.

# ಹಿರಿಯರನ್ನು ಪ್ರತಿಯೊಬ್ಬರೂ ಗೌರವದಿಂದ ಕಾಣಬೇಕು: ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ: ನಿರಂತರ ಸರ್ಕಾರದ ಕೆಲಸ ನಿರ್ವಹಿಸಿ ನಿವೃತ್ತರಾದವರಿಗಾಗಿಪುರಸಭೆಯ ಸಿಎ ನಿವೇಶನದಲ್ಲಿ ಪ್ರತ್ಯೇಕ ಅತಿಥಿಗೃಹ ನಿರ್ಮಾಣಕ್ಕೆ ಅನುದಾನ ನೀಡುವುದಾಗಿ ಶಾಸಕ ಡಾ. ಸಿದ್ದು ಪಾಟೀಲ ಭರವಸೆ ನೀಡಿದರು.

ಪಟ್ಟಣದ ಸರ್ಕಾರಿ ನೌಕರರ ಭವನದಲ್ಲಿ ಕರ್ನಾಟಕ ರಾಜ್ಯ ನಿವೃತ್ತ ಸರಕಾರಿ ನೌಕರರ ಸಂಘದಿಂದ 80 ವರ್ಷ ಪೂರೈಸಿದ ನಿವೃತ್ತ ನೌಕರರಿಗೆ ಸನ್ಮಾನ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಜೀವನದಲ್ಲಿ ಮುಂದುವರಿಯ ಬೇಕಾದರೆ ಹಿರಿಯರ ಆಶೀರ್ವಾದ ಬಹುಮುಖ್ಯವಾಗಿದೆ. 80 ವರ್ಷ ಪೂರೈಸಿದ ನೌಕರರಿಗೆ ಸನ್ಮಾನ ಮಾಡುತ್ತಿರುವ ಕಾರ್ಯಕ್ರಮ ತುಂಬಾ ಮೆಚ್ಚುಗೆಯಾಗಿದ್ದು, ಮುಂದಿನ ದಿನಗ ಳಲ್ಲಿ ಇಂತಹ ಕಾಯ ರ್ಕ್ರಮವೊಂದನ್ನು ದೊಡ್ಡ ಪ್ರಮಾಣದಲ್ಲಿ ಮಾಡೋಣ. ಹಿರಿಯರನ್ನು ಪ್ರತಿಯೊಬ್ಬರೂ ಗೌರವದಿಂದ ಕಾಣಬೇಕು. ಹಿರಿಯರು ಕಿರಿಯರಿಗೆ ಸೂಕ್ತ ಮಾರ್ಗದರ್ಶನ ಮಾಡಿದಲ್ಲಿ, ಸಮಾಜದಲ್ಲಿ ಎಲ್ಲರೂ ಸಂತೋಷದಿಂದ ಬದುಕಲು ಸಾಧ್ಯವಾ ಗುತ್ತದೆ ಎಂದರು. ವಿಧಾನ ಪರಿಷತ್ ಸದಸ್ಯ ಚಂದ್ರಶೇಖರ ಪಾಟೀಲ ಮಾತನಾಡಿ, ಮಕ್ಕಳಿಗೆ ಉತ್ತಮ ಶಿಕ್ಷಣ ಜತೆಗೆ ಸಂಸ್ಕಾರವನ್ನೂ ನೀಡಬೇಕು. ಇಂದು 80 ಗಡಿ ದಾಟಿದರೂ ನಿವೃತ್ತ ನೌಕರರು ಅತ್ಯಂತ ಆನಂದದಿಂದ ಜೀವನ ಕಳೆಯುತ್ತಿದ್ದಾರೆ ಎಂದರೇ ಅದರ ಹಿಂದೆ

ಹುಮನಾಬಾದ: ನಿರಂತರ ಸರ್ಕಾರದ ಕೆಲಸ ನಿರ್ವಹಿಸಿ ನಿವೃತ್ತರಾದವರಿಗಾಗಿಪುರಸಭೆಯ ಸಿಎ ನಿವೇಶನದಲ್ಲಿ ಪ್ರತ್ಯೇಕ ಅತಿಥಿಗೃಹ ನಿರ್ಮಾಣಕ್ಕೆ ಅನುದಾನ ನೀಡುವುದಾಗಿ ಶಾಸಕ ಡಾ. ಸಿದ್ದು ಪಾಟೀಲ ಭರವಸೆ ನೀಡಿದರು.

ಪಟ್ಟಣದ ಸರ್ಕಾರಿ ನೌಕರರ ಭವನದಲ್ಲಿ ಕರ್ನಾಟಕ ರಾಜ್ಯ ನಿವೃತ್ತ ಸರಕಾರಿ ನೌಕರರ ಸಂಘದಿಂದ 80 ವರ್ಷ ಪೂರೈಸಿದ ನಿವೃತ್ತ ನೌಕರರಿಗೆ ಸನ್ಮಾನ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಜೀವನದಲ್ಲಿ ಮುಂದುವರಿಯ ಬೇಕಾದರೆ ಹಿರಿಯರ ಆಶೀರ್ವಾದ ಬಹುಮುಖ್ಯವಾಗಿದೆ. 80 ವರ್ಷ ಪೂರೈಸಿದ ನೌಕರರಿಗೆ ಸನ್ಮಾನ ಮಾಡುತ್ತಿರುವ ಕಾರ್ಯಕ್ರಮ ತುಂಬಾ ಮೆಚ್ಚುಗೆಯಾಗಿದ್ದು, ಮುಂದಿನ ದಿನಗ ಳಲ್ಲಿ ಇಂತಹ ಕಾಯ ರ್ಕ್ರಮವೊಂದನ್ನು ದೊಡ್ಡ ಪ್ರಮಾಣದಲ್ಲಿ ಮಾಡೋಣ. ಹಿರಿಯರನ್ನು ಪ್ರತಿಯೊಬ್ಬರೂ ಗೌರವದಿಂದ ಕಾಣಬೇಕು. ಹಿರಿಯರು ಕಿರಿಯರಿಗೆ ಸೂಕ್ತ ಮಾರ್ಗದರ್ಶನ ಮಾಡಿದಲ್ಲಿ, ಸಮಾಜದಲ್ಲಿ ಎಲ್ಲರೂ ಸಂತೋಷದಿಂದ ಬದು ಕಲು ಸಾಧ್ಯವಾಗುತ್ತದೆ ಎಂದರು.

ಗುರು-ಹಿರಿಯರ ಎಂ.ಎಲ್.ಸಿಯಾಗಿ ಆಯ್ಕೆಯಾಗಿರುವುದರ ಆಶೀರ್ವಾದವಿದೆ. ನಾನೇ ಹಿಂದೆ ನಾನು ನನ್ನ ತಂದೆ ದಿ. ಬಸವರಾಜ ಪಾಟೀಲ್ ಅವರ ಜೀವಿತಾವಧಿಯಲ್ಲಿ ಸೇವೆ ಸಲ್ಲಿಸಿರುವುದೇ ಕಾರಣ ಎಂದರು. ವಿದ್ಯಾರ್ಥಿಗಳು ಶ್ರದ್ಧೆಯಿಂದ ಅಧ್ಯಯನ ಮಾಡಿದಾಗ ಜೀವನದಲ್ಲಿ ಉತ್ತಮ ಸ್ಥಾನಮಾನ ಪಡೆದು ಮನ್ನಣೆ ಪಡೆಯಬಹುದು. ಹಾಗೂ ಬೇರೆ ಕಡೆ ಗಮನಹರಿಸವುದನ್ನು ಬಿಟ್ಟು ವಿದ್ಯಾಭ್ಯಾಸಕ್ಕೆ ಹೆಚ್ಚಿನ ಒತ್ತು ಕೊಡಬೇಕು. ವಿದ್ಯಾರ್ಥಿಯಜೀವನ ಬಹಳ ಅತ್ಯಮೂಲ್ಯವಾಗಿದ್ದು, ಆರ್ಥಿಕವಾಗಿ ಸಬಲರಾದ ನಂತರ ನೀವು ನಿಮ್ಮ ಅಕ್ಕಪಕ್ಕದ, ಜತೆಯಲ್ಲಿರುವವರ ಕಷ್ಟಕ್ಕೆ ಸಹಾಯಹಸ್ತ ಚಾಚುವಂತೆ ತಿಳಿಸಿದರು. ವಿದ್ಯಾರ್ಥಿಗಳಾದವರು ಪರೀಕ್ಷೆ ಮುಗಿಯುವವರೆಗೆ ಮೊಬೈಲ್ ಮತ್ತು ಟಿವಿಗಳಿಂದ ದೂರವಿದ್ದು, ವಿದ್ಯಾಭ್ಯಾಸದ ಕಡೆ ಹೆಚ್ಚಿನ ಗಮನ ಹರಿಸಿ, ಕಾಲೇಜಿಗೆ ಮತ್ತು ತಂದೆ-ತಾಯಿಗೆ ಉತ್ತಮ ಹೆಸರನ್ನು ತರಬೇಕು ಎಂದು ಪಾಟೀಲ ತಿಳಿಸಿದರು. ಸಂಘದ ಜಿಲ್ಲಾಧ್ಯಕ್ಷ ನಾಗಪ್ಪ ಜಂಬಗಿ ಉದ್ಘಾಟಿಸಿದರು. ಸಂಘದ ತಾಲ್ಲೂಕು ಅಧ್ಯಕ್ಷ ರಾಜಣ್ಣ ಹುಡಗೀಕರ್ ಅಧ್ಯಕ್ಷತೆ ವಹಿಸಿದ್ದರು.

ಸಂಘದ ಜಿಲ್ಲಾ ಕಾರ್ಯದರ್ಶಿ ಎಸ್.ಬಿ.ಕುಚಬಾಳ, ತಾಲ್ಲೂಕು ಧರ್ಮಪಾಲ್ ಪೊದ್ದಾರ, ಉಪಾಧ್ಯಕ್ಷ ಭೀಮಣ್ಣ ಮರಪಳ್ಳಿ, ಕಾಶಿನಾಥರೆಡ್ಡಿ, ಪ್ರಧಾನ ಕಾರ್ಯದರ್ಶಿ ಲಕ್ಷ್ಮಣಸಿಂಗ್ ರಜಪುತ್. ಕೋಶಾಧ್ಯಕ್ಷ ವಿಠಲ್ ದೌಲಪ್ಪ, ತಾಲೂಕು ಅಧ್ಯಕ್ಷರು ಉಪಸ್ಥಿತರಿದ್ದರು. ಪ್ರೌಢಶಾಲಾ ಸಹಶಿಕ್ಷಕರ ಸಂಘದ ಹಿರಿಯ ಉಪಾಧ್ಯಕ್ಷ ವೀರಂತರೆಡ್ಡಿ ಜಂಪಾ, ಕರಾವಿಪ ಜಿಲ್ಲಾಧ್ಯಕ್ಷ 'ಸುರೇಂದ್ರನಾಥ ಹುಡಗೀಕರ್ ಅಚ್ಚುಕಟ್ಟಾಗಿ ನಿರೂಪಿಸಿದರು.

# ಮಾತೃ ಆರಾಧನೆ ಸಂಸ್ಕೃತಿಯ ಜೀವಾಳ - ಹಾರಕೂಡ ಶ್ರೀಗಳು



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಫೆ 3 ತಾಯಿಯನ್ನು ಗೌರವಿಸುವುದು, ಆರಾಧಿಸುವುದು, ಅವಳ ಸೇವೆ ಮಾಡುವುದು ನಮ್ಮ ಭಾರತೀಯ ಸಂಸ್ಕೃತಿಯ ಜೀವಾಳ ಎಂದು ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಗದಲೇಗಾಂವ ಗ್ರಾಮದ ದೇಗಾಂವ ಪರಿವಾರದ ಹೆಣ್ಣುಮಕ್ಕಳಿಂದ ಆಯೋಜಿಸಿದ ಗುರುವಂದನೆ ಹಾಗೂ 777ನೇ ತುಲಾಭಾರ ಸೇವೆ ಸಮಾರಂಭದ ಸಾನಿಧ್ಯ ವಹಿಸಿ ಮಾತನಾಡಿದ ಶ್ರೀಗಳು ಭಾರತೀಯರು ಜಗತ್ತನ್ನು ತಾಯಿಯಲ್ಲಿ ಕಂಡವರು, ತಾಯಿಯನ್ನು ಜಗತ್ತಿನಲ್ಲಿ ಕಂಡವರು ಹಾಗಾಗಿ ನೀರು ನಮಗೆ ತಾಯಿಯಾದಳು, ಭೂಮಿ ನಮಗೆ ತಾಯಿಯಾದಳು, ದೇಶ ನಮಗೆ ತಾಯಿ.

ಇಡೀ ಪ್ರಕೃತಿಯೇ ಹೆತ್ತಮ್ಮನ ರೂಪದಲ್ಲಿ ಕಂಡು ಮಾತೆಯ ಸ್ವರೂಪ ಕಂಡವರು ಭಾರತೀಯರು.

ಇಂತಹ ಶ್ರೇಷ್ಠ ಸಂಸ್ಕೃತಿಯ ವಾರಸುದಾರರು ನಾವು ಎನ್ನುವ ಹೆಮ್ಮೆ ನಮಗಿರಬೇಕು.

ದೇವರನ್ನು ಮೀರಿದ ಸ್ಥಾನದಲ್ಲಿ ತಾಯಿಯನ್ನು ಕಂಡಂತಹ ನಮ್ಮ ಸಮಾಜ ಇಂದು ಈ ವಿಷಯದಲ್ಲಿ ಗೌಣವಾಗುತ್ತಿರುವುದು ನಾಗರಿಕತೆಗೆ ಶೋಭೆ ತರುವಂತಹದಲ್ಲ.

ತಾಯಿಯನ್ನು, ಸ್ತ್ರೀಯರನ್ನು ಎತ್ತರದ ಸ್ಥಾನದಲ್ಲಿಟ್ಟು ನೋಡಿದ ಭಾರತ ಯಾವತ್ತೂ ವಿಶ್ವ ಮಾತೆ ಎಂಬುದನ್ನು ನಾವ್ಯಾರು ಅಲ್ಲಗಳೆಯುವಂತಿಲ್ಲ.

ಗದಲೇಗಾಂವ ಬಿ. ಗ್ರಾಮದ ದೇಗಾಂವ ಪರಿವಾರದ ಹೆಣ್ಣುಮಕ್ಕಳ ಗುರುನಿಷ್ಠೆ ಉಲ್ಲೇಖನೀಯವಾಗಿದ್ದು ಎಲ್ಲರಿಗೂ ಹಾರಕೂಡದ ಚನ್ನಬಸವ ಶಿವಯೋಗಿಗಳು ಶಾಶ್ವತ ಶ್ರೀರಕ್ಷೆಯ ಕೃಪೆ ಹರಸಿ ಮಂಗಳವನ್ನುಂಟು ಮಾಡಲಿ ಎಂದು ಶುಭ ಹಾರೈಸಿದರು.

ವಿಲಾಸ ಪಾಟೀಲ ಹಾಗೂ ವಿಜಯಲಕ್ಷ್ಮಿ ಬಿರಾದಾರ ಮಾತನಾಡಿದರು. ಈ ಸಂದರ್ಭದಲ್ಲಿ ಮಲ್ಲಿನಾಥ ಹಿರೇಮಠ ಹಾರಕೂಡ, ಗೋಪಾಲರಾವ ದೇಗಾಂವ, ಹೇಮಲತಾ ಹಿರೇಮಠ, ಬಾಬು ಹೊನ್ನಾ ನಾಯಕ, ಶಿವರಾಜ ಪಾಟೀಲ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಕಾರ್ತಿಕ ಸ್ವಾಮಿ ಯಲದಗುಂಡಿ ಪ್ರಾರ್ಥನಾ ಗೀತೆ. ಸಿಂಧೂ ಪಾಟೀಲ ಮತ್ತು ಬಿಂದು ಹರಸೂರ ಸಂಗೀತ. ಗುರು ದೇಗಾಂವ ಗದಲೇಗಾಂವ ಬಿ. ನಿರೂಪಿಸಿದರು.

ತಾಲ್ಲೂಕ ಪಂಚಾಯತ ಬಸವಕಲ್ಯಾಣ

## ಗ್ರಾಮ ಪಂಚಾಯತ ಕಾರ್ಯಾಲಯ, ಕಿಟ್ಟಾ ತಾ.ಬಸವಕಲ್ಯಾಣ

ಸಂಖ್ಯೆ:ಗ್ರಾಪಂ.ಕಿಟ್ಟಾ:ಉಖಾಯೋ:ದಪಪ್ರ:2024-25 ದಿನಾಂಕ : 07.01.2025

### ದರಪಟ್ಟಿಗಳ ಅಹ್ವಾನ

ವಿಷಯ :- ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಗ್ರಾಮ ಪಂಚಾಯಿತಿಯಿಂದ ಅನುಷ್ಠಾನ ಮಾಡಲಾಗುವ ವಿವಿಧ ಕಾಮಗಾರಿಗಳಿಗೆ ಅಗತ್ಯವಾದ ಸಾಮಗ್ರಿಗಳನ್ನು ಪೂರೈಕೆ ಮಾಡುವುದಕ್ಕಾಗಿ ದರಪಟ್ಟಿ ಪ್ರಕಟಣೆ ಮಾಡುವ ಕುರಿತು.

ಉಲ್ಲೇಖ :-1) ಮಾನ್ಯ ಆಯುಕ್ತರು, ಗ್ರಾಮೀಣಾಭಿವೃದ್ಧಿ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆ ಬೆಂಗಳೂರು ಇವರ ಆದೇಶ ಸಂಖ್ಯೆ:RDC-EGS/988/2022(E-970872) ದಿನಾಂಕ : 17.05.2023.

2) ಸರ್ಕಾರದ ಆದೇಶ ಸಂಖ್ಯೆ:ಆರ್.ಡಿ.ಸಿ-ಇ.ಜಿ.ಎಸ್/988/2022 ಬೆಂಗಳೂರು ದಿನಾಂಕ : 16.05.2023.

* * * *

ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗಖಾತ್ರಿ ಯೋಜನೆಯಡಿ ಗ್ರಾಮ ಪಂಚಾಯಿತಿಯಿಂದ ಅನುಷ್ಠಾನ ಮಾಡಲಾಗುವ ವಿವಿಧ ಕಾಮಗಾರಿಗಳಿಗೆ ಅಗತ್ಯವಾದ ಸಾಮಗ್ರಿಗಳನ್ನು ಪೂರೈಕೆ ಮಾಡುವುದಕ್ಕಾಗಿ ದರಪಟ್ಟಿ ಪ್ರಕಟಣೆ.

1) ದರಪಟ್ಟಿಗಳ ಆಹ್ವಾನ : ಗ್ರಾಮ ಪಂಚಾಯಿತಿ **ಕಿಟ್ಟಾ** ವತಿಯಿಂದ ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಖಾತ್ರಿ ಯೋಜನೆಯ ಕ್ರೀಯಾ ಯೋಜನೆಗಳಡಿ ಅನುಮೋದನೆಯಾದ ಗ್ರಾಮ ಪಂಚಾಯಿತಿಯಿಂದ ಅನುಷ್ಠಾನ ಮಾಡಲಾಗುವ ವಿವಿಧ ಕಾಮಗಾರಿಗಳಿಗೆ ಅಗತ್ಯವಾದ ಸಾಮಗ್ರಿಗಳನ್ನು ಪೂರೈಕೆ ಮಾಡುವುದಕ್ಕಾಗಿ ದರ ಪಟ್ಟಿ ಪ್ರಕಟಣೆ ಮಾಡಿ ಅರ್ಹ ದರಪಟ್ಟಿದಾರರಿಂದ (ಸರಬರಾಜುದಾರರು / ಏಜೆನ್ಸಿಯವರು / ಮಾರಾಟಗಾರರು / ಅರ್ಹ ಸಂಸ್ಥೆಯವರು ಇತ್ಯಾದಿ) ದರಪಟ್ಟಿಗಳನ್ನು ಪ್ರಕಟಣೆಯ ಅನುಬಂಧ-1 ರಲ್ಲಿ ದಾಖಲಿಸಲಾದ ಕಾಮಗಾರಿವಾರು ಸಾಮಗ್ರಿಗಳಿಗಾಗಿ ಮೊಹರು ಮಾಡಿದ ಲಕೋಟೆಗಳಲ್ಲಿ ಸ್ಪರ್ಧಾತ್ಮಕ ದರಪಟ್ಟಿಗಳನ್ನು ಆಹ್ವಾನಿಸಲಾಗಿರುತ್ತದೆ.

2) ದರಪಟ್ಟಿ ಪ್ರಕ್ರೀಯೆಯ ವೇಳಾಪಟ್ಟಿ :

| ಕ್ರ. ಸಂ. | ವಿವರ | ನಿಗಧಿಪಡಿಸಿದ ದಿನಾಂಕ | ಷರಾ |
|---|---|---|---|
| 01 | ದರಪಟ್ಟಿ ಫಾರ್ಮ ಮತ್ತು ಡಾಕ್ಯೂಮೆಂಟ್ ವಿತರಿಸುವ ದಿನಾಂಕ ಮತ್ತು ಸಮಯ | 07.01.2025 ದಿನಾಂಕದಿಂದ 09.01.2025 ರ ವರೆಗೆ ಗ್ರಾಮ ಪಂಚಾಯಿತಿ ಕಛೇರಿಯಲ್ಲಿ ಮತ್ತು ಕಛೇರಿ ವೇಳೆಯಲ್ಲಿ | |
| 02 | ದರಪಟ್ಟಿದಾರರ ಪೂರ್ವಭಾವಿ ಸಭೆ ದಿನಾಂಕ ಮತ್ತು ಸಮಯ | ದಿನಾಂಕ : 07.01.2025 ರಂದು ಸಮಯ : ಬೆಳಿಗೆ 11.00 ಗಂಟೆಗೆ, ಗ್ರಾಮ ಪಂಚಾಯಿತಿ ಕಛೇರಿಯಲ್ಲಿ | |
| 03 | ಮೊಹರು ಮಾಡಿದ ದರಪಟ್ಟಿ ಫಾರ್ಮ ಮತ್ತು ಇತರೆ ದಾಖಲೆಗಳನ್ನು ಸ್ವೀಕರಿಸುವ ದಿನಾಂಕ ಮತ್ತು ಸಮಯ | ದಿನಾಂಕ : 09.01.2025 ರಂದು ಸಮಯ : ಬೆಳಿಗ್ಗ 11.00 ಗಂಟೆಯಿಂದ ಅಪರಾಹ್ನ 2.00 ಗಂಟೆಯವರೆಗೆ ಗ್ರಾಮ ಪಂಚಾಯತಿ ಕಛೇರಿಯಲ್ಲಿ | |
| 04 | ಮೊಹರು ಮಾಡಿದ ದರಪಟ್ಟಿ ಲಕೋಟೆ ತೆರೆಯುವ ಸ್ಥಳ, ದಿನಾಂಕ ಮತ್ತು ಸಮಯ | ಹಾಜರಿರುವ ದರಪಟ್ಟಿದಾರರ ಸಮ್ಮುಖದಲ್ಲಿ ದಿನಾಂಕ : 09.01.2025 ರಂದು ಸಮಯ : ಅಪರಾಹ್ನ 3.00 ಗಂಟೆಗೆ, ಗ್ರಾಮ ಪಂಚಾಯಿತಿ ಕಛೇರಿಯಲ್ಲಿ | |

| ಕ್ರ. ಸಂ. | ಕಾಮಗಾರಿಗಳ ವಿವರ | ಪ್ರಮಾಣ | ಸಾಮಗ್ರಿ ಮೊತ್ತ |
|---|---|---|---|
| 1 | Constr. Of School Compound with Gate Primary School at Kitta | ಅಂದಾಜು ಪತ್ರಿಕೆಯಲ್ಲಿ ಇದ್ದಂತೆ | 422338 |
| 2 | Const. of SHG Shed Near Laxmi Temple at Gokul | ಅಂದಾಜು ಪತ್ರಿಕೆಯಲ್ಲಿ ಇದ್ದಂತೆ | 573651 |
| 3 | Const. of CD Work Near Dhanaraj Mehtre Land at Gokul | ಅಂದಾಜು ಪತ್ರಿಕೆಯಲ್ಲಿ ಇದ್ದಂತೆ | 164555 |
| 4 | Const. of CD Work Near Prakash Kalyani Land at Gokul | ಅಂದಾಜು ಪತ್ರಿಕೆಯಲ್ಲಿ ಇದ್ದಂತೆ | 164555 |
| 5 | Const. of CD Work Near Pandit Tangemnor Land at Gokul | ಅಂದಾಜು ಪತ್ರಿಕೆಯಲ್ಲಿ ಇದ್ದಂತೆ | 164555 |
| 6 | Const. of CD Work Near Shivaraj Methre Land at Gokul | ಅಂದಾಜು ಪತ್ರಿಕೆಯಲ್ಲಿ ಇದ್ದಂತೆ | 164555 |
| 7 | Diselting of Nala Pitching Nagamma Vishwanathreddy Land to Tukaram Reddy Land at Goku | ಅಂದಾಜು ಪತ್ರಿಕೆಯಲ್ಲಿ ಇದ್ದಂತೆ | 274994 |

ದರಪಟ್ಟಿಗೆ ಸಂಬಂಧಿಸಿದಂತೆ, ಯಾವುದೇ ಮಾಹಿತಿಯನ್ನು ಕಛೇರಿ ಕೆಲಸದ ವೇಳೆಯಲ್ಲಿ ಗ್ರಾಮ ಪಂಚಾಯಿತಿಯನ್ನು ಸಂಪರ್ಕಿಸಿ ಪಡೆಯಬಹುದಾಗಿರುತ್ತದೆ. ದರಪಟ್ಟಿಯನ್ನು ಸ್ವೀಕರಿಸುವ ಮತ್ತು ತಿರಸ್ಕರಿಸುವ ಅಧಿಕಾರಿ ಗ್ರಾಮ ಪಂಚಾಯಿತಿಯದ್ದಾಗಿರುತ್ತದೆ ಹಾಗೂ ಈ ದರಪಟ್ಟಿ ಪ್ರಕ್ರಿಯೆಗೆ ಸಂಬಂಧಿಸಿದಂತೆ ಗ್ರಾಮ ಪಂಚಾಯಿತಿಯ ತೀರ್ಮಾನವೇ ಅಂತಿಮ ತೀರ್ಮಾನವಾಗಿರುತ್ತದೆ.

ಸಹಿ/- ಪಂಚಾಯಿತಿ ಅಭಿವೃದ್ಧಿ ಅಧಿಕಾರಿ
ಗ್ರಾಮ ಪಂಚಾಯತಿ, ಕಿಟ್ಟಾ

# ಮನೆ ಬೀಗ ಮುರಿದು 1.45 ಲಕ್ಷ ರೂ.ಕಳವು



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.3-ಮನೆ ಬೀಗ ಮುರಿದು 1.45 ಲಕ್ಷ ರೂ.ನಗದು ಹಣ ಕಳವು ಮಾಡಿರುವ ಘಟನೆ ಬಡೇಪುರದ ಜಿಡಿಎ ಗ್ರೀನ್ ಹಿಲ್ಸ್‌ನಲ್ಲಿ ನಡೆದಿದೆ.

ಮಹ್ಮದ್ ಶರೀಫ್ ಎಂಬುವವರ ಮನೆ ಬೀಗ ಮುರಿದು ಕಳ್ಳರು 1.45 ಲಕ್ಷ ರೂ.ನಗದು ಹಣ ಕಳವು ಮಾಡಿದ್ದಾರೆ. ಈ ಸಂಬಂಧ ಅವರು ಎಂ.ಬಿ.ನಗರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದು, ತನಿಖೆ ನಡೆದಿದೆ.

# ಜೀವನ ಶ್ರೇಯಸ್ಸಿಗೆ ಸಂಸ್ಕಾರ ಸಂಸ್ಕೃತಿ ಮುಖ್ಯ: ರಂಭಾಪುರೀ ಶ್ರೀ





ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:ಸಂತಸ, ಶಾಂತಿಯ ಬದುಕಿಗೆ ಅಧ್ಯಾತ್ಮದ ಅರಿವು ಮುಖ್ಯ. ಮನುಷ್ಯ ಸಂಬಂಧಗಳು ಸಡಿಲಗೊಳ್ಳುತ್ತಿರುವ ಇಂದಿನ ದಿನಗಳಲ್ಲಿ ಆದರ್ಶ ಮೌಲ್ಯಗಳನ್ನು ಉಳಿಸಿ ಬೆಳೆಸಬೇಕಾಗಿದೆ ಎಂದು ಶ್ರೀರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಹೇಳಿದರು. ಪಟ್ಟಣದ ಶ್ರೀ ಜಗದ್ಗುರು ರೇವಣ್ಣಸಿದ್ದೇಶ್ವರ ನೂತನ ರಥೋತ್ಸವ ಉದ್ಘಾಟನಾ ಸಮಾರಂಭದ ಅಂಗವಾಗಿ ಆಯೋಜಿಸಿದ್ದ ಶ್ರೀ ಶರಣ ಬಸವೇಶ್ವರರ ಪುರಾಣ ಪ್ರವಚನ' ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು. ಮನುಷ್ಯನಲ್ಲಿ ಸಾತ್ವಿಕ ಭಾವನೆಗಳು ಬೆಳೆದು ಬರಬೇಕಾಗಿದೆ. ಧರ್ಮ ಹೇಳುವುದು ಬಲು ಸುಲಭ. ಆದರೆ, ಆಚರಿಸಿ ಪರಿಪಾಲಿಸಿಕೊಂಡು ಬರುವುದು ಕಷ್ಟ. ವೈಚಾರಿಕತೆ ಹೆಸರಿನಲ್ಲಿ ಧರ್ಮಕ್ಕೆ ಚ್ಯುತಿ ತರುವ ಪ್ರಯತ್ನ ನಡೆಯುತ್ತಿದೆ. ಮನುಷ್ಯನಲ್ಲಿ ವೈಚಾರಿಕತೆ ಮನೋಭಾವನೆ ಬೆಳೆದು ಬರಲಿ. ಆದರೆ, ಸಂಸ್ಕೃತಿ, ಆದರ್ಶಕ್ಕೆ ಆತಂಕ ತರಬಾರದು ಎಂದರು. ಕೇವಲ ಜಾತಿಗೆ ಸೀಮಿತವಾಗುವ ಜನರಿಂದ ಸಮಷ್ಠಿಪ್ರಜ್ಞೆ ಹಾಗೂ ಸಾಮರಸ್ಯ ಎಂದಿಗೂ ಬೆಳೆಯಲು ಸಾಧ್ಯವಿಲ್ಲ. ಜಾತಿಗಿಂತ ನೀತಿ, ತತ್ವಕ್ಕಿಂತ ಆಚರಣೆಗೆ ಒತ್ತು ಕೊಟ್ಟು ಜನಮನವನ್ನು ತಿದ್ದಿ ತೀಡಿದ ಕೀರ್ತಿ ಶ್ರೀ ಜಗದ್ಗುರು ರೇಣುಕಾಚಾರ್ಯರು ಹಾಗೂ ಬಸವಾದಿ ಪ್ರಮಥರಿಗೆ ಸಲ್ಲುತ್ತದೆ. ಸಮಾಜದ ಸ್ವಾಸ್ಥ್ಯ ಕಾಪಾಡಿಕೊಂಡು ಬರುವುದು ಎಲ್ಲರ ಕರ್ತವ್ಯ. ಸತ್ವಭರಿತ ಜೀವನಕ್ಕೆ ಧರ್ಮ ಪಾಲನೆ ಅವಶ್ಯಕ. ಹಣಕ್ಕಿಂತ ಗುಣ ಮನುಷ್ಯನಿಗೆ ಭೂಷಣ. ಪೂರ್ವಜರ ಆದರ್ಶ ಚಾರಿತ್ರ್ಯ ಮತ್ತು ಅವರು ತೋರಿದ ದಾರಿ ನಮ್ಮೆಲ್ಲರಿಗೆ ದಾರಿ ದೀಪವಾಗಿದೆ ಎಂದರು. ಶಾಸಕ ಡಾ. ಸಿದ್ದು ಪಾಟೀಲ್ ಮಾತನಾಡಿ, ತಾಯಿಯನ್ನು ಯಾರು ಗೌರವಿಸಿ, ಪೂಜಿಸುತ್ತಾರೋ ಅಂಥವರ ಜೀವನ ಸಾರ್ಥಕವಾಗುವುದರ ಜತೆಗೆ ಮೋಕ್ಷ ಲಭಿಸುತ್ತದೆ. ತಾಯಿಗೆ ನೋವಾಗುವಂತೆ ನಡೆದುಕೊಳ್ಳುವುದು ಮಾನವೀಯತೆಯಲ್ಲ. ತಾಯಿಯೇ ಜಗತ್ತಿನಲ್ಲಿ ಶ್ರೇಷ್ಠಳಾಗಿದ್ದಾಳೆ ಎಂದರು. ದಯವಿಟ್ಟು ನನಗೆ ಅಹಂಕಾರವನ್ನು ಎಂದಿಗೂ ನೀಡಬೇಡಿ. ನನ್ನ ಅಹಂಕಾರವನ್ನು ತೆಗೆದುಹಾಕಿ ಎಂದು ದೇವರಲ್ಲಿ ಮತ್ತು ಗುರುಗಳಲ್ಲಿ ಕೇಳಿಕೊಂಡರು. ನಿಮ್ಮೆಲ್ಲರ ಆಶೀರ್ವಾದದಿಂದ ಶಾಸಕನಾಗಿದ್ದೇನೆ ಸದಾ ನಿಮ್ಮ ಸೇವೆ ಸಲ್ಲಿಸಲು ಸಿದ್ಧನಿದ್ದೇನೆ ಎಂದರು, ದೇವಸ್ಥಾನದ ಅಭಿವೃದ್ಧಿ ತನು ಮನ ಧನದಿಂದ ಸಹಕರಿಸುತ್ತೇನೆ ಎಂದರು. ತೋಡೂಳ, ಮೆಹಕರ್ ಮಠದ ರಾಜೇಶ್ವರ ಶಿವಾಚಾರ್ಯರು, ಬೀದರ್ ದಕ್ಷಿಣ ಕ್ಷೇತ್ರದ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ, ಮಾಜಿ ಶಾಸಕ ಸುಭಾಷ ಕಲ್ಲೂರ್ ಮಾತನಾಡಿದರು. ವೇದಿಕೆ ಮೇಲೆ ಚಿಟಗುಪ್ಪ ಅಯ್ಯಪ್ಪಸ್ವಾಮಿ ಹಿರೇಮಠದ ಗುರುಲಿಂಗ ಶಿವಾಚಾರ್ಯರು, ಹುಡಗಿ ದಿಗಂಬರ ಕರಿಬಸವೇಶ್ವರ ಹಿರೇಮಠದ ವೀರುಪಾಕ್ಷ ಶಿವಾಚಾರ್ಯರು, ತಡೋಳಾ, ಮೆಹಕರ ಮಠದ ರಾಜೇಶ್ವರ ಶಿವಾಚಾರ್ಯರು, ಚಿಟಗುಪ್ಪ ಅಯ್ಯಪ್ಪಸ್ವಾಮಿ ಹಿರೇಮಠದ ಕಿರಿಯ ಶ್ರೀ ಮರುಳಾರಾಧ್ಯ ಶಿವಾಚಾರ್ಯರು, ನರನಾಳದ ಶಿವಕುಮಾರ ಶಿವಾಚಾರ್ಯರು, ಮಡಿವಾಳಯ್ಯ ಶಾಸ್ತ್ರಿ ಸೇರಿದಂತೆ ನಾನಾ ಮಠಾಧೀಶರು, ದೇವಸ್ಥಾನ ಸಮಿತಿ ಅಧ್ಯಕ್ಷ ವಿಜಯಕುಮಾರ ಬೊಮ್ಮಣಿ, ಉಪಾಧ್ಯಕ್ಷ ಶರಣಬಸಪ್ಪ ಚನ್ನೂರ್, ಕಾರ್ಯದರ್ಶಿ ಈರಪ್ಪ ಹೊಸಳ್ಳಿ, ಕೋಶಾಧ್ಯಕ್ಷ ಅಮೀತಕುಮಾರ ತೋಗಲೂರ ಸೇರಿದಂತೆ ದೇವಸ್ಥಾನ ಸಮಿತಿ ಸದಸ್ಯರು, ಪಟ್ಟಣದ ಗಣ್ಯರು, ಚಿಟಗುಪ್ಪ ಪಟ್ಟಣ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಭಕ್ತಾದಿಗಳು ಉಪಸ್ಥಿತರಿದ್ದರು. ಇದ್ದಕ್ಕೂ ಮುನ್ನ ಶ್ರೀ ಜಗದ್ಗುರು ರಂಭಾಪುರಿ ಶ್ರೀಗಳ ಅಡ್ಡ ಪಲ್ಲಕ್ಕಿ ಉತ್ಸವ ಪಟ್ಟಣದ ಗಣೇಶ್ ದೇವಸ್ಥಾನದಿಂದ ಶ್ರೀ ಜಗದ್ಗುರು ರೇವಣ್ಣಸಿದ್ದೇಶ್ವರ ದೇವಸ್ಥಾನದ ವರೆಗೆ ಅದ್ದೂರಿಯಾಗಿ ಮೆರವಣಿಗೆ ಜರುಗಿತು. ಮೆರವಣಿಗೆಯಲ್ಲಿ ತುಂಬಿದ ಕಳಶ ಹೊತ್ತ ಮಹಿಳೆಯರು, ಬಾಜಾ ಭಜಂತ್ರಿ, ಡೊಳ್ಳು, ಸೇರಿದಂತೆ ನಾನಾ ಕಲಾ ತಂಡಗಳು ಮೆರವಣಿಗೆಯಲ್ಲಿ ಭಾಗವಹಿಸಿದವು.

> ಕಳೆದ ಎರಡು ವರ್ಷಗಳ ಹಿಂದೆ ಈ ದೇವಸ್ಥಾನದ ಕಳಸರೋಹಣ ಕಾರ್ಯಕ್ರಮದಲ್ಲಿ ನನ್ನಗೆ ಅಹ್ವಾನಿಸಿದ್ದಾಗ ಕೆಲ ಮುಖಂಡರು ಅವರು ಏನು ಇದ್ದಾರೆ ಎಂದು ಕರೆಯುತ್ತಿದ್ದೀರಿ ಎಂದು ಸಮಿತಿಯವರಿಗೆ ಪ್ರಶ್ನೆ ಮಾಡಿದ್ದರು. ಅವಾಗ ನಾನು ಕೌನ್ಸಿಲರನ್ನು ಇರಲಿಲ್ಲಾ ಶಾಸಕನು ಇರಲಿಲ್ಲಾ ಮನುಷ್ಯನಿಗೆ ಅಹಂಕಾರ ಬರಬಾರದು ಇವತ್ತು ಶ್ರೀಗಳ, ದೇವರ ಮತ್ತು ಜನರ ಆಶೀರ್ವಾದಿಂದ ಶಾಸಕನಾಗಿ ಕುರ್ಚಿ ಮೇಲೆ ಕುಳಿತ್ತುಕೊಂಡಿದ್ದೇನೆ, ಯಾರು ಅಹಂಕಾರದಿಂದ ಅಂದಿದ್ದಾರೆ ಅವರು ಮನೆಯಲ್ಲಿ ಕುಳಿತುಕೊಂಡಿದ್ದಾರೆ.
>
> **-ಶಾಸಕ ಡಾ. ಸಿದ್ದು ಪಾಟೀಲ್**

# ಶರಣ ಡೋಹರ ಕಕ್ಕಯ್ಯನವರು ಶ್ರೇಷ್ಠ ಅನುಭಾವಿಗಳು



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ:- ಅನುಭವ ಮಂಟಪದಲ್ಲಿ ತಿಂಗಳ ಅನುಭವಮಂಟಪ-2 ಹಾಗೂ ಶರಣ ಡೋಹರ ಕಕ್ಕಯ್ಯನವರ ಸ್ಮರಣೋತ್ಸವ ಕಾರ್ಯಕ್ರಮ ಜರುಗಿತು. ಅನುಭವ ಮಂಟಪ ಟ್ರಸ್ಟಿನ ಅಧ್ಯಕ್ಷರಾದ ಪೂಜ್ಯಶ್ರೀ ಡಾ. ಬಸವಲಿಂಗ ಪಟ್ಟದೇವರು ದಿವ್ಯ ಸಾನಿಧ್ಯ ವಹಿಸಿ ಮಾತನಾಡಿ ವಿಶ್ವಗುರು ಬಸವಣ್ಣನವರು ಸ್ಥಾಪಿಸಿದ ಅನುಭವಮಂಟಪದಲ್ಲಿ ಹಿರಿಯ ಶರಣರಾದ ಡೋಹರ ಕಕ್ಕಯ್ಯನವರು ಇದ್ದರು. ಡೋಹರ ಕಕ್ಕಯ್ಯನವರ ಕುರಿತು ಬಸವಣ್ಣನವರು ತಮ್ಮ ಅನೇಕ ವಚನಗಳಲ್ಲಿ ಅತ್ಯಂತ ಗೌರವಪೂರ್ವಕವಾಗಿ ಸ್ಮರಿಸಿದ್ದಾರೆ. ಅಪ್ಪ, ಬೊಪ್ಪ ಎಂದು ಕೊಂಡಾಡಿದ್ದಾರೆ. ಕಕ್ಕಯ್ಯನವರು ಮಾಳವ ದೇಶದಿಂದ ಕಲ್ಯಾಣಕ್ಕೆ ಆಗಮಿಸಿ, ಶರಣರ ಜೊತೆ ಅನುಭಾವ ನಡೆಸಿ, ವಚನಗಳನ್ನು ರಚಿಸಿದರು. ಅವರು ರಚಿಸಿರುವ 6 ವಚನಗಳು ನಮಗೆ ದೊರೆಯುತ್ತವೆ. ಅವರ ವಚನಗಳಲ್ಲಿ ಶ್ರೇಷ್ಠ ಅನುಭಾವ ಅಡಗಿದೆ. 'ಅಭಿನವ ಚನ್ನಮಲ್ಲಿಕಾರ್ಜುನ' ಅವರ ವಚನಾಂಕಿತವಾಗಿದೆ. ವಚನ ಸಾಹಿತ್ಯ ರಕ್ಷಣೆಯಲ್ಲಿ ಡೋಹರ ಕಕ್ಕಯ್ಯನವರ ಬಹುದೊಡ್ಡ ಪಾತ್ರ ಇದೆ. ಕಲ್ಯಾಣದಿಂದ ಉಳವಿಯವರೆಗೆ ವಚನ ಸಾಹಿತ್ಯ ತಲುಪಿಸಲು ಕಕ್ಕಯ್ಯನವರ ಪರಾಕ್ರಮ, ತ್ಯಾಗ, ಬಲಿದಾನ ಇದೆ ಎಂಬುದು ನಾವು ಎಂದೂ ಮರೆಯಲಿಕ್ಕೆ ಸಾಧ್ಯವಿಲ್ಲ. ಅವರ ಸ್ಮರಣೆ ನಮ್ಮೆಲ್ಲರಲ್ಲಿ ವಚನಪ್ರಜ್ಞೆ ಬೆಳೆಸಲಿ ಎಂದರು. ಭಾಲ್ಕಿಯ ಪೂಜ್ಯ ಶ್ರೀ ಗುರುಬಸವ ಪಟ್ಟದ್ದೇವರು ಹಾಗೂ ಮಂಠಾಳ ವಿರಕ್ತಮಠದ ಪೂಜ್ಯ ಶ್ರೀ ಮ.ನಿ.ಪ್ರ.ಅಭಿನವ ಚನ್ನಬಸವ ಸ್ವಾಮಿಗಳು ಅಧ್ಯಕ್ಷತೆ ವಹಿಸಿ, ಆಶೀರ್ವಚನ ನೀಡಿದರು.

ಹೊಸಪೇಟೆಯ ಸಂಸ್ಕೃತಿ ಚಿಂತಕರು, ಹಿರಿಯ ಸಾಹಿತಿಗಳಾದ ಡಾ.ಶಿವಾನಂದ ಎಸ್. ಅವರು ಡೋಹರ ಕಕ್ಕಯ್ಯನವರ ಕುರಿತು ವಿಶೇಷ ಅನುಭಾವ ನೀಡಿದರು. ಕಕ್ಕಯ್ಯನವರ ವಚನಗಳನ್ನು ನಿರ್ವಚನ ಮಾಡುವ ಮೂಲಕ ಅವರ ಅನುಭಾವ ಸಭಿಕರಿಗೆ ಉಣಬಡಿಸಿದರು. ಧರ್ಮ, ಶರಣ, ವಚನ ಕುರಿತು ಅವರು ನೀಡಿರುವ ಉಪನ್ಯಾಸ ಅರ್ಥಪೂರ್ಣವಾಗಿತ್ತು. ಬಸವನಬಾಗೇವಾಡಿಯ ಬಾಲಪ್ರತಿಭೆಯಾದ ಕು. ದಿತಿ ಶಿರಶ್ಯಾಡ ಇವರು ವಚನಗಳನ್ನು ಹೇಳುವ ಮೂಲಕ ಬಸವಭಕ್ತರಲ್ಲಿ ಸಂತೋಷವನ್ನುಂಟು ಮಾಡಿದರು. ಇವರಿಗೆ ಅನುಭವಮಂಟಪ ವತಿಯಿಂದ 'ಅನುಭವಮಂಟಪ ಬಾಲಪ್ರತಿಭೆ ಪ್ರಶಸ್ತಿ' ನೀಡಿ ಪೂಜ್ಯರು ಗೌರವಿಸಿದರು. ಪೂಜ್ಯ ನಾಗಲಾಂಬಿಕಾದೇವಿ ಅವರು ಸಂಪಾದಿಸಿದ 'ಅನುಭಾವಾಮೃತ ಸರೋವರದಲ್ಲಿ' ಗ್ರಂಥ ಲೋಕಾರ್ಪಣೆ ಪೂಜ್ಯರಿಂದ ನೆರವೇರಿಯಿತು. ಶಿವಕುಮಾರ ಶಟಕಾರ, ಸುಭಾಶ ಗಾಜರೆ, ಡಾ.ಸೋಮನಾಥ ಯಾಳವಾರ, ಗುಲಾಬರಾವ ತ್ರಿಮುಖೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಎಸ್.ಎಸ್.ನಾಗರಾಳೆ ಅವರು ದಾಸೋಹ ಸೇವೆ ಸಲ್ಲಿಸಿ, ಎಲ್ಲರನ್ನು ಸ್ವಾಗತಿಸಿದರು. ಡಾ.ಸಂಗೀತಾ ಮಂಠಾಳೆ ನಿರೂಪಿಸಿದರು. ಅಶೋಕ ಕುಂಬಾರ. ಶರಣು ಸಮರ್ಪಣೆ ಮಾಡಿದರು. ವೀರಣ್ಣ ಕುಂಬಾರ, ರಾಜು ಜುಬರೆ ವಚನ ಸಂಗೀತ ನಡೆಸಿದರು.



ಹುಮನಾಬಾದ: ಸಹಕಾರಿ ಕ್ಷೇತ್ರದ ಯುನಿಯನ್ ಬ್ಯಾಂಕ್ ಜಿಲ್ಲಾಧ್ಯಕ್ಷರಾಗಿ ಆಯ್ಕೆಯಾದ ಅಭಿಷೇಕ ರಾಜಶೇಖರ ಪಾಟೀಲ ರವರನ್ನು ಮಾಣಿಕ ಪ್ರಭು ಬ್ಯಾಂಕ್ ವತಿಯಿಂದ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಅಧ್ಯಕ್ಷ ರಮೇಶರೆಡ್ಡಿ ಉಸ್ತೇಲಿ, ರಾಮರೆಡ್ಡಿ ಕಂಚೆಟ್ಟಿ, ಮೋಹನರೆಡ್ಡಿ, ರಮೇಶ ಜಾಧವ, ನಾಮದೇವ ಸೂರ್ಯವಂಶಿ, ಜೈಕಾಂತ-ರೆಡ್ಡಿ ಕೌಡಿಯಾಳ, ವಿನಾಯಕ ಧುಮಾಳೆ ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ವರ್ಧಾ ಅಪಘಾತದ ಬಗ್ಗೆ ಸಚಿವದ್ವಯರ ದಿವ್ಯ ನಿರ್ಲಕ್ಷ: ಠಾಕೂರ್ ಆರೋಪ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಮಾ.03:ಇತ್ತಿಚೀಗೆ ನಗರದ ಲಾಡಗೇರಿಯ 6 ಜನ ಸಾವಿಗೀಡಾದವರು ಹಾಗೂ 8 ಜನ ಗಾಯಾಳುಗಳನ್ನು ತರುವಲ್ಲಿ ಮುತಿವರ್ಜಿ ವಹಿಸಿದ ಉಭಯ ಸಚಿವರಾದ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹಾಗೂ ಸ್ಥಳಿಯ ಶಾಸಕರು ಹಾಗೂ ರಾಜ್ಯದ ಪೌರಾಡಳಿತ ಸಚಿವ ರಹಿಮ್ ಖಾನ್ ವರ್ಧಾ ಘಟನೆ ಬಗ್ಗೆ ಇಲ್ಲಿಯ ವರೆಗೆ ಒಂದು ಸಿಂಗಲ್ ಹೇಳಿಕೆ ನೀಡದೇ, ಅವರನ್ನು ಸ್ವಜಿಲ್ಲೆಗೆ ಕರೆ ತರುವಲ್ಲಿ ದಿವ್ಯ ನಿರ್ಲಕ್ಷ ತೋರುತ್ತಿದ್ದಾರೆ ಎಂದು ಬಿಜೆಪಿ ಸ್ಥಳಿಯ ಮುಖಂಡರಾದ ಈಶ್ವರಸಿಂಗ್ ಠಾಕೂರ್ ಹೇಳಿದರು. ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸೋಮವಾರ ಸುದ್ದಿ ಗೋಷ್ಟಿ ಉದ್ದೇಶಿಸಿ ಮಾತನಾಡಿದ ಅವರು, ಲಾಡಗೇರಿ ಘಟನೆಯಲ್ಲಿ ಪ್ರಾಣ ಕಳೆದುಕೊಂಡವರು ಹಾಗೂ ಗಾಯಗೊಂಡವರು ನಮ್ಮವರೆ. ಅವರನ್ನು ಏರ್ಲಿಫ್ಟ್ ಮಾಡಿ ತಂದಿದ್ದು ಸಂತೋಷ. ಆದರೆ ವರ್ಧಾ ಬಳಿ ಅಪಘಾತಕ್ಕೊಳಗಾದವರು ಸಹ ನಮ್ಮ ಜಿಲ್ಲೆಯವರೆ. ಹೀಗಿರುವಾಗ ಅವರ ಬಗ್ಗೆ ಎಳ್ಳಷ್ಟು ಕಾಳಜಿ ವಹಿಸದೆ ಸಚಿವದ್ವಯರು ಸಾವಿನ ಮನೆಯಲ್ಲಿ ರಾಜಕೀಯ ಮಾಡಲು ಹೊರಟಿದ್ದಾರೆ ಎಂದು ಹರಿಹೈದರು.

ಲಾಡಗೇರಿ ವಿಚಾರವಾಗಿ ತಾನು ಮೊದಲು ಗಾಯಾಳುಗಳು ಹಾಗೂ ಮೃತರ ಮನೆಗಳಿಗೆ ಭೇಟಿ ನೀಡಿದಾಗ ಇಬ್ಬರು ಸಚಿವರು ಸ್ಪರ್ಧೆ ಎಂಬಂತೆ ಎರಡೆರಡು ಬಾರಿ ಭೇಟಿ ನೀಡಿದರು ಸಂತೋಷ. ಸಾಲದೆಂಬಂತೆ ಪ್ರತ್ಯೇಕ ಸುದ್ದಿ ಸಹ ವ್ಯಕ್ತವಾಯಿತು. ಆದರೆ ಈ ಗಾಯಾಳುಗಳು ಬೀದರ್ ಜಿಲ್ಲೆಗೆ ಸಂಬಂಧಪಟ್ಟವರಿಲ್ಲವೆ? ಎಂದು ಪ್ರಶ್ನೆ ಮಾಡಿದರು.

ಫೆಬ್ರವರಿ ತಿಂಗಳ 25ರಂದು ಬೆಳಿಗ್ಗೆ 6 ಗಂ–ಟೆಗೆ ಕುಂಭಮೇಳದಿಂದ ಸ್ವಜಿಲ್ಲೆಗೆ ಬರುತ್ತಿದ್ದ 14 ಜನ ಯಾತ್ರಾರ್ಥಿಗಳು ಮಹಾರಾಷ್ಟ್ರ ರಾಜ್ಯದ ನಾಗಪುರ ಬಳಿ ಇರುವ ವರ್ಧಾ ಬಳಿ ಅಪಘಾತಕ್ಕೊಳಗಾಗಿದ್ದು ಈಗಾಗಲೇ ಅದರಲ್ಲಿ ಭಾನುವಾಡ ಜನವಾಡ ಗ್ರಾಮದವರಾದ ಓರ್ವ ದಿಲೀಪ ಕಾಳೇಕರ್ ಸಾವಿಗೀಡಾಗಿದ್ದಾರೆ. ಕಲಬುರಗಿಯ ಒಬ್ಬರು ಹಾಗೂ ಬೀದರ್ ಜಿಲ್ಲೆಯ 12 ಜನ ಯಾತ್ರಾರ್ಥಿಗಳು ಗಾಯಗೊಂಡಿ–ದ್ದಾರೆ. ಅದರಲ್ಲಿ ಅರುಣಾ ಕಾಳೇಕರ್ ಹಾಗೂ ಪ್ರಕಾಶ ತಾಂದಳೆ ತುಂಬ ಚಿಂತಾಜನಕ ಸ್ಥಿತಿಯಲ್ಲಿದ್ದಾರೆ. ಈ ಎಲ್ಲ ಗಾಯಾಳುಗಳು ಆರ್ಥಿಕವಾಗಿ ತುಂಬ ಬಡವರು. ಅಲ್ಲಿಯ ಖಾಸಗಿ ಆಸ್ಪತ್ರೆಯಲ್ಲಿ ಅಷ್ಟೊಂದು ಹಣ ಕಟ್ಟಲು ಸಾಧ್ಯವಾಗುತ್ತಿಲ್ಲ. ಈಗಾಗಲೇ ಸಾವಿಗೀಡಾದ ದಿಲೀಪ ಕಾಳೇಕರ್ ಅವರ ಪಾರ್ಥಿವ ಶರೀರ ಸ್ವಗ್ರಾಮಕ್ಕೆ ತರುವಲ್ಲಿ ಜಿಲ್ಲಾಡಳಿತ ತೆ–ೂರಿದ ಸಹಕಾರಕ್ಕೆ ಕೃತಜ್ಞತೆ ಸಲ್ಲಿಸುವುದಾಗಿ ತಿಳಿಸಿದರು.

ಕಳೆದ ಎಂಟು ದಿನಗಳಿಂದ ಗಾಯಾಳುಗಳು ಅಲ್ಲಿಯ ಉಳಿದುಕೊಂಡಿದ್ದು ಸ್ವಜಿಲ್ಲೆಗೆ ಕರೆದುಕೊಂಡು ಹೋಗಲು ಅಂಗಲಾಚುತ್ತಿದ್ದಾರೆ. ಅದರಲ್ಲಿ ಕೆಲವರಿಗೆ ತುರ್ತು ಶಸ್ತ್ರ ಚಿಕಿತ್ಸೆ ಅಗತ್ಯವಿದೆ. ಅವರಲ್ಲಿ ಅಷ್ಟೊಂದು ಹಣ ಇಲ್ಲ. ಹಾಗಾಗಿ ಜಿಲ್ಲಾಡಳಿತ ಕೂಡಲೇ ಆ 12 ಜನ ಗಾಯಾಳುಗಳನ್ನು ಅಂಬ್ಯುಲೆನ್ಸ್ ಮುಖೇನ ಬ್ರಿಮ್ಸ್ ತಂದು ಚಿಕಿತ್ಸೆ ಮುಂದುವರೆಸಬೇಕೆಂದು ಕೋರಿದರು. ಅಲ್ಲದೆ ಮೃತರ ಕುಟುಂಬದವರಿಗೆ 5 ಲಕ್ಷ ಪರಿಹಾರ ನೀಡಬೇಕು, ಗಾಯಾಳುಗಳಿಗೆ ತಲಾ 2 ಲಕ್ಷ ಪರಿಹಾರ ನೀಡಬೇಕೆಂದು ಠಾಕೂರ್ ಆಗ್ರಹಿಸಿದರು.

ಭಾವಸಾರ ಕ್ಷೇತ್ರಿಯ ಸಮಾಜದ ಜಿಲ್ಲಾಧ್ಯಕ್ಷ ಸಂಜಯ ಘನಾತೆ, ಉಪಾಧ್ಯಕ್ಷ ಪ್ರವಿಣ ಸೂರ್ಯನ್, ಕಾರ್ಯದರ್ಶಿ ಸತ್ಯಪ್ರಕಾಶ ಮಹೇಂದ್ರಕರ್, ಕೋಶಾಧ್ಯಕ್ಷ ರಮೇಶ ದೇವತರಾಜ ಪತ್ರಿಕಾಗೋಷ್ಟಿಯಲ್ಲಿದ್ದರು.

# ರೇಣುಕಾಚಾರ್ಯ ಜಯಂತ್ಯುತ್ಸವ ಅದ್ಧೂರಿ ಆಚರಣೆಗೆ ನಿರ್ಧಾರ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಮಾ.3:ಜಗದ್ಗುರು ರೇಣುಕಾಚಾರ್ಯರ ಜಯಂತ್ಯುತ್ಸವವನ್ನು ನಗರದಲ್ಲಿ ಮಾರ್ಚ್ 12 ರಂದು ಅದ್ಧೂ–ರಿಯಾಗಿ ಆಚರಿಸಲು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಹಾಗೂ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತ್ಯುತ್ಸವ ಆಚರಣೆ ಸಮಿತಿ ನಿರ್ಧರಿಸಿವೆ. ನಗರದ ಪಾಪನಾಶ ದೇವಸ್ಥಾನದ ಸಭಾ ಭವನದಲ್ಲಿ ಭಾನುವಾರ ನಡೆದ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಈ ಕುರಿತು ಒಕ್ಕೊರಲ ನಿರ್ಣಯ ಕೈಗೊಳ್ಳಲಾಯಿತು. ರೇಣುಕಾಚಾರ್ಯರು ಮಾನವ ಕಲ್ಯಾಣಕ್ಕೆ ಶ್ರಮಿಸಿದ್ದರು. ಜನರಿಗೆ ಮುಕ್ತಿಯ ಮಾರ್ಗ ತೋರಿದ್ದರು. ಜಿಲ್ಲಾಡಳಿತದೊಂದಿಗೆ ಸರ್ವ ಸಮಾಜದವರು ಸೇರಿ ಅವರ ಜಯಂತ್ಯುತ್ಸವವನ್ನು ಸಂಭ್ರಮದಿಂದ ಆಚರಿಸಲು ತೀರ್ಮಾನಿಸಲಾಗಿದೆ ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾ ಘಟಕದ ಅಧ್ಯಕ್ಷ ವೈಜಿನಾಥ ಕಮಠಾಣೆ ಹೇಳಿದರು. ಬೀದರ್ ಧರ್ಮ ಸಮನ್ವಯತೆಗೆ ಹೆಸರಾಗಿದೆ. ಈವರೆಗೆ ಒಗ್ಗೂಡಿ ಮಹಾತ್ಮರ ಜಯಂತಿಗಳನ್ನು ಆಚರಿಸುತ್ತಾ ರಾಜ್ಯಕ್ಕೆ ಉತ್ತಮ ಸಂದೇಶ ನೀಡಿದೆ ಎಂದು ತಿಳಿಸಿದರು. ಜಯಂತ್ಯುತ್ಸವದ ಯಶಸ್ವಿಗೆ ಸ್ವಾಗತ ಹಾಗೂ ವಿವಿಧ ಉಪ ಸಮಿತಿಗಳನ್ನು ರಚಿಸಿ, ಸರ್ವ ಸಮಾಜದವರು ಹಾಗೂ ಜಿಲ್ಲಾ ಆಡಳಿತ ಸಿದ್ಧತಾ ಕಾರ್ಯಗಳಲ್ಲಿ ತೊಡಗಬೇಕಾಗಿದೆ ಎಂದು ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತ್ಯುತ್ಸವ ಆಚರಣೆ ಸಮಿತಿಯ ಪ್ರಧಾನ ಕಾರ್ಯದರ್ಶಿ ಶಿವಯ್ಯ ಸ್ವಾಮಿ ಹೇಳಿದರು.ಮಾ. 12 ರಂದು ಬೆಳಿಗ್ಗೆ 10ಕ್ಕೆ ಜಿಲ್ಲಾಧಿಕಾರಿ ಕಚೇರಿಯಿಂದ ಪ್ರಮುಖ ಬೀದಿಗಳ ಮೂಲಕ ಪೂಜ್ಯ ಚನ್ನಬಸವ ಪಟ್ಟದ್ದೇವರು ರಂಗಮಂದಿರದ ವರೆಗೆ ಅಲಂಕೃತ ರಥದಲ್ಲಿ ರೇಣುಕಾಚಾರ್ಯರ ಭಾವಚಿತ್ರದ ವೈಭವಯುತ ಮೆರವಣಿಗೆ ನಡೆಯಲಿದೆ. ಬಳಿಕ ವೇದಿಕೆ ಸಮಾರಂಭ ಜರುಗಲಿದೆ ಎಂದು ತಿಳಿಸಿದರು. ಜಯಂತ್ಯುತ್ಸವ ಅರ್ಥಪೂರ್ಣವಾಗಿ ಆಚರಿಸಲು ಎಲ್ಲರೂ ಕೈಜೋಡಿಸಬೇಕು ಎಂದು ಕಲ್ಯಾಣ ಕರ್ನಾಟಕ ಜಂಗಮಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಸಿದ್ರಾಮಯ್ಯ ಸ್ವಾಮಿ ಹೇಳಿದರು. ರೇಣುಕಾಚಾರ್ಯರ ಭಾವಚಿತ್ರದ ಮೆರವಣಿಗೆಯಲ್ಲಿ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಜಯಂತ್ಯುತ್ಸವ ಆಚರಣೆ ಸಮಿತಿಯ ಖಜಾಂಚಿ ರವೀಂದ್ರ ಸ್ವಾಮಿ ತಿಳಿಸಿದರು.ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಜಿಲ್ಲಾ ಯುವ ಘಟಕದ ಅಧ್ಯಕ್ಷ ಸಂಗಮೇಶ ಮೂಲಗೆ, ಡಾ. ಬಂಡಯ್ಯ ಸ್ವಾಮಿ, ಮುಖಂಡರಾದ ಗಂಗಾಧರ ಸ್ವಾಮಿ, ಮಹೇಶ ಪಾಟೀಲ, ವರದಯ್ಯ ಸ್ವಾಮಿ, ರಾಜಕುಮಾರ ಸ್ವಾಮಿ ಬಂಪಳ್ಳಿ, ಮಹಾಂತಯ್ಯ ಸ್ವಾಮಿ, ರೇವಣಸಿದ್ದಯ್ಯ ಸ್ವಾಮಿ, ಶಿವಕುಮಾರ ಹಿರೇಮಠ, ಪ್ರವೀಣ್ ಸ್ವಾಮಿ, ನಾಗಯ್ಯ ಸ್ವಾಮಿ, ಶಿವಶಂಕರ ಬೆಳಮಗಿ, ಸಂಜು ಸ್ವಾಮಿ ಇದ್ದರು.

ವಿವಿಧ ಸಮಾಜಗಳ ಪ್ರತಿನಿಧಿಗಳು ಪಾಲ್ಗೊಂಡಿದ್ದರು.

# ಹಂಪಿ ಉತ್ಸವದಲ್ಲಿ ಬೀದರ್ ತಂಡದ ವಚನ ನೃತ್ಯ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 03 : ಹಂಪಿಯಲ್ಲಿ ಶನಿವಾರ ನಡೆದ 'ಹಂಪಿ ಉತ್ಸವ'ದಲ್ಲಿ ಬೀದರನ ಕಲಾವಿದ ಪೂರ್ಣಚಂದ್ರ ಮೈನಾಳೆ ಸಾರಥ್ಯದ ನೃತ್ಯಾಂಗನ ನಾಟ್ಯ ಮತ್ತು ಕಲಾ ಕೇಂದ್ರದ ತಂಡ ಆಕರ್ಷಕ ವಚನ ನೃತ್ಯ ಪ್ರದರ್ಶಿಸಿ ಪ್ರೇಕ್ಷಕರ ಮೆಚ್ಚುಗೆ ಗಳಿಸಿತು.

ಕಲಾವಿದರಾದ ಸುಷ್ಮಾ ಪಾವಡಶೆಟ್ಟಿ, ಬಸವ ಸೌರಭ, ಅನ್ವಿ ಪಾಟೀಲ, ಸ್ವಾತಿ, ಆರಾಧ್ಯ, ಆದ್ಯಾ, ವೈಷ್ಣವಿ, ಶ್ರದ್ಧಾ ಅವರನ್ನು ಒಳಗೊಂಡ ತಂಡದ ವಚನ ನೃತ್ಯವು ಸಭಿಕರನ್ನು ಮಂತ್ರಮುಗ್ಧಗೊಳಿಸಿತು.

ನೃತ್ಯಾಂಗನ ನಾಟ್ಯ ಮತ್ತು ಕಲಾ ಕೇಂದ್ರದ ತಂಡವು ಹಂಪಿ ಉತ್ಸವಕ್ಕೆ ಆಯ್ಕೆಯಾದ ಬೀದರ್ ಜಿಲ್ಲೆಯ ಏಕೈಕ ತಂಡವಾಗಿತ್ತು.

ಪ್ರಖ್ಯಾತ ಹಂಪಿ ಉತ್ಸವದಲ್ಲಿ ಕಲಾ ಪ್ರದರ್ಶನಕ್ಕೆ ವೇದಿಕೆ ಕಲ್ಪಿಸಿಕೊಟ್ಟ ವಿಜಯಪುರ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಪ್ರವಾಸೋದ್ಯಮ ಇಲಾಖೆಗೆ ನೃತ್ಯಾಂಗನ ನಾಟ್ಯ ಮತ್ತು ಕಲಾ ಕೇಂದ್ರದ ಅಧ್ಯಕ್ಷ ಪೂರ್ಣಚಂದ್ರ ಮೈನಾಳೆ ಕೃತಜ್ಞತೆ ತಿಳಿಸಿದ್ದಾರೆ.

# ಸುಂದರ ಬದುಕಿಗೆ ಬಸವಣ್ಣನವರ ಸಪ್ತ ಸೂತ್ರ ಪಾಲಿಸಿ: ಹುಲಸೂರು ಶ್ರೀ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 03 : ಭಾಲ್ಕಿ ತಾಲ್ಲೂಕಿನ ಶಿವಣಿ ಗ್ರಾಮದಲ್ಲಿ ಹನ್ನೊಂದು ದಿನಗಳ ಹಾವಗಿ ಸ್ವಾಮಿ ಜಾತ್ರೆ ಹಾಗೂ ಜಗದ್ಗುರು ರೇಣುಕಾಚಾರ್ಯರ ಯುಗಮಾನೋತ್ಸವ ಭಾನುವಾರ ಆರಂಭಗೊಂಡಿತು.

ಮಠದಲ್ಲಿ ಸಂಜೆ ನಡೆದ ಸಮಾರಂಭದಲ್ಲಿ ಹುಲಸೂರಿನ ಗುರುಬಸವೇಶ್ವರ ಸಂಸ್ಥಾನ ಮಠದ ಶಿವಾನಂದ ಸ್ವಾಮೀಜಿ ಜಾತ್ರೆಗೆ ಚಾಲನೆ ನೀಡಿದರು.

ಸುಂದರ ಜೀವನಕ್ಕೆ ಪ್ರತಿಯೊಬ್ಬರೂ ಬಸವಣ್ಣನವರ ಸಪ್ತ ಸೂತ್ರಗಳನ್ನು ಮೈಗೂಡಿಸಿಕೊಳ್ಳಬೇಕು ಎಂದು ಅವರು ಹೇಳಿದರು.

'ಕಳಬೇಡ, ಕೊಲಬೇಡ, ಹುಸಿಯ ನುಡಿಯಲು ಬೇಡ, ಮುನಿಯಬೇಡ, ಅನ್ಯರಿಗೆ ಅಸಹ್ಯ ಪಡಬೇಡ, ತನ್ನ ಬಣ್ಣಿಸಬೇಡ, ಇದಿರ ಹಳಿಯಲು ಬೇಡ' ಎಂಬ ಸೂತ್ರಗಳೇ ಸಪ್ತಸೂತ್ರಗಳು. ಇವುಗಳನ್ನು ಪಾಲಿಸಿದ್ದಲ್ಲಿ ಅಂತರಂಗ, ಬಹಿರಂಗ ಎರಡೂ ಶುದ್ಧವಾಗಿರುತ್ತವೆ ಎಂದು ತಿಳಿಸಿದರು.

ಸಾನಿಧ್ಯ ವಹಿಸಿದ್ದ ಮಠದ ಪೀಠಾಧಿಪತಿ ಹಾವಗಿಲಿಂಗೇಶ್ವರ ಶಿವಾಚಾರ್ಯರು ಮಾತನಾಡಿ, ಶಿವಣಿ ಹೆಸರಲ್ಲೇ 'ಶಿವ' ಎಂಬ ಪದವಿದೆ. ಈ ಗ್ರಾಮದಲ್ಲಿ ಜನಿಸಿದವರು ಧನ್ಯರು. ಹಾವಗಿ ಸ್ವಾಮಿ ಇಲ್ಲಿ ತಪೋ ಅನುಷ್ಠಾನ ಕೈಗೊಂಡಿದ್ದರು. ಭಕ್ತರ ಇಷ್ಟಾರ್ಥ ಪೂರೈಸುವ ಶಕ್ತಿ ಅವರ ಕರ್ತು ಗದ್ದುಗೆಗೆ ಇದೆ ಎಂದು ಹೇಳಿದರು.

ಹಾವಗಿ ಸ್ವಾಮಿ ತಮ್ಮ ಬಳಿಗೆ ಬಂದ ಭಕ್ತರ ಸಂಕಷ್ಟ ದೂರ ಮಾಡಿದ್ದರು. ಭಕ್ತರಿಗೆ ಆಧ್ಯಾತ್ಮದ ಜ್ಞಾನದ ನೀಡಿದ್ದರು. ದೇವರ ಸಾಕ್ಷಾತ್ಕಾರದ ಬಗ್ಗೆಯೂ ತಿಳಿಸಿದ್ದರು ಎಂದರು.

ಶ್ರದ್ಧೆ ಇದ್ದರೆ ಗುರು, ದೇವರ ಕೃಪೆ ಆಗುತ್ತದೆ. ಗುರುವಿನ ಮೇಲೆ ಸದಾಕಾಲ ಭಕ್ತಿ ಇರಬೇಕು. ಗುರುವಿನ ಸಾಮಿಪ್ಯದಿಂದ ಜನ್ಮ, ಜನ್ಮಾಂತರದ ಪಾಪಗಳು ದೂರವಾಗುತ್ತವೆ. ಜೀವನದಲ್ಲಿ ಸುಖ, ಶಾಂತಿ, ನೆಮ್ಮದಿ ನೆಲೆಗೊಳ್ಳುತ್ತದೆ ಎಂದು ನುಡಿದರು.

ಗ್ರಾಮ ಪಂಚಾಯಿತಿ ಸದಸ್ಯ ಶ್ರೀನಿವಾಸ್ ಬಿರಾದಾರ, ಪ್ರಮುಖರಾದ ಸಿದ್ರಾಮ ಬೋಗಳೆ, ಬಸವರಾಜ ಬಿರಾದಾರ ಉಪಸ್ಥಿತರಿದ್ದರು.

ಗ್ರಾಮ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಭಕ್ತರು ಅಪಾರ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

# ಚರ್ಚನಲ್ಲಿ ಮ್ಯಾನ್‌ಸ್ಟಾನ್ಸ್ ಕದ್ದ ದುಷ್ಕರ್ಮಿಗಳು: ಕ್ರಮಕ್ಕೆ ಒತ್ತಾಯ



ಮಲ್ಲಮ್ಮ ನುಡಿ ವಾರ್ತೆ ಬೀದರ. ಮಾ. 03 : ಬೆಂಗಳೂರಿನ ಉತ್ತರಹಳ್ಳಿಯ ಸೇಂಟ್ ಆಂಥೋನಿ ಚರ್ಚಗೆ ನುಗ್ಗಿ ಪವಿತ್ರ ಸಂಸ್ಕಾರ ಹೊಂದಿದ ಮ್ಯಾನ್‌ಸ್ಟಾನ್ಸ್ ಕದ್ದೊಯ್ದ ದುಷ್ಕರ್ಮಿಗಳ ವಿರುದ್ಧ ಕೂಡಲೇ ಕ್ರಮ ಕೈಗೊಳ್ಳಬೇಕು ಎಂದು ಇಂಡಿಯನ್ ಕ್ರಿಶ್ಚಿಯನ್ ವೆಲ್‌ಫೇರ್ ಅಸೋಸಿಯೇಷನ್ ರಾಜ್ಯ ಅಧ್ಯಕ್ಷ ಸಂಜಯ್ ಜಾಗೀರದಾರ್ ಒತ್ತಾಯಿಸಿದ್ದಾರೆ.

ಕಿಡಿಗೇಡಿಗಳ ಕೃತ್ಯ ತೀವ್ರ ಖಂಡನೀಯ. ಪವಿತ್ರ ಪಾತ್ರೆ ಕಾಣೆಯಾದ ಘಟನೆಯಿಂದ ಕ್ರೈಸ್ತರ ಧಾರ್ಮಿಕ ಭಾವನೆಗೆ ಧಕ್ಕೆ ಉಂಟಾಗಿದೆ ಎಂದು ಹೇಳಿದ್ದಾರೆ. ಕೂಡಲೇ ದುಷ್ಕರ್ಮಿಗಳನ್ನು ಪತ್ತೆ ಹಚ್ಚಿ ಕಠಿಣ ಶಿಕ್ಷೆಗೆ ಗುರಿಪಡಿಸಬೇಕು. ಕ್ರೈಸ್ತರ ಪ್ರಾರ್ಥನಾ ಮಂದಿರಗಳಿಗೆ ರಕ್ಷಣೆ ಒದಗಿಸಬೇಕು. ಈ ರೀತಿಯ ಘಟನೆಗಳು ಪುನರಾವರ್ತನೆಯಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

# ಹಂಪಿ ಉತ್ಸವದಲ್ಲಿ ಬೀದರನ ರೇಖಾ ಸೌದಿ ಗಾನ ಲಹರಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 03 : ಬೀದರನ ಖ್ಯಾತ ಗಾಯಕಿ ರೇಖಾ ಸೌದಿ ಅವರು ವಿಶ್ವ ವಿಖ್ಯಾತ ಹಂಪಿ ಉತ್ಸವದ ಎದುರು ಬಸವಣ್ಣ ವೇದಿಕೆಯಲ್ಲಿ ಸಂಗೀತದ ರಸದೌತಣ ಉಣಬಡಿಸಿದರು.

'ಕೇಳಿಸದೆ ಕಲ್ಲು ಕಲ್ಲಿನಲಿ ಕನ್ನಡ ನುಡಿ...', 'ಸೋಜುಗದ ಸೂಜು ಮಲ್ಲಿಗೆ ಮಾದೇವ ನಿನ್ನ ಮಂಡೆ ಮ್ಯಾಲೆ ದುಂಡು ಮಲ್ಲಿಗೆ...', ಪುನೀತ್ ರಾಜಕುಮಾರ ಅವರ 'ಬೊಂಬೆ ಹೇಳುತೈತೆ..' ಜೊತೆಗೆ 'ಅಭಿಮಾನಿಗಳೇ ನಮ್ಮನೆದೇವ್ರು...' ಹಾಡುಗಳ ಮೂಲಕ ಸಂಗೀತಪ್ರಿಯರ ಮನ ಗೆದ್ದರು. ಕೀ ಬೋರ್ಡಗೆ ಶಿವಾನಂದ ಭಜಂತ್ರಿ ವಿಜಯಪುರ, ತಬಲಾ ರಮೇಶ ರತ್ನಾಕರ್ ಹಾಗೂ ಪ್ಯಾಡ್‌ಗೆ ಸುರೇಶ ಬಳ್ಳಾರಿ ಸಾಥ್ ನೀಡಿದರು.

ಬಿದರಿ, ಬೀದರ್ ಜಿಲ್ಲೆಯ ಸಾಂಸ್ಕೃತಿಕ ವೇದಿಕೆಯ ಅಧ್ಯಕ್ಷರಾಗಿ ಹಲವಾರು ಅತ್ಯುತ್ತಮ ಕಾರ್ಯಕ್ರಮಗಳನ್ನು ನೀಡುವ ಮೂಲಕ ಬೀದರನ ಹೆಮ್ಮೆಯ ಗಾಯಕಿ ಎನಿಸಿಕೊಂಡಿರುವ ರೇಖಾ ಸೌದಿ ಈಗಾಗಲೇ ಹಲವು ಬಾರಿ ಹಂಪಿ ಉತ್ಸವದ ಮುಖ್ಯ ವೇದಿಕೆಗಳಲ್ಲಿಯೂ ಸಂಗೀತ ಸೇವೆ ಸಲ್ಲಿಸಿದ್ದಾರೆ. ರೇಖಾ ಸೌದಿ, ವಿಶ್ವವಿಖ್ಯಾತ ಮೈಸೂರು ದಸರಾ, ಮೈಸೂರು ಯುವ ದಸರಾ, ಕಲಬುರಗಿಯ ರಾಷ್ಟ್ರಕೂಟ ಉತ್ಸವ, ರಾಜ್ಯಮಟ್ಟದ ಬಸವ ಉತ್ಸವ, ಬೀದರ್ ಉತ್ಸವ ಸೇರಿದಂತೆ ಅನೇಕ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡಿದ್ದು ವಿಶೇಷ.

ಹಂಪಿ ಉತ್ಸವದ ಎದುರು ಬಸವಣ್ಣ ವೇದಿಕೆಯ ಕಾರ್ಯಕ್ರಮವನ್ನು ಉದ್ಘಾಟಿಸಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀಹರಿ ಬಾಬು ಅವರು ಹಂಪಿ ಉತ್ಸವ ವಿಶ್ವ ವಿಖ್ಯಾತ ಕಲಾವಿದರ ಸಂಗಮಕ್ಕೆ ಸಾಕ್ಷಿಯಾಗಿದೆ. ಎದುರು ಬಸವಣ್ಣ ವೇದಿಕೆಯಲ್ಲಿ ಕಾರ್ಯಕ್ರಮ ನೀಡುವ ಕಲಾವಿದರು ಸುದೈವಿಗಳು ಎಂದು ಬಣ್ಣಿಸಿದರು.

ವೇದಿಕೆಯ ರಾಯಭಾರಿಯಾಗಿ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ವೀರಸಂಗಯ್ಯ ಉಪಸ್ಥಿತರಿದ್ದರು. ಕರ್ನಾಟಕ ಜಾನಪದ ಅಕಾಡೆಮಿಯ ಸದಸ್ಯರಾದ ಕಿಕೇರಿ ಮಲ್ಲಿಕಾರ್ಜುನ, ಸಹಾಯಕ ಆಯುಕ್ತ ಚಿದಾನಂದ ಗೋಸ್ವಾಮಿ ಇದ್ದರು. ನಿರೂಪಕರಾಗಿ ವಿನೋದ ಹಾಗೂ ಭುವನೇಶ್ವರಿ ಕಾರ್ಯ ನಿರ್ವಹಿಸಿದರು.

# ರಂಜಾನ್-ಹೋಳಿ ಹಬ್ಬ ಸೌಹಾರ್ದ ಸಭೆ



ಬೀದರ. ಮಾ. 03 : ಜಿಲ್ಲೆಯಾದ್ಯಂತ ರಂಜಾನ್ ಹಾಗೂ ಹೋಳಿ ಹಬ್ಬವನ್ನು ಸೌಹಾರ್ದಯುತವಾಗಿ ಶಾಂತಿಯಿಂದ ಆಚರಿಸಬೇಕೆಂದು ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಚಂದ್ರಕಾಂತ ಪೂಜಾರಿ ತಿಳಿಸಿದರು.

ನಗರದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇರಿಯಲ್ಲಿ ಶನಿವಾರ ಕರೆದ ಶಾಂತಿ ಸಭೆಯಲ್ಲಿ ಮಾತನಾಡಿದರು.

ಸಹೋದರತ್ವಭಾವನೆಯಿಂದ, ಕೋಮು ಸೌಹಾರ್ದತೆಗೆ ಯಾವುದೇ ರೀತಿಯಲ್ಲಿ ಧಕ್ಕೆ ಬಾರದಂತೆ ಹಬ್ಬ ಆಚರಿಸಬೇಕು. ಹೋಳಿ ಹಬ್ಬದ ದಿನದಂದು ಮಧ್ಯಾಹ್ನ 12.30 ಗಂಟೆಯವರೆಗೆ ಎಲ್ಲರೂ ಬಣ್ಣದಾಟವನ್ನು ಆಡಿ ಮುಗಿಸಬೇಕು. ಈ ಸಂದರ್ಭದಲ್ಲಿ ಯಾವುದೇ ವ್ಯಕ್ತಿಗಳಿಗೆ ಬಣ್ಣದಿಂದ ತೊಂದರೆ ಆಗದಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.

ರಂಜಾನ್ ಹಬ್ಬದ ಅಂಗವಾಗಿ ಓಲ್ಡ್ ಸಿಟಿಯಲ್ಲಿ ವ್ಯಾಪಾರ ಮಾಡಲು ವ್ಯಾಪರಸ್ಥರಿಗೆ 20 ದಿನ ರಾತ್ರಿ 1 ಗಂಟೆಯವರೆಗೆ, ತಿಂಗಳ ಕೊನೆಯ ಹತ್ತು ದಿನ ಬೆಳಗಿನವರೆಗೆ ಕಾಲಾವಕಾಶ ಕಲ್ಪಿಸಲಾಗುವುದು ಎಂದರು.

ನಗರಸಭೆ ಅಧ್ಯಕ್ಷ ಮುಹಮ್ಮದ್ ಗೌಸ್ ಮಾತನಾಡಿ, ಪ್ರತಿ ವರ್ಷದಂತೆ ಈ ವರ್ಷವು ಕೂಡ ಹಿಂದೂ–ಮುಸ್ಲಿಂರು ಪ್ರೀತಿ, ಬಾಂಧವ್ಯದಿಂದ ಹಬ್ಬ ಆಚರಿಸಬೇಕು. ಯಾವುದೇ ರೀತಿ ಅಹಿತಕರ ಘಟನೆ ನಡೆ–ಯದಂತೆ ನೋಡಿಕೊಳ್ಳಬೇಕು ಎಂದು ಮನವಿ ಮಾಡಿದರು.

ಇದಕ್ಕೂ ಮುನ್ನ ಸಭೆಯಲ್ಲಿ ಹಿಂದೂ, ಮುಸ್ಲಿಂ ಮುಖಂಡರ ಅಭಿಪ್ರಾಯ ಪಡೆಯಲಾಯಿತು. ನಗರಸಭೆ ಸದಸ್ಯರಾದ ಇರ್ಶಾದ ಪೈಲ್ವಾನ್, ಅಬ್ದುಲ್ ಅಜೀಜ್ ಮುನ್ನಾ, ಡಾ.ಮಕ್ಸೂದ್ ಚಂದಾ, ಶಾಹೀನ್ ಪರ್ವೇಜ್, ಎಂ.ಕೆ.ಬೇಗ್, ಮುಖಂಡರಾದ ನಂದಕಿಶೋರ ವರ್ಮಾ, ಸೂರ್ಯಕಾಂತ ಶೆಟಕಾರ, ಮನೋಹರ ದಂಡೆ, ಡಿವೈಎಸ್ಪಿ ಶಿವನಗೌಡ ಪಾಟೀಲ ಮತ್ತಿತರರು ಹಾಜರಿದ್ದರು.

# ಬಿರಾದಾರ್ ಪೆನಾಲ್ಗೆ ಜಯ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 03 : ಎನ್ಜಿಒ ನೌಕರರ ಗೃಹ ನಿಮರ್undefinedಸಹಕಾರ ಸಂಘದ ಚುನಾವಣೆಯಲ್ಲಿ ಬಾಲಾಜಿ ಬಿರಾದಾರ್ ನೇತೃತ್ವದ ಪೆನಾಲ್ನವರು ಜಯಗಳಿಸಿದ್ದಾರೆ. ಒಟ್ಟು 13 ನಿರ್ದೇಶಕರ ಸ್ಥಾನಗಳಿಗೆ ಚುನಾವಣೆ ನಡೆಯಿತು. ಅದರಲ್ಲಿ ಅರವಿಂದ ಉಪ್ಪೆ, ಶರಣಪ್ಪ ನಾಗೂರ, ಬಾಲಜಿ ಬಿರಾದಾರ್, ಜಯದೀಪ ಪಾಂಡ್ರೆ, ಸಂಗೀತಾ ದತ್ತು, ವಿದ್ಯಾವತಿ ಸೋಮಶೇಖರ ಅವರು ಅವಿರೋಧ ಆಯ್ಕೆಯಾಗಿದ್ದಾರೆ. ಏಳು ಸ್ಥಾನಗಳಿಗೆ ಭಾನುವಾರ ನಡೆದ ಚುನಾವಣೆಯಲ್ಲಿ ಎಂ.ಯಾಸೀರ್ ಅರಾಫತ್, ಕಲಾಲ್ ದೇವಿಪ್ರಸಾದ್, ವೆಂಕಟ್ ಭಾಗ್ಯನಗರ, ಸುನೀಲ ಬಿರಾದಾರ್, ಸೂರ್ಯಕಾಂತ, ರಾಮಶೆಟ್ಟಿ ಕೆಂಚಾ ಹಾಗೂ ಶಿವಾನಂದ ಸ್ವಾಮಿ ಗೆಲುವು ಸಾಧಿಸಿದ್ದಾರೆ. ಐದು ವರ್ಷದ ಅವಧಿಗೆ ಚುನಾವಣೆ ನಡೆದಿದೆ. ಮುಂದಿನ ಐದು ವರ್ಷದಲ್ಲಿ ನಿವೇಶನ ರಹಿತ ನೌಕರರಿಗೆ ಒಂದು ಸಾವಿರ ನಿವೇಶನಗಳು ಅತ್ಯಂತ ಕಡಿಮೆ ಬೆಲೆಯಲ್ಲಿ ಹಂಚಿಕೆ ಮಾಡುವ ಗುರಿ ಹೊಂದಲಾಗಿದೆ ಎಂದು, ಬಾಲಾಜಿ ಬಿರಾದಾರ್, ಸಂಘದ ಕಾರ್ಯದಶರ್undefined ಪೀರಪ್ಪ ಔರಾದೆ ತಿಳಿಸಿದ್ದಾರೆ.

# ಮಾ.6ರಂದು ಭೋಜಲಿಂಗೇಶ್ವರ ರಥೋತ್ಸವ, ಧರ್ಮ ಸಭೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಕಲ್ಯಾಣ ಕರ್ನಾಟಕದ ಪ್ರಮುಖ ಸಾಮರಸ್ಯ ಧಾರ್ಮಿಕ ಕ್ಷೇತ್ರಗಳಲ್ಲಿ ಒಂದಾದ ನೆರೆಯ ಸೂಗೂರೂ ಎನ್. ಗ್ರಾಮದ ಶ್ರೀ ಭೋಜಲಿಂಗೇಶ್ವರ ಸಿದ್ದ ಸಂಸ್ಥಾನ ಮಠದ ಜಾತ್ರೆ ಮಾ.6 ಗುರುವಾರ ಸಂಜೆ 7-05 ನಿ.ಕ್ಕೆ ಜರುಗಲಿದೆ ನಂತರ ಧರ್ಮಸಭೆ ಹಮ್ಮಿಕೊಳ್ಳಲಾಗಿದೆ ಎಂದು ಶ್ರೀಮಠದ ಪೀಠಾಧಿಪತಿ ಶ್ರೀ ಹಿರಗಪ್ಪ ತಾತನವರು ನುಡಿದರು.

ಶ್ರೀಮಠದ ಆವರಣದಲ್ಲಿ ಜಾತ್ರೆಯ ಆಮಂತ್ರಣ ಪತ್ರಿಕೆಯನ್ನು ಬಿಡುಗಡೆ ಮಾಡಿ ಮಾತನಾಡಿದ ಅವರು, ಭವ್ಯ ರಥೋತ್ಸವ ನಂತರ ನಡೆಯುವ ಧರ್ಮಸಭೆಯನ್ನು ಗುಡಗುಂಟಿ ಅಮರೇಶ್ವರ ಕ್ಷೇತ್ರದ ಶ್ರೀಗಳಾದ ಗಜದಂಡ ಶಿವಾಚಾರ್ಯ ಮಹಾಸ್ವಾಮೀಜಿ ಉದ್ಘಾಟಿಸುವರು. ದಿವ್ಯ ಸಾನ್ನಿಧ್ಯವನ್ನು ಒಪ್ಪತ್ತೇಶ್ವರ ಮಠದ ಗುಳೇದ ಗುಡ್ಡದ ಅಭಿನವ ಒಪ್ಪತ್ತೇಶ್ವರ ಮಹಾಸ್ವಾಮೀಜಿ ವಹಿಸುವರು. ದಿವ್ಯನೇತೃತ್ವವನ್ನು ಭೋಜಲಿಂಗೇಶ್ವರ ಸಿದ್ದ ಸಂಸ್ಥಾನ ಮಠದ ಪೀಠಾಧಿಪತಿ ಹಿರಗಪ್ಪ ತಾತನವರು ವಹಿಸುವರು ಎಂದು ತಿಳಿಸಿದರು.

ನಂತರ ನಡೆಯುವ ಧರ್ಮಸಭೆಯನ್ನು ರಾಜ್ಯ ಗ್ರಾಮೀಣಾಭಿವೃದ್ಧಿ, ಪಂಚಾಯತ್ ರಾಜ್ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರೀಯಾಂಕ್ ಖರ್ಗೆ ಅಧ್ಯಕ್ಷತೆವಹಿಸುವರು.

ಮುಖ್ಯ ಅತಿಥಿಗಳಾಗಿ ಕೊಪ್ಪಳ ಸಂಸದ ರಾಜಶೇಖರ ಹಿಟ್ನಾಳ, ಮಾಜಿ ಸಚಿವ ಹಾಗೂ ರಾಜ್ಯ ಪಂಚಗ್ಯಾರಂಟಿಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಹೆಚ್.ಎಂ.ರೇವಣ್ಣ, ಯಾದಗಿರಿ ಶಾಸಕರಾದ ಚನ್ನಾರಡ್ಡಿ ಪಾಟೀಲ ತುನ್ನೂರ, ಗುರುಮಠಕಲ್ ಶಾಸಕರಾದ ಶರಣಗೌಡ ಕಂದಕೂರ, ನಿವೃತ್ತ ಜಿಲ್ಲಾಧಿಕಾರಿ ವಿ.ಶಂಕರ್, ರಾಜ್ಯ ಹಿಂದುಳಿದ ಜಾತಿಗಳ ಒಕ್ಕೂಟದ ರಾಜ್ಯಾಧ್ಯಕ್ಷ ಕೆ.ಎಂ.ರಾಮಚಂದ್ರಪ್ಪ, ಖ್ಯಾತ ವೈದ್ಯ ಡಾ.ರವಿಕುಮಾರ ರ್‍ಯಾಖಾ ಮುಂತಾದವರು ಭಾಗವಹಿಸುವರು ಎಂದು ಮಾಹಿತಿ ನೀಡಿದರು.

ಕಳೆದ 2 ದಿನಗಳಿಂದ ಜಾತ್ರೆಯ ಸಿದ್ದತೆಗಳು ಆರಂಭಗೊಂಡಿದ್ದು, ಪ್ರತಿವರ್ಷದಂತೆ ಕ್ಷೇತ್ರದಲ್ಲಿ ನಡೆಯುವ ಧಾರ್ಮಿಕ ಕಾರ್ಯಕ್ರಮಗಳು ಕೂಡ ನಡೆಯುತ್ತಿವೆ, ಈ ವರ್ಷ ಅಂತ್ಯದವರೆಗೆ ನೂತನ ದೇವಾಲಯ ಕಟ್ಟಡ ನಿರ್ಮಾಣ ಕಾಮಗಾರಿ ಮುಗಿಯಲಿದ್ದು, ಜಾತ್ರೆಗೆ ಕರ್ನಾಟಕ, ಮಹಾರಾಷ್ಟ್ರ, ಆಂದ್ರಪ್ರದೇಶ, ತೆಲಂಗಾಣ ರಾಜ್ಯಗಳಿಂದ ಭೋಜಲಿಂಗೇಶ್ವರರ ಸಹಸ್ರಾರು ಭಕ್ತರು ಸೂಗೂರು ಎನ್.ಗೆ ಆಗಮಿಸಲಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಶ್ರೀಮಠದ ವಕ್ತಾರರಾದ ಈರಣ್ಣ ಬಲಕಲ್ (ಎಲ್ಐಸಿ), ಶಂಕರಗೌಡ ಪಾಟೀಲ, ಸಿದ್ದರಾಮರಡ್ಡಿ ಬೆನಕನಳ್ಳಿ, ಭೀಮರಡ್ಡಿ ಕುರಾಳ್, ಬಸವರಾಜ ಪಾಟೀಲ, ಮಲ್ಲಪ್ಪ ಅರಿಕೇರಿ, ಶರಣು ಬಲಕಲ್, ವಿಶ್ವನಾಥರಡ್ಡಿ ಪಾಟೀಲ್ ಸೂಗೂರು ಎನ್, ಡಾ.ಸುರೇಶ ಮಾಗನೂರ, ಪ್ರಭು ಹೂಗಾರ, ಸಿದ್ದುಗೌಡ ಕುರಾಳ, ಮಲ್ಲಿಕಾರ್ಜುನ ಕಿವಡೇರ್ ಬಂದಳ್ಳಿ ಸೇರಿದಂತೆ ಭಕ್ತರು ಉಪಸ್ಥಿತರಿದ್ದರು.

# ಸೈನಿಕರ ದೇಶ ಸೇವೆ ಮಾದರಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ದೇಶ ರಕ್ಷಣೆಯಲ್ಲಿ ಸೈನಿಕರ ಪಾತ್ರ ಮಹತ್ವದ್ದಾಗಿದೆ ಎಂದು ಹಿರೇಮಠ ಸಂಸ್ಥಾನದ ಬಸವಲಿಂಗದೇವರು ಹೇಳಿದರು. ಪಟ್ಟಣದ ಕನಕ ಭವನದಲ್ಲಿ ಶನಿವಾರ ಆಯೋಜಿಸಿದ್ದ ನಿವೃತ್ತ ಸೈನಿಕ ಶಿವಕುಮಾರ ತೇಗಂಪೂರೆ ಅವರ ಸನ್ಮಾನ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ರಾಷ್ಟ್ರರಕ್ಷಣೆಗಾಗಿ ಸೈನಿಕರು ತಮ್ಮ ಜೀವನವನ್ನೇ ಮುಡುಪಾಗಿಟ್ಟಿದ್ದಾರೆ. ದೇಶದ ಸೈನಿಕರ ಸೇವೆ ಅನನ್ಯವಾದುದು. ನಿವೃತ್ತ ನಂತರ ಸ್ವಗ್ರಾಮಕ್ಕೆ ಬರುವ ಸೈನಿಕರನ್ನು ಸನ್ಮಾನಿಸುವುದರೊಂದಿಗೆ ಅವರು ಸೈನಿಕ ರವೃತ್ತಿಯ ಅನುಭವಗಳನ್ನು ಹಂಚಿಕೊಳ್ಳುವುದರಿಂದ ಇತರರಲ್ಲಿ ದೇಶಭಕ್ತಿ ಮೂಡುತ್ತದೆ ಎಂದರು.

ಸನ್ಮಾನ ಸ್ವೀಕರಿಸಿದ ನಿವೃತ್ತ ಸೈನಿಕ ಶಿವಕುಮಾರ ತೇಗಂಪೂರೆ ಮಾತನಾಡಿ, ಸೇವಾ ನಿವೃತ್ತಿ ಹೊಂದಿದರೂ ದೇಶ ಸೇವೆಯಿಂದ ನಿವೃತ್ತಿಯಾಗಿಲ್ಲ. ದೇಶ ರಕ್ಷಣೆಗೆ ಯಾವಾಗ ಕರೆದರೂ ಹೋಗಲು ಸಿದ್ಧ. ದೇಶ ಸೇವೆಯು ದೇವರ ಸೇವೆ ಇದ್ದಂತೆ ಸೇನೆಯಲ್ಲಿ ಸಾಕಷ್ಟು ಹುದ್ದೆ ಖಾಲಿಯಿದ್ದು, ಹೆಚ್ಚಿನ ಯುವಕರು ಸೇನೆಗೆ ಸೇರಿ ದೇಶ ಸೇವೆಗೆ ಮುಂದಾಗಬೇಕು ಎಂದು ಸಲಹೆ ನೀಡಿದರು.

ಹಿರಿಯ ಸಾಹಿತಿ ಡಾ.ಕಾಶಿನಾಥ ಚಲುವಾ ಮಾತನಾಡಿ, ರೈತರು ಹಾಗೂ ಸೈನಿಕರು ನಮ್ಮ ದೇಶದ ಬೆನ್ನೆಲುಬು ಆಗಿದ್ದಾರೆ. ರೈತರು ಬೆಳೆ ಬೆಳೆದು ದೇಶದ ಜನರಿಗೆ ಆಹಾರ ನೀಡುತ್ತಾರೆ. ಹಾಗೆಯೇ ಸೈನಿಕರು ನಮಗೆ ರಕ್ಷಣೆ ನೀಡುವ ಕೆಲಸ ಮಾಡುತ್ತಿದ್ದಾರೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪ್ರಥಮ ದರ್ಜೆ ಗುತ್ತಿಗೆದಾರ ಸಂಗಮೇಶ ಹುಣಜೆ ಮದಕಟ್ಟಿ, ಪುರಸಭೆ ಸದಸ್ಯ ಬಾಲಾಜಿ ಖೇಡಕರ್, ಪ್ರಮುಖರಾದ ವಿಜಯಕುಮಾರ ಶಿಂಥೆ, ಮಾಳಸ್ಕಾಂತ ವಾಘೆ, ಪಾಂಡುರಂಗ ಉಡಬಾಳ, ಗೋಪಾಲ ಹವಾಲ್ದಾರ, ಶಿವಾಜಿ ಮೇತ್ರೆ, ಸಂಜೀವಕುಮಾರ ಗುಂಜರಗೆ ಸೇರಿದಂತೆ ಹಲವರು ಇದ್ದರು.

# ಡಾ.ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ; ಮಾ.23ರವರೆಗೆ ರಿಯಾಯಿತಿ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.03- ಇಲ್ಲಿನ ಡಾ.ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಮಾರಾಟ ಮಳಿಗೆಗಳಲ್ಲಿ ವರ್ಷಾಂತ್ಯದ ತೀರುವಳಿ ಪ್ರಯುಕ್ತ ರಿಯಾಯಿತಿ ದರದಲ್ಲಿ ಮಾರಾಟವನ್ನು ಮಾ.23ರವರೆಗೆ ಹಮ್ಮಿಕೊಳ್ಳಲಾಗಿದೆ.

ನಿಗಮದ ಎಲ್ಲಾ ಮಾರಾಟ ಮಳಿಗೆಗಳಲ್ಲಿ ಆರ್ಥಿಕ ವರ್ಷಾಂತ್ಯದ ತೀರುವಳಿ ಪ್ರಯುಕ್ತ ರಿಯಾಯಿತಿ ಮಾರಾಟವನ್ನು ಘೋಷಿಸಲಾಗಿದೆ. ಕನ್ಸೈನ್‌ಮೆಂಟ್ ಹಾಗೂ ಪ್ರೊಕ್ಯೂರ್‌ಮೆಂಟ್ ಪದ್ದತಿಯಡಿಯಲ್ಲಿ ಖರೀಸಿದ ದಾಸ್ತಾನುಗಳಿಗೆ 20% ಹಾಗೂ 365 ದಿನಗಳ ಅವಧಿ ಮೀರಿ ಮಾರಾಟವಾಗದೇ ಇರುವಂತಹ ದಾಸ್ತಾನುಗಳಿಗೆ 30% ರಷ್ಟು ರಿಯಾಯಿತಿ ನೀಡಲಾಗುವುದು.

ರಿಯಾಯಿತಿ ಇರುವ ದಿನಾಂಕಗಳಂದು ಮಾರಾಟ ಮಳಿಗೆಯನ್ನು ಎಲ್ಲಾ ದಿನಗಳಲ್ಲಿಯೂ ತೆರೆದು ವಾರದ ರಜೆಯನ್ನು ಅವಶ್ಯಕತೆಗೆ ಅನುಗುಣವಾಗಿ ಪಡೆದು ವ್ಯಾಪಾರ ವಹಿವಾಟನ್ನು ಸುಗಮವಾಗಿ ದಕ್ಷತೆಯಿಂದ ನಿರ್ವಹಿಸುವುದು ಹಾಗೂ ರಿಯಾಯಿತಿ ಅವಧಿ ಮುಗಿದ ನಂತರ ಮಾರಾಟ ವಹಿವಾಟಿನ ವರದಿಯನ್ನು ಕೇಂದ್ರ ಕಚೇರಿಗೆ ಸಲ್ಲಿಸಬೇಕೆಂದು ನಿಗಮದ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ, ಜಿಲ್ಲಾ ಆಸ್ಪತ್ರೆ ಮರು ಹಸ್ತಾಂತರಕ್ಕೆ ಶಾಸಕರಿಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ "ಜಿಲ್ಲಾ ಆಸ್ಪತ್ರೆ ಮರು-ಹಸ್ತಾಂತರಿಸಬೇಕೆಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಮಸ್ತ ತಜ್ಞ ವೈದ್ಯರು, ವೈದ್ಯಕೀಯ ಮತ್ತು ಅರೆ-ವೈದ್ಯಕೀಯ ಸಿಬ್ಬಂದಿಯವರು ಶಾಸಕ ಚನ್ನಾರಡ್ಡಿ ಪಾಟೀಲ್ ತುನ್ನುರು ಅವರಿಗೆ ಭಾನುವಾರ ಮನವಿ ಸಲ್ಲಿಸಿದ್ದಾರೆ.



ಜಿಲ್ಲಾ ಆಸ್ಪತ್ರೆಯನ್ನು ಉಲ್ಲೇಖಿತ ಸರ್ಕಾರದ ಆದೇಶದನ್ವಯ ವೈದ್ಯಕೀಯ ಶಿಕ್ಷಣ ಇಲಾಖೆಯ ವ್ಯಾಪ್ತಿಗೆ ಹಸ್ತಾಂತರಿಸಲಾಗಿದ್ದು, ಇದರಿಂದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಎಲ್ಲಾ ತಜ್ಞ ವೈದ್ಯರು. ವೈದ್ಯಕೀಯ ಮತ್ತು ಅರೆ-ವೈದ್ಯಕೀಯ ಸಿಬ್ಬಂದಿಯವರಿಗೆ ಯಾದಗಿರಿ ನಗರದಲ್ಲಿರುವ ಜಿಲ್ಲಾ ಆಸ್ಪತ್ರೆ ಮತ್ತು ನಗರದಿಂದ 10 ಕಿ.ಮೀ ದೂರದಲ್ಲಿರುವ ಇತ್ತೀಚಿನ ಬೋಧಕ ಆಸ್ಪತ್ರೆಯಲ್ಲಿಯೂ ಸಹ ಕಾರ್ಯನಿರ್ವಹಿಸುವ ಅನಿವಾರ್ಯತೆ ಇರುತ್ತದೆ. ಇದರಿಂದ ಬಹಳ ಅನಾನುಕೂಲವಾಗಿರುತ್ತದೆ ಎಂದು ಅವರು ಮನವಿಯಲ್ಲಿ ತಿಳಿಸಿದ್ದಾರೆ.

ಜಿಲ್ಲಾ ಆಸ್ಪತ್ರೆಯು ಈ ಹಿಂದೆ ನಗರದ ಮಧ್ಯಭಾಗದಲ್ಲಿ ಸುಮಾರು 15 ವರ್ಷಗಳಿಂದ ಜಿಲ್ಲಾ ಆಸ್ಪತ್ರೆಯು ಯಥ-ಪ್ರಕಾರ ತುರ್ತು ಚಿಕಿತ್ಸೆ ವಿಭಾಗ, ಮೆಡಿಸಿನ್ ವಿಭಾಗ, ಕೀಲು ಮೂಳೆ ವಿಭಾಗ, ಶಸ್ತ್ರಚಿಕಿತ್ಸಾ ವಿಭಾಗ, ಮಕ್ಕಳ ವಿಭಾಗ, ಪ್ರಸೂತಿ ವಿಭಾಗ, ರೆಡಿಯೋಲಾಜಿ ವಿಭಾಗ, ಕಿವಿ, ಮೂಗು & ಗಂಟಲು ವಿಭಾಗ, ಚರ್ಮರೋಗ ವಿಭಾಗ, ಡೈಯಾಲೈಸಿಸ್ ವಿಭಾಗ, ಎಸ್.ಎನ್.ಸಿ.ಯು ವಿಭಾಗ, ಎನ್.ಆರ್.ಸಿ ವಿಭಾಗ, ಲಸಿಕೆ, ಆರ್ಎನ್‌ಟಿಸಿಪಿ, ಹಿಮೋಫೀಲಿಯಾ, ಹಾಗೂ ಇತರೆ ಎಲ್ಲಾ ರಾಷ್ಟ್ರೀಯ ಕಾರ್ಯಕ್ರಮಗಳನ್ನು ಅನುಷ್ಠಾನ ಕೈಗೊಳ್ಳಲಾಗುತ್ತಿದೆ. ಮತ್ತು ಇತರೆ ವಿಭಾಗಗಳ ಸೇವೆಯನ್ನು ನೀಡಲಾಗುತ್ತದೆ. ಈ ಕೆಳಕಂಡ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಮಂಜೂರಾದ ಹುದ್ದೆಗಳಲ್ಲಿ ಕರ್ತವ್ಯನಿರ್ವಹಿಸುತ್ತಾ ಸಾರ್ವಜನಿಕರ ಸೇವೆಯನ್ನು ಯಾವುದೇ ಅನಾನುಕೂಲವಾಗದಂತೆ ನಗರಪ್ರದೇಶವಾದ ಈ ಆಸ್ಪತ್ರೆಯಲ್ಲಿ ಸಾರ್ವಜನಿಕ-ರಿಗೆ ಅನುಕೂಲವಾಗುವಂತೆ ಸೇವೆಯನ್ನು ನೀಡಲಾಗುತ್ತಿದೆ ಎಂದು ಅವರು ವಿವರಿಸಿದ್ದಾರೆ.

ಈ ಹಿಂದೆ ಜಿಲ್ಲಾ ಆಸ್ಪತ್ರೆಯಲ್ಲಿ ಪ್ರತಿ ದಿನಾಲು ಸರಾಸರಿ ಹೊರರೋಗಿಗಳ ಸಂಖ್ಯೆ 600 ರಿಂದ 650 ಮತ್ತು ಒಳರೋಗಿಗಳ ಸಂಖ್ಯೆ 70 ರಿಂದ 80 ರೋಗಿಗಳಿಗೆ ಚಿಕಿತ್ಸೆ ನೀಡಲಾಗಿರುತ್ತದೆ. ಇದರೊಂದಿಗೆ 247 ತುರ್ತು ಚಿಕಿತ್ಸೆಯನ್ನು ಸಹ ಸೇವೆ ನೀಡಲಾಗಿರುತ್ತದೆ.

ಜಿಲ್ಲಾ ಆಸ್ಪತ್ರೆಯನ್ನು 2020 ರಲ್ಲಿ ಮೇಲ್ದರ್ಜೆ ಏರಿಸಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಹೆಚ್ಚುವರಿಯಾಗಿ ವೈದ್ಯರು ಮತ್ತು ವೈದ್ಯತರ ಸಿಬ್ಬಂದಿಗಳನ್ನು ಮಂಜೂರು ಮಾಡಲಾಗಿರುತ್ತದೆ. ಈ ಕೆಳಕಂಡಂತೆ ಆರೋಗ್ಯ

ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಹುದ್ದೆಗಳು ಮಂಜೂರಾಗಿರುತ್ತವೆ.

ಮೇಲ್ಕಂಡ ಹುದ್ದೆಗಳಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ 16-ತಜ್ಞ ವೈದ್ಯರು, ಶುಶ್ರೂಷಕರು ಮತ್ತು ಇತರೆ ವೈದ್ಯತರ ಸಿಬ್ಬಂದಿಗಳು-33, ಮತ್ತು ಗ್ರೂಪ್-ಡಿ-12 ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಒಟ್ಟು 175 ಹುದ್ದೆಗಳು ಮಂಜೂರಾಗಿದ್ದು, ಇವುಗಳು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಹುದ್ದೆಗಳಾಗಿರುತ್ತವೆ. ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ತಜ್ಞ ವೈದ್ಯರು ಮತ್ತು ವೈದ್ಯರಿಗೆ ಹಾಗೂ ಶುಶ್ರೂಷ ಸಿಬ್ಬಂದಿಗಳಿಗೆ ನಗರ ಪ್ರದೇಶದಲ್ಲಿರುವ ಜಿಲ್ಲಾ ಆಸ್ಪತ್ರೆಯಲ್ಲಿ ವಸತಿ ಗೃಹಗಳ ವ್ಯವಸ್ಥೆ ಇರುತ್ತದೆ. ನಗರ ಪ್ರದೇಶದ ಜಿಲ್ಲಾ ಆಸ್ಪತ್ರೆ ಮತ್ತು 10 ಕಿ.ಮೀ ದೂರದಲ್ಲಿರುವ ಈಗೀನ ಬೋಧಕ ಆಸತ್ರೆ ಎರಡು ಕಡೆ ಕರ್ತವ್ಯ ನಿರ್ವಹಿಸಲು ಅನಾನುಕೂಲವಾಗುತ್ತದೆ. ಆದ್ದರಿಂದ ಈಗಾಗಲೇ ನಗರ ಪ್ರದೇಶದಲ್ಲಿ ನೆಲಮಹಡಿ ಮತ್ತು ಒಂದನೇ ಮಹಡಿಯಲ್ಲಿ ಎಲ್ಲಾ ತಜ್ಞ ವೈದ್ಯರಿಗೆ ಹೊರರೋಗಿ ಮತ್ತು ಒಳರೋಗಿಗಳ ವಾರ್ಡ್‌ಗಳ ವ್ಯವಸ್ಥೆ ಇರುತ್ತದೆ.

ಈಗಾಗಲೇ ನಗರದಲ್ಲಿರುವ ಜಿಲ್ಲಾ ಆಸ್ಪತ್ರೆಯು 250 ಹಾಸಿಗೆಗಳ ಸಾಮರ್ಥ್ಯದ ಆಸ್ಪತ್ರೆಯ ಕಟ್ಟಡ ಇರುತ್ತದೆ. ಸದರಿ ಕಟ್ಟಡವು ನಗರ ಪ್ರದೇಶದ ಮಧ್ಯಭಾಗದಲ್ಲಿ ಇರುವುದರಿಂದ ಸಂಪೂರ್ಣ ಜಿಲ್ಲಾ ಆಸ್ಪತ್ರೆಯಾಗಿ ಕಾರ್ಯಗತಮಾಡಿದ್ದಲ್ಲಿ ಸಾರ್ವಜನಿಕರಿಗೆ ಬಹಳ ಅನುಕೂಲವಾಗುತ್ತದೆ. ನಗರ ಪ್ರದೇಶದಲ್ಲಿರುವ ಜಿಲ್ಲಾ ಆಸ್ಪತ್ರೆಯು ಎಲ್ಲಾ ತಜ್ಞತೆಯ ಸೇವೆಯ ನೀಡುವಲ್ಲಿ ಜಿಲ್ಲಾ ಆಸ್ಪತ್ರೆಯನ್ನಾಗಿ ಕಾರ್ಯನಿರ್ವಹಿಸಬಹುದಾಗಿದೆ ಮತ್ತು ನಗರದಿಂದ 10 ಕಿ.ಮೀ ದೂರದಲ್ಲಿರುವ ಬೋಧಕ ಆಸ್ಪತ್ರೆಯನ್ನು ಅತಿ ಗಂಭೀರ ಮತ್ತು ತುರ್ತು ಚಿಕಿತ್ಸೆ ರೋಗಿಗಳಿಗೆ ಸೇವೆಯನ್ನು ಬೋಧಕ ಆಸ್ಪತ್ರೆಯಾಗಿ ವೈದ್ಯಕೀಯ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಈಗಾಗಲೇ ಕಾರ್ಯನಿರ್ವಹಿಸುತ್ತಿದೆ.

ಇದರಿಂದ ರೋಗಿಗಳಿಗೆ ನಗರ ಪ್ರದೇಶದಲ್ಲಿ ಜಿಲ್ಲಾ ಆಸ್ಪತ್ರೆಯಲ್ಲಿ ರೋಗಿಗಳಿಗೆ ದೊರಕುವ ಎಲ್ಲಾ ಚಿಕಿತ್ಸೆಗಳನ್ನು ನೀಡಬಹುದಾಗಿದ್ದು, ಉಳಿದ ರೋಗಿಗಳ ಸೇವೆಯನ್ನು ಬೋಧಕ ಆಸ್ಪತ್ರೆಯು ನಿರ್ವಹಿಸಿದ್ದಲ್ಲಿ ಈಗೀನ ಬೋಧಕ

ಆಸ್ಪತ್ರೆಗೆ ಹೆಚ್ಚಿನ ಕಾರ್ಯ ಒತ್ತಡ ಇರುವುದಿಲ್ಲ.

ಕಾರಣ ಸಾಮಾನ್ಯ ಚಿಕಿತ್ಸೆ ರೋಗಿಗಳು ನಗರ ಪ್ರದೇಶದಲ್ಲಿರುವ ಜಿಲ್ಲಾ ಆಸ್ಪತ್ರೆಯಲ್ಲಿಯೇ ಚಿಕಿತ್ಸೆ ನೀಡಬಹುದಾಗಿದೆ. ಇದ-ರಿಂದ ಸಾಮಾನ್ಯ ಚಿಕಿತ್ಸೆ ರೋಗಿಗಳು ಬೋಧಕ ಆಸ್ಪತ್ರೆಯ ಮೇಲೆ ಅವಲಂಬನೆ ಕಡಿಮೆಯಾಗುತ್ತದೆ. ಈ ಹಿಂದೆ ಹಲವಾರು ಸಂಘಟನೆಗಳು, ಸಂಘ-ಸಂಸ್ಥೆಗಳು ಸಂಪೂರ್ಣವಾಗಿ ಸ್ಥಳಾಂತರ ಮಾಡಬಾರದೆಂದು ಒತ್ತಾಯವಿರುತ್ತದೆ. ಕರ್ನಾಟಕ ವೈದ್ಯಾಧಿಕಾರಿಗಳ ಸಂಘವು ಈ ಹಿಂದೆ ಸನ್ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರಲ್ಲಿ ಜಿಲ್ಲಾ ಆಸ್ಪತ್ರೆಯನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಉಳಿಸಿಕೊಳ್ಳುವಂತೆ ಬೇಡಿಕೆಯನ್ನು ಸಹ ಮಾಡಿಕೊಂಡಿರುತ್ತಾರೆ.

ಉದಾಹರಣೆಗೆ ಬಳ್ಳಾರಿಯಲ್ಲಿ ಜಿಲ್ಲಾ ಆಸ್ಪತ್ರೆಯು ನಗರ ಪ್ರದೇಶದಲ್ಲಿದ್ದು ಈ ಹಿಂದೆ ವೈದ್ಯಕೀಯ ಶಿಕ್ಷಣ ಇಲಾಖೆ ವ್ಯಾಪ್ತಿಯಲ್ಲಿ ಬಳ್ಳಾರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ಬಿಮ್ಸ್-ಬಳ್ಳಾರಿ) ಅಧೀನದಲ್ಲಿ ದೀನದಲ್ಲಿ ಇರುವುದನ್ನು ನಗರದಿಂದ 8 ಕಿ.ಮೀ ವ್ಯಾಪ್ತಿ ದೂರವಿರುತ್ತದೆ ಎಂದು ಮತ್ತು ಬಿಮ್ಸ್ ಸಂಸ್ಥೆಯಲ್ಲಿ 1017-ಹಾಸಿಗೆಯುಳ್ಳ ಬೋಧಕ ಆಸ್ಪತ್ರೆ ಇರುವ ಕಾರಣ ಜಿಲ್ಲಾ ಆಸ್ಪತ್ರೆಯನ್ನು ವೈದ್ಯಕೀಯ ಶಿಕ್ಷಣ ಇಲಾಖೆಯ ವ್ಯಾಪ್ತಿಯಿಂದ 2014 ರಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಮರು-ಹಸ್ತಾಂತರವಾಗಿರುತ್ತದೆ. ಬಳ್ಳಾರಿ ಮಾದರಿ ಪ್ರಕಾರ ರಾಷ್ಟ್ರೀಯ ವೈದ್ಯಕೀಯ ಪರಿಷತ್ತು ನಿಯಮಾವಳಿ ಪ್ರಕಾರ ವೈದ್ಯಕೀಯ ಮಹಾವಿದ್ಯಾಲಯಕ್ಕೆ ಒಂದು ಬೋಧಕ ಆಸ್ಪತ್ರೆ ಅಗತ್ಯವಿದ್ದು, ಈಗಾಗಲೇ ಈ ಯಾದಗಿರಿ ಸಂಸ್ಥೆಗೆ ಬೋಧಕ ಆಸತ್ರೆ ಇರುತ್ತದೆ.

ನಗರ ಪ್ರದೇಶದ ಜಿಲ್ಲಾ ಆಸ್ಪತ್ರೆಯನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಉಳಿಯುವಂತೆ ಶಾಸಕರಾದ ತಾವುಗಳು ಸರ್ಕಾರದ ಮಟ್ಟದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಇವರಲ್ಲಿ ತಾವುಗಳು ನಗರ ಪ್ರದೇಶದಲ್ಲಿರುವ ಜಿಲ್ಲಾ ಆಸ್ಪತ್ರೆಯನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಮರು-ಹಸ್ತಾಂತರಿಸಲು ಮನವರಿಕೆ ಮಾಡಿಕೊಡಬೇಕೆಂದು ಅವರು ವಿವರವಾದ ಮನವಿ ಸಲ್ಲಿಸಿದ್ದಾರೆ

# ಶ್ರವಣದೋಷ ಇದ್ದವರು ವೈದ್ಯರ ಸಲಹೆ ಇಲ್ಲದೆ ಸಾಧನಗಳನ್ನು ಬಳಸಬಾರದು, ಹತ್ತಿ ಕಡ್ಡಿಯಿಂದ ಕಿವಿಯನ್ನು ಸ್ವಚ್ಛಗೊಳಿಸಲು ಪ್ರಯತ್ನಿಸಬಾರದು

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ರಾಷ್ಟ್ರೀಯ ಶ್ರವಣ ದಿನ ಆಚರಣೆಯನ್ನು ಅಂಗವಾಗಿ ರಾಷ್ಟ್ರೀಯ ಶ್ರವಣ ದಿನದಂದು ಎಲ್ಲಾ ಜಿಲ್ಲೆಗಳಲ್ಲಿ ಶ್ರವಣ ತಪಾಸಣಾ ಶಿಬಿರ ನಡೆಸಿ ಚಿಕಿತ್ಸೆ ಒದಗಿಸಲಾಗುವುದು. 6 ರ್ಷದ ಒಳಗಿನ ಮಕ್ಕಳಲ್ಲಿ ಎರಡು ಕಿವಿಗಳಲ್ಲಿ ಗಂಭೀರ ಸ್ವರೂಪದ ಶ್ರವಣದೋಷಗಳನ್ನು ಗುರುತಿಸಿ ಕಾಕ್ಲಿಯಾರ್ ಇಂಪ್ಲಾಂಟ್ ಅವಶ್ಯಕತೆಯಿದ್ದಲ್ಲಿ ಶಸ್ತ್ರಚಿಕಿತ್ಸೆ ಮಾಡಲಾಗುತ್ತದೆ ಎಂದು ಯಾದಗಿರಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ.ಮಹೇಶ್ ಬಿರಾದಾರ ಅವರು ಹೇಳಿದರು.

ಯಾದಗಿರಿ ನಗರದಲ್ಲಿ ಮರ್ಚ್ 3ರ ಸೋಮವಾರ ರಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕರ್‍ಯಾಲಯದ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರಾಷ್ಟ್ರೀಯ ಶ್ರವಣ ದೋಷ ನಿವಾರಣಾ ಮತ್ತು ನಿಯಂತ್ರಣ ಕರ್‍ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶಸ್ತ್ರಚಿಕಿತ್ಸೆ ಮಾಡಲಾಗುತ್ತದೆ, ಮಾನವರಲ್ಲಿ ಶ್ರವಣದೋಷವು ಅತ್ಯಂತ ಸಾಮಾನ್ಯವಾದ ಸಂವೇದನಾ ಕೊರತೆಯಾಗಿದೆ. ಇದು ದೈಹಿಕ ಮತ್ತು ರ್ಥಿಕ ಎರಡೂ ಉತ್ಪಾದಕತೆಯ ತೀವ್ರ ನಷ್ಟಕ್ಕೆ ಕಾರಣವಾಗುತ್ತದೆ. ನಮ್ಮ ಜನಸಂಖ್ಯೆಯ ಇನ್ನೂ ಹೆಚ್ಚಿನ ಶೇಕಡಾವಾರು ಜನರು ಸೌಮ್ಯ ಮಟ್ಟದ ಶ್ರವಣದೋಷ ಮತ್ತು ಏಕಪಕ್ಷೀಯ (ಒಂದು ಬದಿಯ) ಶ್ರವಣದೋಷದಿಂದ ಬಳಲುತ್ತಿದ್ದಾರೆ ಎಂದು ತಿಳಿಸಿದರು.

ಜಿಲ್ಲಾ ಆರ್‌ಸಿಹೆಚ್ ಅಧಿಕಾರಿಗಳಾದ ಡಾ.ಮಲ್ಲಪ್ಪ ಅವರು ಮಾತನಾಡಿದರು, ಶ್ರವಣದೋಷ ಇದ್ದವರು ವೈದ್ಯರ ಸಲಹೆ ಇಲ್ಲದೆ ಸಾಧನಗಳನ್ನು ಬಳಸಬಾರದು, ಹತ್ತಿಕಡ್ಡಿಯಿಂದ ಕಿವಿಯನ್ನು ಸ್ವಚ್ಛಗೊಳಿಸಲು ಪ್ರಯತ್ನಿಸಬಾರದು ಎಂದು ತಿಳಿಸಿದರು.




ಜಿಲ್ಲಾ ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ.ಜ್ಯೋತಿ ಕಟ್ಟಿಮನಿ ಅವರು ಮಾತನಾಡಿ, ನಿಮ್ಮ ಕಿವಿಗಳ ಆರೋಗ್ಯವನ್ನು ಕಾಪಾಡಿಕೊಳ್ಳಿ, ನಿಮ್ಮ ಶ್ರವಣ ಸಾರ್‍ಥ್ಯದ ಆರೈಕೆ ಮಾಡಿ, ಏಕೆಂದರೆ ಜೀವನದಲ್ಲಿ ಜಿವನದಲ್ಲಿ ಆಲಿಸುವಿಕೆ ತುಂಬಾ ಮುಖ್ಯವಾಗಿದೆ. ಮಕ್ಕಳು ಕಿವಿಗೆ ಕಡ್ಡಿ ಅಥವಾ ಚೂಪಾದ ವಸ್ತುಗಳನ್ನು ಹಾಕಬಾರದು, ಕಿವಿಗೆ ಯಾವುದೇ ರೀತಿಯ ಎಣ್ಣೆ ಅಥವಾ ನೀರು ಹಾಕಬಾರದು, ಅತ್ಯಂತ ಜೋರಾದ ಶಬ್ದಗಳಿಂದ ದೂರವಿರಬೇಕು, ಸದರಿ ಕರ್‍ಯಕ್ರಮದ ಸದುಪಯೋಗವನ್ನು ಪಡೆದುಕೊಳ್ಳಬೇಕೆಂದು, ಮಕ್ಕಳಲ್ಲಿ ಶ್ರವಣ ದೋಷ ಕಂಡುಬಂದಲ್ಲಿ ಆಸ್ಪತ್ರೆಗೆ ಹೋಗಿ ತಪಾಸಣೆ ಮಾಡಿಕೊಂಡು ಸಲಹೆ ಮತ್ತು ಸೂಕ್ತ ಚಿಕಿತ್ಸೆ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಈ ಸಂರ್ಭದಲ್ಲಿ (adiologist) ಅವಿನಾಷ, ಶಾಂತಿಲಾಲ್, ಮತಿ ಶರಣಮ್ಮ, ಮತಿ ಶಬಿಹಾ, ಹಾಗೂ ಆರೋಗ್ಯ ಇಲಾಖೆ ಅಧಿಕಾರಿ, ಸಿಬ್ಬಂದಿಗಳು, ಆಶಾ ಕರ್‍ಯರ್ತೆಯರು ಮತ್ತು ನ್ಯೂ ಕನ್ನಡ ಶಿಕ್ಷಕರು ಮತ್ತು ಶಾಲಾ ಮಕ್ಕಳು ಉಪಸ್ಥಿತರಿದ್ದರು. ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಶ್ರೀ ತುಳಸಿರಾಮ ಚವ್ಹಾಣ ಅವರು ನಿರೂಪಣೆ ಹಾಗೂ ಸ್ವಾಗತ ನೆರವೇರಿಸಿದರು. ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಸೂಗೂರಪ್ಪ ಅವರು ವಂದನರ್‍ಪಣೆಯನ್ನು ನೆರವೇರಿಸಿದರು.

## ಪುರಾಣ ಮಂಗಲೋತ್ಸವದಲ್ಲಿ ಪೂಜ್ಯ ಶಿವಕುಮಾರ ಶ್ರೀ ಅಭಿಮತ ಅನ್ನ ನೀಡುವ ರೈತ, ದೇಶ ಕಾಯುವ ಯೋಧನನ್ನು ಮರೆಯಬೇಡಿ




ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಇಡೀ ದೇಶದ ಜನರಿಗೆ ಅನ್ನ ನೀಡುವ ಅನ್ನದಾತ ಹಾಗೂ ತನ್ನ ಜೀವವನ್ನೇ ಪಣಕ್ಕಿಟ್ಟು ನಮ್ಮನ್ನು ಕಾಯುವ ಯೋಧರನ್ನು ನಾವೆಂದೂ ಮರೆಯಬಾರದು ಇವರು ಸದಾ ಸ್ಮರಣೀಯರು ಎಂದು ಕೊಡೆಕಲ್ಲ ಶ್ರೀ ದುರದುಂಡೇಶ್ವರ ಮಠದ ಪರಮ ಪೂಜ್ಯ ಶ್ರೀ ಶಿವಕುಮಾರ ಮಹಾಸ್ವಾಮಿಗಳು ಹೇಳಿದರು. ತಾಲೂಕಿನ ನಾವದಗಿ ಗ್ರಾಮದ ಶ್ರೀಮದ್ ಉಜ್ಜಯಿನಿ ಸದ್ಧರ್ಮ ಪೀಠದ ಶಾಖಾ ಮಠ ಬ್ರಹನ್ಮಠದ ಶ್ರೀ ರಾಜಗುರು ರಾಜೇಂದ್ರ ಒಡೆಯರ್ ಶಿವಾಚಾರ್ಯರ ಪ್ರಥಮ ಗುರು ಪಟ್ಟಾಧಿಕಾರ ವಾರ್ಷಿಕೋತ್ಸವದ ಅಂಗವಾಗಿ ರವಿವಾರ ಹಮ್ಮಿಕೊಂಡ ಶಿವ ಶರಣೆ ಹೇಮರೆಡ್ಡಿ ಮಲ್ಲಮ್ಮ ಪುರಾಣ ಮಂಗಲೋತ್ಸವ, ಯೋಧರಿಗೆ ನುಡಿನಮನ ಹಾಗೂ 1001 ಮುತ್ತೈದೆಯರಿಗೆ ಉಡಿತುಂಬುವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಕಳೆದ ವರ್ಷದಲ್ಲಾದ ನಾವದಗಿ ಶ್ರೀಗಳ ಗುರು ಪಟ್ಟಾಧಿಕಾರ ಕಾರ್ಯಕ್ರಮವು ಇತಿಹಾಸವನ್ನು ನಿರ್ಮಿಸಿತ್ತು ಇದಕ್ಕೆ ಕಾರಣ ಇಲ್ಲಿಯ ಶ್ರೀಮಠದ ಭಕ್ತರು ಇಂಥಹ ಹೃದಯ ವೈಶಾಲ್ಯತೆ ಹೊಂದಿದ ಭಕ್ತರನ್ನು ಪಡೆದ ನಾವದಗಿ ಶ್ರೀಗಳು ನಿಜಕ್ಕೂ ಭಾಗ್ಯವಂತರು ಎಂದರು. ವೀರಶೈವ ಲಿಂಗಾಯತ ಪಂಚಮಸಾಲಿ ಪೀಠದ ಶ್ರೀ 2022 ಜಗದ್ಗುರು ಡಾ. ಮಹದೇವ ಶಿವಾಚಾರ್ಯರು ಸಾನ್ನಿಧ್ಯವಹಿಸಿ ಆಶೀರ್ವಚನ ನೀಡಿ ಹರನಿಗೆ ಆಗದ ಕೆಲಸ ಗುರುವಿನಿಂದ ಸಾಧ್ಯ ಎನ್ನುವಂತೆ ಇಲ್ಲಿಯ ಶ್ರೀಮಠದ ಪೂಜ್ಯರು ಭಕ್ತರನ್ನು ಸಂಸ್ಕರಿಸಿರುವುದರಿಂದಲೇ ಇಂಥಹ ದೊಡ್ಡ ಕಾರ್ಯಕ್ರಮವನ್ನು ಮಾಡಲು ಸಾಧ್ಯವಾಗುತ್ತದೆ. ಈ ಕಾರ್ಯಕ್ರಮ ಗ್ರಾಮದಲ್ಲಿ ನಡೆಯುತ್ತಿರುವ ಕಾರ್ಯಕ್ರಮವಾಗದೇ ದೊಡ್ಡ ಪಟ್ಟಣದಲ್ಲಿ ನಡೆಯುತ್ತಿರುವ ಕಾರ್ಯಕ್ರಮವಾಗಿದೆ ಎಂದು ಅಭಿಪ್ರಾಯಪಟ್ಟರು. ವೇದಿಕೆಯಲ್ಲಿ ದೇವರ ಹಿಪ್ಪರಗಿ ಪರಮಪೂಜ್ಯ ಜಡಿಸಿದ್ದೇಶ್ವರ ಶಿವಾಚಾರ್ಯರು, ಜ್ಯೋತಿಷ್ಯರತ್ನ ರಾಮಲಿಂಗಯ್ಯ ಶ್ರೀಗಳು, ಮನಗೂಳಿ ಪೂಜ್ಯರು, ಶಿವಯೋಗಿ ಶಿವಾಚಾರ್ಯರು, ಬಂಟನೂರ ಕಾಶಿಬಾಯಿ ಅಮ್ಮನವರು ಗ್ರಾಮದ ಗಣ್ಯರು ಹಿರಿಯರು ಇದ್ದರು. ಇದೇ ಸಂದರ್ಭದಲ್ಲಿ ಮಾಜಿ ಸೈನಿಕರಾದ ಶಿವಾನಂದ ಬಿರಾದಾರ, ಶೇಖರಯ್ಯ ತೆಗ್ಗಿನಮಠ, ಪ್ರಕಾಶ್ ಹಡಪದ, ರೈತರದ ಶಿವಾಜಿ ರಾಮನಹಳ್ಳಿ, ಪಿಎಸ್ಐ ಶರಣಗೌಡ ಎಸ್. ದೇಸಾಯಿ ಇವರನ್ನು ಶ್ರೀ ಮಠದಿಂದ ಸನ್ಮಾನಿಸಿ ಗೌರವಿಸಲಾಯಿತು. ಡಾ. ಸೋಮಶೇಖರಯ್ಯ ಹಿರೇಮಠ ಸ್ವಾಗತಿಸಿದರು. ಸಾಹಿತಿ ಬಸವರಾಜ ಗೊರಜಿ ನಿರೂಪಿಸಿ ವಂದಿಸಿದರು.

## ಏ.04 ರಂದು ರಂದು ಪರಿಸರ ಸಾರ್ವಜನಿಕ ಆಲಿಕೆ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.03–ಸಂಡೂರು ತಾಲ್ಲೂಕಿನ ಜೈಸಿಂಗ್ ಪುರ ಗ್ರಾಮದಲ್ಲಿ ಜೆ.ಎಸ್.ಡಬ್ಲ್ಯೂ ಸ್ಟೀಲ್ ಲಿಮಿಟೆಡ್ ಇವರು 'ಜೈಸಿಂಗ್ ಪುರ ನಾರ್ಥ್ ಬ್ಲಾಕ್'ನಲ್ಲಿ 298.59 ಹೆಕ್ಟೇರ್ ಅರಣ್ಯ ಪ್ರದೇಶದಲ್ಲಿ ವಾರ್ಷಿಕ 0.883 ಮಿಲಿಯನ್ ಟನ್ ಉತ್ಪಾದನಾ ಸಾಮರ್ಥ್ಯದ ಕಬ್ಬಿಣದ ಅದಿರಿನ ಗಣಿಗಾರಿಕೆ ಹಾಗೂ 225 ಟಿಪಿಹೆಚ್, 250 ಟಿಪಿಹೆಚ್ ಸಾಮರ್ಥ್ಯದ ಕ್ರಷರ್ ಗಳನ್ನು ಸ್ಥಾಪಿಸುವ ಹೊಸ ಗಣಿಗಾರಿಕೆ ಯೋಜನೆ ಕೈಗೊಳ್ಳಲು ಉದ್ದೇಶಿಸಲಾಗಿದ್ದು, ಇದರ ಸಂಬಂಧ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರ ಅಧ್ಯಕ್ಷತೆಯಲ್ಲಿ ಏ.04 ರಂದು ಬೆಳಿಗ್ಗೆ 11 ಗಂಟೆಗೆ ಜೆ.ಎಸ್. ಡಬ್ಲ್ಯೂ ಸ್ಟೀಲ್ ಲಿಮಿಟೆಡ್ ಇವರು ಜೈಸಿಂಗ್ ಪುರ ಗ್ರಾಮ(ಜೈಸಿಂಗ್ ಪುರ ನಾರ್ಥ್ ಬ್ಲಾಕ್)ದಲ್ಲಿ ಪರಿಸರ ಸಾರ್ವಜನಿಕ ಆಲಿಕೆ ಸಭೆ ನಡೆಸಲು ತೀರ್ಮಾನಿಸಲಾಗಿದೆ.

ಇದಕ್ಕೆ ಸಂಬಂಧಿಸಿದಂತೆ ಉದ್ದೇಶಿತ ಯೋಜನೆಯ ಕಾರ್ಯನಿರ್ವಾಹಕ ಸಾರಾಂಶ ಪ್ರತಿಯನ್ನು ಸಾರ್ವಜನಿಕರ ಮಾಹಿತಿಗಾಗಿ ಸಂಬಂಧಿಸಿದ ಕಚೇರಿಗಳಲ್ಲಿ ಸಾರಾಂಶ ಪ್ರತಿಯನ್ನು ಸಾರ್ವಜನಿಕರ ಗಮನಕ್ಕೆ ಇಡಲಾಗಿದೆ.

ಸುತ್ತಮುತ್ತಲಿನ ಸಾರ್ವಜನಿಕರು ಸಭೆಯಲ್ಲಿ ಪಾಲ್ಗೊಂಡು ಅಭಿಪ್ರಾಯ, ಅಹವಾಲು ಸಲ್ಲಿಸಬಹುದು ಎಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಬಳ್ಳಾರಿ ಪ್ರಾದೇಶಿಕ ಕಚೇರಿಯ ಪರಿಸರ ಅಧಿಕಾರಿ ಸಿದ್ದೇಶ್ವರ ಬಾಬು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರ್ನಾಟಕ ಜಾನಪದ ಅಕಾಡೆಮಿ: ವಾರ್ಷಿಕ ಗೌರವ ಪ್ರಶಸ್ತಿಗೆ ಕೆ.ಶಂಕರಪ್ಪ ಆಯ್ಕೆ

ಬಳ್ಳಾರಿ,ಮಾ.03–ಕರ್ನಾಟಕ ಜಾನಪದ ಅಕಾಡೆಮಿ ವತಿಯಿಂದ 2024ನೇ ಸಾಲಿನ ವಾರ್ಷಿಕ ಗೌರವ ಪ್ರಶಸ್ತಿಗೆ ಜಿಲ್ಲೆಯ ಬಳ್ಳಾರಿ ತಾಲ್ಲೂಕಿನ ಶ್ರೀಧರಗಡ್ಡೆ ಗ್ರಾಮದ ಗುಡಾರ ನಗರ ಬಡಾವಣೆ ಬುಡಗ ಜಂಗಮ ಕಾಲೋನಿಯ ನಿವಾಸಿ ಕೆ.ಶಂಕರಪ್ಪ ಅವರು ಹಗಲುವೇಷ ಕಲಾ ಪ್ರಕಾರದಲ್ಲಿ ಆಯ್ಕೆ ಮಾಡಲಾಗಿದೆ ಎಂದು ಕರ್ನಾಟಕ ಜಾನಪದ ಅಕಾಡೆಮಿಯ ರಿಜಿಸ್ಟ್ರಾರ್ ಎನ್.ನಮ್ರತ ಅವರು ತಿಳಿಸಿದ್ದಾರೆ.

ಕಲಾವಿದರಿಗೆ ನೀಡುವ ಗೌರವ ಪ್ರಶಸ್ತಿಯ ಮೊತ್ತ ರೂ.25,000/–ಮತ್ತು ಸ್ಮರಣಿಕೆ, ಶಾಲು, ಹಾರ, ಫಲತಾಂಬೂಲ ನೀಡಿ ಗೌರವಿಸಲಾಗುವುದು.

ಬೆಂಗಳೂರಿನಲ್ಲಿ ನಡೆದ ಸರ್ವ ಸದಸ್ಯರ ಸಭೆಯ ತೀರ್ಮಾನದಂತೆ 2024ನೇ ಸಾಲಿನ ವಾರ್ಷಿಕ ಗೌರವ ಪ್ರಶಸ್ತಿಗೆ ಜಾನಪದ ಕಲಾವಿದರನ್ನು ಆಯ್ಕೆ ಮಾಡಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 7 ವರ್ಷದ ಬಾಲಕ ರೋಜಾಚರಣೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.1–ನಗರದ ಫತ್ತೇಶಾ ಮೊಹಲ್ಲಾ ನಿವಾಸಿ ಮುದಸ್ಸರ್ ಶಾಲಗಾರ ಅವರ ಪುತ್ರ 7 ವರ್ಷದ ಬಾಲಕ ಮಹಮ್ಮದ ಝಿಯಾನ್ ಶಾಲಗಾರ ಪವಿತ್ರ ರಮಜಾನ ಆಚರಣೆ ಮಾಡಿದ್ದಾನೆ.

ಪ್ರಥಮ ರೋಜಾ 13 ಗಂಟೆ ನಿರಂತರ ನೀರು, ಅನ್ನ, ಆಹಾರ ಇಲ್ಲದೇ ರೋಜಾ ವೃತ (ಉಪವಾಸ)ವನ್ನು ಆಚರಿಸಿದ್ದಾನೆ.

## ಶೇ.20ರಷ್ಟು ರಿಯಾಯಿತಿ ದರದಲ್ಲಿ ಲಿಡ್ಕರ್ ವಸ್ತುಗಳು ಮಾರಾಟ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.03–ಲಿಡ್ಕರ್ ವತಿಯಿಂದ ನಗರದ ಬುಡಾ ಕಾಂಪ್ಲೆಕ್ಸ್‌ನ ಶಾಪ್ ನಂ.24ರ ಲಿಡ್ಕರ್ ಲೆದರ್ ಎಂಪೋರಿಯಮ್ ಮಳಿಗೆಯಲ್ಲಿ ಲಿಡ್ಕರ್‌ನ ಎಲ್ಲಾ ಚರ್ಮವಸ್ತುಗಳನ್ನು ಶೇ.20 ರಷ್ಟು ರಿಯಾಯಿತಿ ದರದಲ್ಲಿ ಮಾರಾಟ ಮಾಡಲಾಗುತ್ತಿದೆ ಎಂದು ಲಿಡ್ಕರ್ ನ ಜಿಲ್ಲಾ ವ್ಯವಸ್ಥಾಪಕ ಟಿ.ಸಂಜೀವಪ್ಪ ಅವರು ತಿಳಿಸಿದ್ದಾರೆ. ಮಾ.03 ರಿಂದ 23 ರವರೆಗೆ (21 ದಿನ) ಎಲ್ಲಾ ಚರ್ಮವಸ್ತುಗಳಿಗೂ ಶೇ.20 ರಷ್ಟು ರಿಯಾಯಿತಿ ನೀಡಲಾಗುವುದು. ಸಾರ್ವಜನಿಕರು ಬೆಳಿಗ್ಗೆ 10 ರಿಂದ ಮಧ್ಯಾಹ್ನ 2 ರ ವರೆಗೆ ಮತ್ತು ಸಂಜೆ 4 ರಿಂದ 8 ಗಂಟೆಯವರೆಗೆ ಭೇಟಿ ನೀಡಬಹುದು. ಮಾಹಿತಿಗಾಗಿ ದೂ.08392271741, ಮೊ.7676591259ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶೇ.20ರಷ್ಟು ರಿಯಾಯಿತಿ ದರದಲ್ಲಿ ಲಿಡ್ಕರ್ ವಸ್ತುಗಳು ಮಾರಾಟ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.03–ಲಿಡ್ಕರ್ ವತಿಯಿಂದ ನಗರದ ಬುಡಾ ಕಾಂಪ್ಲೆಕ್ಸ್‌ನ ಶಾಪ್ ನಂ.24ರ ಲಿಡ್ಕರ್ ಲೆದರ್ ಎಂಪೋರಿಯಮ್ ಮಳಿಗೆಯಲ್ಲಿ ಲಿಡ್ಕರ್‌ನ ಎಲ್ಲಾ ಚರ್ಮವಸ್ತುಗಳನ್ನು ಶೇ.20 ರಷ್ಟು ರಿಯಾಯಿತಿ ದರದಲ್ಲಿ ಮಾರಾಟ ಮಾಡಲಾಗುತ್ತಿದೆ ಎಂದು ಲಿಡ್ಕರ್ ನ ಜಿಲ್ಲಾ ವ್ಯವಸ್ಥಾಪಕ ಟಿ.ಸಂಜೀವಪ್ಪ ಅವರು ತಿಳಿಸಿದ್ದಾರೆ.

ಮಾ.03 ರಿಂದ 23 ರವರೆಗೆ (21 ದಿನ) ಎಲ್ಲಾ ಚರ್ಮವಸ್ತುಗಳಿಗೂ ಶೇ.20ರಷ್ಟು ರಿಯಾಯಿತಿ ನೀಡಲಾಗುವುದು. ಸಾರ್ವಜನಿಕರು ಬೆಳಿಗ್ಗೆ 10 ರಿಂದ ಮಧ್ಯಾಹ್ನ 2 ರ ವರೆಗೆ ಮತ್ತು ಸಂಜೆ 4 ರಿಂದ 8 ಗಂಟೆಯವರೆಗೆ ಭೇಟಿ ನೀಡಬಹುದು.

ಮಾಹಿತಿಗಾಗಿ ದೂ.08392271741, ಮೊ.7676591259 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವೈದ್ಯಾಧಿಕಾರಿ ಡಾ.ಅಬ್ದುಲ್ಲಾ ಅವರಿಗೆ "ವೈದ್ಯ ಶ್ರೀ" ಪ್ರಶಸ್ತಿ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.03–ಕರ್ನಾಟಕ ಸರ್ಕಾರವು ವೈದ್ಯರ ಸೇವೆ ಗೌರವಿಸುವ ಜೊತೆಗೆ ಸಮುದಾಯದಲ್ಲಿ ಸಾಸ್ತ್ಯ ಕಾಪಾಡುವ ಬೆಂಬಲವಾಗಿ ಬಿಜಾಪುರದಲ್ಲಿ ಜರುಗಿದ ಕರ್ನಾಟಕ ರಾಜ್ಯ ಸರ್ಕಾರಿ ವೈದ್ಯಾಧಿಕಾರಿಗಳ 31ನೇ ರಾಜ್ಯ ಸಮ್ಮೇಳನದಲ್ಲಿ ಬಳ್ಳಾರಿ ಜಿಲ್ಲೆಯ ಜಿಲ್ಲಾ ರೋಗವಾಹಕ ಆಶ್ರೀತ ರೋಗಗಳ ನಿಯಂತ್ರಣ ಅಧಿಕಾರಿ ಡಾ.ಆರ್.ಅಬ್ದುಲ್ಲಾ ಅವರಿಗೆ "ವೈದ್ಯ ಶ್ರೀ" ಪ್ರಶಸ್ತಿ ನೀಡಿ ಗೌರವಿಸಲಾಗಿದೆ.

ಬಳ್ಳಾರಿ ಜಿಲ್ಲೆಯಲ್ಲಿ ಕಳೆದ 25 ವರ್ಷಗಳಿಂದ ವಿವಿಧ ಆರೋಗ್ಯ ಕೇಂದ್ರಗಳಲ್ಲಿ ವೈದ್ಯಾಧಿಕಾರಿಗಳಾಗಿ, ತಾಲ್ಲೂಕ ಆರೋಗ್ಯ ಅಧಿಕಾರಿಗಳಾಗಿ, ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿಗಳಾಗಿ ಸೇವೆ ಸಲ್ಲಿಸಿ ಪ್ರಸ್ತುತ ಜಿಲ್ಲಾ ರೋಗವಾಹಕ ಆಶ್ರೀತ ರೋಗಗಳ ನಿಯಂತ್ರಣ ಅಧಿಕಾರಿಗಳಾಗಿ ಕರ್ತವ್ಯ ನಿರ್ವಹಿಸುತ್ತಿದ್ದು, ಇವರ ಶ್ಲಾಘನೀಯ ಸೇವೆಯನ್ನು ಪರಿಗಣಿಸಿ "ವೈದ್ಯ ಶ್ರೀ" ಪ್ರಶಸ್ತಿಯನ್ನು ನೀಡಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಡಿಯೋ ಕಾನ್ಫರೆನ್ಸ್ ಮೂಲಕ 'ಆರೋಗ್ಯ ಸೇವೆ ಗಗನ ಕುಸುಮವಾಗಿರುವ ಈ ದಿನಗಳಲ್ಲಿ ಬಡವರು ಸರ್ಕಾರಿ ಆಸ್ಪತ್ರೆಗಳನ್ನೇ ನಂಬಿದ್ದಾರೆ. ಹಾಗಾಗಿ ಸರ್ಕಾರಿ ವೈದ್ಯಾಧಿಕಾರಿಗಳ ಜವಾಬ್ದಾರಿ ಹೆಚ್ಚಿದ್ದು, ಜನತೆಗೆ ಗುಣಮಟ್ಟದ ಸೇವೆ ನೀಡಬೇಕು. ಇದಕ್ಕಾಗಿ ಸರ್ಕಾರ ಅಗತ್ಯ ಮೂಲ ಸೌಕರ್ಯ ಒದಗಿಸಲಾಗುವುದು' ಎಂಬ ಸಂದೇಶ ನೀಡಿದರು.

ಕಾರ್ಯಕ್ರಮದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲ ಸೌಲಭ್ಯ ಅಭಿವೃದ್ಧಿ ಸಚಿವ ಎಮ್.ಬಿ ಪಾಟೀಲ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡುರಾವ್, ಜವಳಿ ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ್ ಎಸ್ ಪಾಟೀಲ್ ಅವರುಗಳು ಸೇರಿದಂತೆ ಇಲಾಖೆಯ ಉನ್ನತ ಅಧಿಕಾರಿಗಳ ಸಮ್ಮುಖದಲ್ಲಿ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು.

## ಇಂದು ಬೃಹತ್ ಉದ್ಯೋಗ ಮೇಳ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.03–ಜಿಲ್ಲಾ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ವತಿಯಿಂದ ಮಾ.05 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಶ್ರೀಮತಿ ಸರಳಾದೇವಿ ಸತೀಶ್ಚಂದ್ರ ಅಗರ್‌ವಾಲ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜು (ಸ್ವಾಯತ್ತ), ಇಲ್ಲಿ ಬೃಹತ್ ಉದ್ಯೋಗ ಮೇಳ ಆಯೋಜಿಸಲಾಗಿದೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕೌಶಲ್ಯಾಭಿವೃದ್ಧಿ ಕಚೇರಿ ಇವರ ಸಂಯುಕ್ತಾಶ್ರಯದಲ್ಲಿ ಬಳ್ಳಾರಿ ಸಂಜೀವಿನಿ–ಕೆ.ಎಸ್.ಎಲ್.ಪಿ.ಎಸ್. ಡಿಡಿಯುಜಿಕೆವೈ ಯೋಜನೆಯಡಿ ಆಯೋಜಿಸಲಾಗುತ್ತಿದ್ದು, ಉದ್ಯೋಗ ಮೇಳದಲ್ಲಿ ಸುಮಾರು 30 ರಿಂದ 40 ಕಂಪನಿಗಳು ಭಾಗವಹಿಸಲಿವೆ. ನಿರುದ್ಯೋಗ ಯುವಕ, ಯುವತಿಯರಿಗೆ ಉದ್ಯೋಗ ಕಲ್ಪಿಸಲು ಉದ್ದೇಶಿಸಲಾಗಿದೆ.

**ವಿದ್ಯಾರ್ಹತೆ:**

ಎಸ್.ಎಸ್.ಎಲ್.ಸಿ, ಪಿ.ಯು.ಸಿ, ಐ.ಟಿ.ಐ, ಡಿಪ್ಲೋಮಾ, ಪದವಿ ಮತ್ತು ಸ್ನಾತಕೋತ್ತರ ಪದವಿ ವಿದ್ಯಾರ್ಹತೆವುಳ್ಳ ಉದ್ಯೋಕಾಂಕ್ಷಿಗಳು ಪೂರಕ ದಾಖಲಾತಿಗಳೊಂದಿಗೆ ಮೇಳದಲ್ಲಿ ಭಾಗವಹಿಸಬಹುದಾಗಿದೆ.

ಉದ್ಯೋಗಾಕಾಂಕ್ಷಿಗಳು ನೋಂದಣಿಗಾಗಿ ಇಲಾಖೆಯಿಂದ ಸೃಜಿಸಲಾಗಿರುವ ಗೂಗಲ್ ಫಾರ್ಮ್ ಲಿಂಕ್ https://forms.gle/YhbVhDQqMmHRF1uV7 ಗೆ ಭೇಡಿ ನೋಂದಾಯಿಸಿಕೊಳ್ಳಬಹುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೌಶಲ್ಯ ಮಿಷನ್ ಕಚೇರಿ ಅಥವಾ ದೂ.08392–294230 ಮತ್ತು ಮೊ.9844444958,6361607038 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಕೌಶ್ಯಲಾಭಿವೃದ್ಧಿ ಅಧಿಕಾರಿ ಪ್ರಾಣೇಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.03–ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪುರುಷೋತ್ತಮ ಬಿಳಿಮಲೆ ಅವರು ಮಾರ್ಚ್ 4 ರಂದು ಮಂಗಳವಾರ ಬೆಳಿಗ್ಗೆ 11.30 ಗಂಟೆಗೆ ಕಲಬುರಗಿಯಿಂದ ರಸ್ತೆ ಮೂಲಕ ಮಹಾರಾಷ್ಟ್ರ ರಾಜ್ಯದ ಅಕ್ಕಲಕೋಟೆಗೆ ಪ್ರಯಾಣಿಸಿ ವಾಸ್ತವ್ಯ ಮಾಡುವರು.

ಮಾರ್ಚ್ 5 ರಂದು ಬುಧವಾರ ಬೆಳಿಗ್ಗೆ 9.30 ಗಂಟೆಗೆ ಅಕ್ಕಲಕೋಟೆಯಲ್ಲಿ ಕನ್ನಡ–ಮರಾಠಿ ಸಂಬಂಧ (ಇಚಿಟಿಟಚಿಜಚಿ–ಒಚಿಡಿಚಿಣಊ ಖಜಟಚಿಣುಠಟ) ಕುರಿತು ಹಮ್ಮಿಕೊಳ್ಳಲಾದ ಎರಡು ದಿನಗಳ ರಾಷ್ಟ್ರೀಯ ಸಮ್ಮೇಳನದಲ್ಲಿ ಭಾಗವಹಿಸುವರು. ನಂತರ ರಾತ್ರಿ 7 ಗಂಟೆಗೆ ಅಕ್ಕಲಕೋಟೆಯಿಂದ ಬೆಂಗಳೂರಿಗೆ ಪ್ರಯಾಣಿಸುವರು.


## ಅನರ್ಹ ಫಲಾನುಭವಿಗಳ ತಾತ್ಕಾಲಿಕ ಪಟ್ಟಿ ಪ್ರಕಟ: ಆಕ್ಷೇಪಣೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.03–ಕಲಬುರಗಿ ಮಹಾನಗರಪಾಲಿಕೆಯ ಶೇ. 24.10ರ ಯೋಜನೆಯಡಿ 2024–25ನೇ ಸಾಲಿಗಾಗಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಜನರಿಗೆ ಸರ್ಕಾರಿ ಕೈಗಾರಿಕಾ ಪ್ರದೇಶಗಳಲ್ಲಿ ನಿವೇಶನಗಳು/ ಉದ್ದಿಮೆ ಶೆಡ್ಡುಗಳು ಸ್ವಾಧೀನಕ್ಕೆ ಸಹಾಯಧನಕ್ಕೆ ಸಂಬಂಧಿಸಿದಂತೆ ಅನರ್ಹ ಫಲಾನುಭವಿಗಳ ತಾತ್ಕಾಲಿಕ ಪಟ್ಟಿಯನ್ನು ಕಲಬುರಗಿ ಮಹಾನಗರ ಪಾಲಿಕೆಯ ನೋಟೀಸ್ ಬೋರ್ಡ್‌ನಲ್ಲಿ ಈಗಾಗಲೇ ಪ್ರಚುರಪಡಿಸಲಾಗಿದೆ ಎಂದು ಕಲಬುರಗಿ ಮಹಾನಗರ ಪಾಲಿಕೆಯ ಆಯುಕ್ತರು ತಿಳಿಸಿದ್ದಾರೆ.

ಸದರಿ ತಾತ್ಕಾಲಿಕ ಅನರ್ಹ ಪಟ್ಟಿಗೆ ಏನಾದರೂ ಆಕ್ಷೇಪಣೆಗಳು ಇದ್ದಲ್ಲಿ 2025ರ ಮಾರ್ಚ್ 21 ರೊಳಗಾಗಿ ಪೂರಕ ದಾಖಲೆಗಳೊಂದಿಗೆ ಕಲಬುರಗಿ ಮಹಾನಗರ ಪಾಲಿಕೆ ಕಚೇರಿಯಲ್ಲಿ ಆಕ್ಷೇಪಣೆ ಸಲ್ಲಿಸಬೇಕು. ಕೊನೆಯ ದಿನಾಂಕದ ನಂತರ ಬಂದ ಆಕ್ಷೇಪಣಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಅವರು ತಿಳಿಸಿದ್ದಾರೆ.

# ಪಿಎಂ ವಿಶ್ವಕರ್ಮ ಯೋಜನೆಯ ಜಾಗೃತಿ ಅಭಿಯಾನ




ಮಲ್ಲಮ ನುಡಿ ವಾರ್ತೆ

ಕೊಪ್ಪಳ : ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಮತ್ತು ಹುಬ್ಬಳ್ಳಿಯ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳು (ಎಮ್.ಎಸ್.ಎಮ್.ಇ)ರವರ ಸಹಯೋಗದೊಂದಿಗೆ ಇತ್ತೀಚೆಗೆ ಕುಷ್ಟಗಿ ರಸ್ತೆಯ ಟಣಕನಕಲ್ ಗ್ರಾಮದಲ್ಲಿರುವ ಕೊಪ್ಪಳ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಹಮ್ಮಿಕೊಳ್ಳಲಾದ ಪಿಎಂ ವಿಶ್ವಕರ್ಮ ಯೋಜನೆಯ ಜಾಗೃತಿ ಅಭಿಯಾನ ಕಾರ್ಯಕ್ರಮವು ಯಶಸ್ವಿಯಾಗಿ ಜರುಗಿತು.

ಕೊಪ್ಪಳ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಕೆ.ಗವಿಶಂಕರ್ ಅವರು ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಬಳಿಕ ಮಾತನಾಡಿ, ಕೇಂದ್ರ ಪುರಸ್ಕೃತ ಪ್ರಧಾನಮಂತ್ರಿ ವಿಶ್ವಕರ್ಮ ಯೋಜನೆಯು ದೇಶದ ಸಾಂಪ್ರದಾಯಿಕ ಕೆಲೆಗಳಿಗೆ ಉತ್ತೇಜ ನೀಡುವುದರ ಮೂಲಕ ಕುಶಲಕರ್ಮಿಗಳ ಅಭ್ಯುದಯಕ್ಕೆ ನೆರವು ಕಲ್ಪಿಸಲಾಗುತ್ತಿದೆ. ಕಾರ್ಯಕ್ರಮದ ಮೂಲಕ ತಾಂತ್ರಿಕ ಜ್ಞಾನ ಹಾಗೂ ಬ್ಯಾಂಕಿನ ಮೂಲಕ ಸಿಗುವಂತಹ ಸಾಲ ಸೌಲಭ್ಯಗಳ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ. ಈ ಅಭಿಯಾನಕ್ಕೆ ಜಿಲ್ಲೆಯಲ್ಲಿ ಉತ್ತಮ ಸ್ಪಂದನೆ ದೊರೆ–ಯುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಹುಬ್ಬಳ್ಳಿ ಎಮ್.ಎಸ್.ಎಮ್.ಇ ಸಹಾಯಕ ನಿರ್ದೇಶಕ ಕಿರಣ ಕುಮಾರ್, ಪಿ.ಎಂ ವಿಶ್ವಕರ್ಮ ಜಿಲ್ಲಾ ವ್ಯವಸ್ಥಾಪಕ ಚಂದ್ರಶೇಖರ್, ಜಿಲ್ಲಾ ಕೌಶಲ್ಯ ಮಿಷನ್ ಸಹಾಯಕ ನಿರ್ದೇಶಕ ಮಂಜುನಾಥ ಬೆಲ್ಲದ್, ಜಿಲ್ಲಾ ಲೀಡ್ ಬ್ಯಾಂಕ್ ವ್ಯವಸ್ಥಾಪಕ ವಿರೇಂದ್ರಕುಮಾರ, ತಳಕಲ್‌ನ ವಿಶ್ವೇಶ್ವರಯ್ಯ ವಿಶ್ವವಿದ್ಯಾಲಯ ಕೌಶಲ್ಯ ಕೇಂದ್ರದ ರಾಜೇಶ್ವರಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ತರಬೇತಿದಾರರು, ವಿಶ್ವಕರ್ಮ ಸಮಾಜದ ಪದಾದಿಕಾರಿಗಳು, ವಿಶ್ವಕರ್ಮ ಫಲಾನುಭವಿಗಳು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ; ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.03–ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ 2023–24 ನೇ ಸಾಲಿನ ಮೆಟ್ರಿಕ್ ನಂತರದ ಕೋರ್ಸುಗಳ (ವೃತ್ತಿಪರ ಪದವಿ, ಸ್ನಾತಕೋತ್ತರ ಪದವಿ, ವೃತ್ತಿಪರ ಸ್ನಾತಕೋತ್ತರ ಪದವಿ ಕೋರ್ಸ್)ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ–1 ರ ಅಲೆಮಾರಿ ಮತ್ತು ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ ಶುಲ್ಕ ಮರುಪಾವತಿ ಸೌಲಭ್ಯಕ್ಕಾಗಿ ಈಗಾಗಲೇ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆಯ ಅವಧಿಯನ್ನು ಮಾ.15 ರ ವರೆಗೆ ವಿಸ್ತರಿಸಲಾಗಿದೆ.

ಕೋರ್ಸ್ಗಳ ಕೌನ್ಸೆಲಿಂಗ್ ತಡವಾಗಿ ಪ್ರಾರಂಭವಾಗಿರುವ ಕಾರಣ ಮತ್ತು ಹಿಂದಿನ ಶೈಕ್ಷಣಿಕ ವರ್ಷದ ಫಲಿತಾಂಶ ತಡವಾಗಿ ಬಂದ ಕಾರಣ ನಿಗದಿಪಡಿಸಿದ ಅವಧಿಯೊಳಗೆ ಅರ್ಜಿಗಳು ಸಲ್ಲಿಕೆಯಾಗದ ಕಾರಣ ಅವಧಿ ವಿಸ್ತರಿಸಲಾಗಿದೆ.

ಅರ್ಜಿ ಸಲ್ಲಿಸಲು ಆನ್‌ಲೈನ್ ವೆಬ್‌ಸೈಟ್ ವಿಳಾಸ https://ssp.postmatric.karnataka.gov.in/ ಗೆ ಭೇಟಿ ನೀಡಬಹುದು. ಹೆಚ್ಚಿನ ಮಾಹಿತಿಗಾಗಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರ ಹತ್ತಿರದ ಡಿ.ದೇವರಾಜು ಅರಸು ಭವನದ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಗೆ ಭೇಟಿ ನೀಡಿ ಮಾಹಿತಿ ಪಡೆಯಬಹುದು ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಭಾನುಮತಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಹಾಬಾದ ನಗರಸಭೆಯಿಂದ ಇ–ಖಾತಾ ಅಭಿಯಾನ

ಕಲಬುರಗಿ,ಮಾ.3–ಇ–ಆಸ್ತಿ ತಂತ್ರಾಂಶವನ್ನು ಸರಳೀಕರಣಗೊಳಿಸಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಈಗಾಗಲೇ ಆಸ್ತಿ ಕಣಜ ತಂತ್ರಾಂಶದಲ್ಲಿ ಗಣಕೀಕರಣಗೊಳಿಸಿರುವ ಮತ್ತು ಇದುವರೆವಿಗೂ ಇ–ಆಸ್ತಿ ನಮೂನೆ–3ನ್ನು ಪಡೆಯದಿರುವ ಸ್ವತ್ತುಗಳಿಗೆ ಸಂಬಂಧಪಟ್ಟ ಅವಶ್ಯಕ ದಾಖಲೆಗಳೊಂದಿಗೆ ನೋಂದಣಿ ಮಾಡಿಕೊಳ್ಳಲು 3 ತಿಂಗಳು ಮಾತ್ರ ಕಾಲಾವಕಾಶ ನೀಡಲಾಗಿದ್ದು, ಇದರ ಸದುಪಯೋಗಪಡೆಯಬೇಕೆಂದು ಶಹಾಬಾದ ನಗರಸಭೆಯ ಪೌರಾಯುಕ್ತರು ತಿಳಿಸಿದ್ದಾರೆ.

ಮುಂಜಾಗ್ರತೆ ಅನುಸರಿಸುವುದು ಅಗತ್ಯ

# ಹಕ್ಕಿಜ್ವರದ ಬಗ್ಗೆ ಆತಂಕ ಬೇಡ : ಡಿಸಿ ಜಾನಕಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.3–ಜಿಲ್ಲೆಯ ಜನತೆ ಹಕ್ಕಿ ಜ್ವರದ ಬಗ್ಗೆ ಆತಂಕ ಪಡುವುದು ಬೇಡ. ಆದರೆ ಮುಂಜಾಗ್ರತೆ ಕ್ರಮಗಳನ್ನು ಅನುಸರಿಸುವುದು ಅಗತ್ಯವಾಗಿದೆ ಎಂದು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಹಕ್ಕಿ ಶೀತ ಜ್ವರ ಹರಡದಂತೆ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಹಕ್ಕಿ ಜ್ವರ ಅಥವಾ ಕೋಳಿ ಶೀತ ಜ್ವರ ಎಚ್5ಎನ್1ವೈರಸ್‌ನಿಂದ ಹರಡುವ ಖಾಯಿಲೆಯಾಗಿದ್ದು, ಹಕ್ಕಿಯಿಂದ ಹಕ್ಕಿಗಳಿಗೆ ಹರಡುತ್ತಿದ್ದು, ಕೆಲವೊಮ್ಮೆ ರೋಗ ಪೀಡಿತ ಹಕ್ಕಿಗಳ ಸಂಪರ್ಕದಿಂದ ಮನುಷ್ಯರಲ್ಲೂ ಈ ಜ್ವರದ ಲಕ್ಷಣಗಳು ಕಂಡುಬರುವ ಸಾಧ್ಯತೆ ಇದೆ ಎಂದರು.

ರಾಜ್ಯದ ಚಿಕ್ಕಬಳ್ಳಾಪೂರ, ಬಳ್ಳಾರಿ ಜಿಲ್ಲೆಗಳಲ್ಲಿ ಹಕ್ಕಿಜ್ವರದ ಪ್ರಕರಣಗಳು ಕಂಡುಬಂದಿವೆ. ಆದರೆ ಜಿಲ್ಲೆಯಲ್ಲಿ ಯಾವುದೇ ಪ್ರಕರಣಗಳು ಕಳೆದ 10 ವರ್ಷಗಳಲ್ಲಿ ಕಂಡುಬಂದಿಲ್ಲವಾದರೂ ಮುಂಜಾಗ್ರತಾ ಕ್ರಮ ಅನುಸರಿಸುವುದು ಅಗತ್ಯವಾಗಿದೆ. ಜಿಲ್ಲೆಯಲ್ಲಿ ಹಕ್ಕಿಜ್ವರ ಹರಡದಂತೆ ಮುಂಜಾಗ್ರತವಾಗಿ 28 ಕಾರ್ಯಪಡೆಗಳನ್ನು ರಚಿಸಲಾಗಿದ್ದು, ಕಾರ್ಯಪಡೆ ದಿನಂಪ್ರತಿ ಕೋಳಿ ಫಾರ್ಮಗಳಿಗೆ ಭೇಟಿ ನೀಡಿ ಪರಿಶೀಲಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ಪಶು ಇಲಾಖೆಯ ಉಪನಿರ್ದೇಶಕ ಎಸ್.ಎಚ್.ಕರಡಿಗುಡ್ಡ ಮಾತನಾಡಿ, ಜಿಲ್ಲೆಯಲ್ಲಿ 348 ಮಾಂಸದ ಫಾರ್ಮ ಹಾಗೂ 69 ಮೊಟ್ಟೆ ಕೋಳಿ ಫಾರ್ಮ ಇವೆ. ಜಿಲ್ಲೆಯಲ್ಲಿ ರಚಿಸಲಾದ ಪ್ರತಿಯೊಂದು ಕಾರ್ಯಪಡೆ ಫಾರ್ಮಗಳಿಗೆ ಭೇಟಿ ನೀಡಿ ಪರಿಶೀಲನೆ ಮಾಡುತ್ತಿದ್ದಾರೆ. ಯಾವುದೇ ಪ್ರಕರಣಗಳು ಕಂಡುಬಂದಿರುವದಿಲ್ಲ. ಆದರೂ ಸಹ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದ್ದು, ಪಶು ಸಹಾಯವಾಣಿ 1962 ಸಂಖ್ಯೆಗೆ ಕರೆ ಸಹ ಮಾಡಬಹುದಾಗಿದೆ ಎಂದು ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಮಂಜುನಾಥ ಡಿ. ಮಾತನಾಡಿ, ರೋಗ ಪೀಡಿತ ಕೋಳಿ ಅಥವಾ ಹಕ್ಕಿಗಳ ಮಾಂಸವನ್ನು ಸರಿಯಾಗಿ ಬೇಯಿಸದೇ ತಿನ್ನುವದರಿಂದ, ಸೋಂಕಿರುವ ಹಸಿ ಮೊಟ್ಟೆ ಸೇವನೆ ಮಾಡುವುದರಿಂದ ಹಾಗೂ ಕೋಳಿಗಳ ಹಿಕ್ಕೆಗಳು ಮನುಷ್ಯರು ಕುಡಿಯುವ ನೀರಿನೊಂದಿಗೆ ಬೆರೆತು ಕಲುಷಿತಗೊಂಡಾಗ ಈ ಖಾಯಿಲೆ ಹರಡುತ್ತದೆ. ಕೆಲವು ಸಂದರ್ಭಗಳಲ್ಲಿ ಗಾಳಿಯ ಮೂಲಕವೂ ಮನುಷ್ಯರಿಗೆ ಹರಡುವ ಸಾಧ್ಯತೆ ಇರುತ್ತದೆ ಎಂದರು.

ಸಾಮಾನ್ಯವಾಗಿ ಹಕ್ಕಿಜ್ವರ ಜ್ವರದ ಲಕ್ಷಣಗಳಂತೆಯೇ ಇರುತ್ತದೆ. ಜ್ವರ ಮತ್ತು ಕೆಮ್ಮು, ಶೀತ, ತಲೆನೋವು, ಗಂಟಲು ಕೆರೆತ, ನೆಗಡಿ, ಸ್ನಾಯುಗಳಲ್ಲಿ ನೋವು,ಆಯಾಸ ಕಾಣಿಸಿಕೊಳ್ಳುತ್ತದೆ. ಕೆಲವೊಮ್ಮೆ ವಾಂತಿ ಮತ್ತು ಭೇದಿಯೂ ಆಗಬಹುದು. ಇಂತಹ ಲಕ್ಷಣಗಳು ಕಂಡುಬಂದಾಗ ಸಮೀಪದ ಸರಕಾರಿ ಆಸ್ಪತ್ರೆ ಇಲ್ಲವೇ ಜಿಲ್ಲಾ ನೋಡಲ್ ಅಧಿಕಾರಿ ಡಾ.ವೆಂಕಟೇಶ ಸಂಕ್ರಿ (9448928662) ಹೆಲ್ಪಲೈನ್ ನಂ.104ಗೆ ಸಂಪರ್ಕಿಸಬಹುದಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ದಯಾನಂದ ಕರೆನ್ನವರ, ಪಶುವೈದ್ಯಾಧಿಕಾರಿ ಪದರಾ ಸೇರಿದಂತೆ ಆಯಾ ತಾಲೂಕಿನ ಪಶುವೈದ್ಯಾಧಿಕಾರಿಗಳು ಉಪಸ್ಥಿತರಿದ್ದರು.

# ಇಳಕಲ್ಲ ಗ್ರಾಮೀಣ ಠಾಣೆ ಕಟ್ಟಡಕ್ಕೆ ಭೂಮಿ ಪೂಜೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.3–ಜಿಲ್ಲೆಯ ಇಳಕಲ್ಲ ಪಟ್ಟಣದಲ್ಲಿ ಗ್ರೇಡ್–5 ಗ್ರಾಮೀಣ ಪೋಲಿಸ್ ಠಾಣೆಯ ಕಟ್ಟಡ ಕಾಮಗಾರಿಗೆ ಶಾಸಕ ವಿಜಯಾನಂದ ಕಾಶಪ್ಪನವರ ಭೂಮಿ ಪೂಜೆ ನೆರವೇರಿಸಿದರು.

ರಾಜ್ಯ ಪೊಲೀಸ್ ವಸತಿ ಮತ್ತು ಮೂಲಭೂತ ಸೌಲಭ್ಯ ಅಭಿವೃದ್ಧಿ ನಿಗಮ ನಿಯಮಿತ ಉಪವಿಭಾಗ ವಿಜಯಪುರ ವತಿಯಿಂದ ನಡೆಯುವ 1.94 ಕೋಟಿ ರೂ.ಗಳ ಕಾಮಗಾರಿ 9 ತಿಂಗಳಲ್ಲಿ ಪೂರ್ಣಗೊಳ್ಳಲಿದೆ ಎಂದು ಹೇಳಿದ ಕಾಶಪ್ಪನವರ, ಕೊರತೆಯಿರುವ ಪೋಲಿಸ್ ಸಿಬ್ಬಂದಿಯನ್ನು ಸರಿಪಡಿಸಿಕೊಡುವಂತೆ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿಗಳಿಗೆ ಕೇಳಿದ್ದೇನೆ ಎಂದು ಹೇಳಿದರು.

ಈತನಕ ಗ್ರಾಮೀಣ ಠಾಣೆ ನಗರ ಠಾಣೆಯಲ್ಲೇ ಕಾರ್ಯನಿರ್ವಹಿಸುತ್ತಿತ್ತು. ಈಗ ಹೊಸ ಕಟ್ಟಡ ನಿರ್ಮಾಣಗೊಳ್ಳಲಿದೆ ಎಂದ ಅವರು, ಪೊಲೀಸ ಇಲಾಖೆ ಹಾಗೂ ಕ್ಷೇತ್ರದ ಜನತೆಯ ಪರವಾಗಿ ನಮ್ಮ ಬೇಡಿಕೆಗೆ ಸ್ಪಂದಿಸಿದ ರಾಜ್ಯದ ಗೃಹ ಸಚಿವ ಡಾ.ಜಿ.ಪರಮೇಶ್ವರ ಅವರಿಗೆ ಕೃತಜ್ಞತೆ ಸಲ್ಲಿಸುವುದಾಗಿ ಹೇಳಿದರು.

ಶಾಸಕರ ಅನುದಾನದಲ್ಲಿ ಈಗಾಗಲೇ ಇಳಕಲ್ ಮತ್ತು ಹುನಗುಂದ ನಗರಕ್ಕೆ ಒಂದೊಂದು ಪೊಲೀಸ್ ಗಸ್ತು ವಾಹನವನ್ನು ನೀಡಿದ್ದು, ಸದ್ಯದಲ್ಲೇ ಅಮೀನಗಡ ಪೊಲೀಸ್ ಠಾಣೆಗೆ ಒಂದು ವಾಹನ ಬರಲಿದೆ ಎಂದು ಕಾಶಪ್ಪನವರ ಹೇಳಿದರು.

ಪೊಲೀಸ್ ಇಲಾಖೆಯ ಅಧಿಕಾರಿಗಳು, ನಗರದ ಮುಖಂಡರು ಹಾಗೂ ಪೊಲೀಸ್ ಸಿಬ್ಬಂದಿ ಉಪಸ್ಥಿತರಿದ್ದರು.

# ಎಪ್ರೀಲ್‌ನಲ್ಲಿ ಜಿಲ್ಲಾಮಟ್ಟದ ಛಲವಾದಿ ಸಮಾವೇಶ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ವಾ.3–ಮುಂಬರುವ ಎಪ್ರೀಲ್ ತಿಂಗಳಿನಲ್ಲಿ ಬಾಗಲಕೋಟ ಜಿಲ್ಲಾ ಮಟ್ಟದ ಛಲವಾದಿ ಸಮಾವೇಶವನ್ನು ಹಮ್ಮಿಕೊಳ್ಳಲು ತೀರ್ಮಾನಿಸಲಾಗಿದೆ.

ನವನಗರದ ಅಂಬೇಡ್ಕರ್ ಭವನದಲ್ಲಿ ನಡೆದ ಕರ್ನಾಟಕ ರಾಜ್ಯ ಛಲವಾದಿ ಮಹಾಸಭಾದ ಜಿಲ್ಲಾ ಘಟಕದ ಸಭೆಯಲ್ಲಿ ಈ ನಿರ್ಧಾರ ಮಾಡಲಾಗಿದ್ದು, ಸುದೀರ್ಘ ಚರ್ಚೆಯ ನಂತರ ಸಮಾವೇಶದ ಯಶಸ್ವಿಗೆ ಹಿರಿಯರು ಸೇರಿದಂತೆ ಜಿಲ್ಲಾ ಪದಾಧಿಕಾರಿಗಳನ್ನೊಳಗೊಂಡ ಪ್ರಧಾನ ಸಮಿತಿ ರಚಿಸಲು ಒಪ್ಪಿಗೆ ಸೂಚಿಸಲಾಯಿತು.

ಸಮಿತಿ ಬೆಂಗಳೂರಿಗೆ ಹೋಗಿ ಅಲ್ಲಿನ ರಾಜ್ಯ ಪದಾಧಿಕಾರಿಗಳೊಂದಿಗೆ ಚರ್ಚಿಸಿ ಸಮಾಜದ ಸಚಿವರುಗಳ ದಿನಾಂಕ ಹೊಂದಿಸಿಕೊಂಡು ಸಮಾವೇಶದ ರೂಪರೇಷೆಗಳನ್ನು ಮಾಡುವುದಕ್ಕೆ ನಿರ್ಧರಿಸಲಾಯಿತು.

ಸಭೆಯಲ್ಲಿ ಜಿಲ್ಲಾಧ್ಯಕ್ಷ ಪ್ರೇಮನಾಥ ಗರಸಂಗಿ, ಹಿರಿಯರಾದ ಬಸವರಾಜ ಬದಾಮಿ, ಜಿಲ್ಲಾ ಘಟಕದ ಗೌರವಾಧ್ಯಕ್ಷ ಬಸವರಾಜ ಚಲವಾದಿ, ಜಿಲ್ಲಾ ಉಪಾಧ್ಯಕ್ಷ ರವಿ ಬಬಲೇಶ್ವರ, ಸದಾಶಿವ ಕೊಡಬಾಗಿ ಮಾತನಾಡಿ, ಸಮಾವೇಶದ ಯಶಸ್ವಿಗೆ ಎಲ್ಲ ತಾಲೂಕ ಘಟಕಗಳ ಪಾತ್ರ ಬಹಳ ಮುಖ್ಯವಾಗಿದ್ದು ಸಮಾಜದ ಅಭಿವೃದ್ಧಿಗೆ ನಾಂದಿ ಹಾಡುವಂತಹ ಈ ಸಮಾವೇಶ ಅದ್ದೂರಿಯಾಗಿ ಜರುಗಬೇಕಾಗಿದೆ ಎಂದರು.

ಜಮಖಂಡಿ ತಾಲೂಕಾ ಅಧ್ಯಕ್ಷ ಶಶಿಕಾಂತ ದೊಡಮನಿ, ಬದಾಮಿಯ ಆನಂದ ದೊಡಮನಿ, ಹುನಗುಂದದ ರಾಮಚಂದ್ರ ನಾಟೇಕಾರ ಮಾತನಾಡಿ, ಸಮಾವೇಶಕ್ಕೆ ಪೂರ್ವದಲ್ಲಿ ಮುಧೋಳ, ಗುಳೆದಗುಡ್ಡ ತಾಲೂಕಾ ಘಟಕಗಳು ರಚನೆಯಾಗಬೇಕಿದೆ ಎಂದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಡಾ.ಎಂ.ಹೆಚ್.ಚಲವಾದಿ, ಸಮಾಜವನ್ನು ಒಂದುಗೂಡಿಸುವ ಕಾರ್ಯ ಸಮಾವೇಶದಿಂದ ಆರಂಭವಾಗಲಿ.

ಸಮಾಜದ ಪ್ರತಿಯೊಬ್ಬರನ್ನು ವಿಶ್ವಾಸಕ್ಕೆ ತಗೆದುಕೊಂಡು ಮುಂದುವರಿಯಿರಿ ಎಂದು ಸಲಹೆ ನೀಡಿದರು.

ಇದೇ ಸಂದರ್ಭದಲ್ಲಿ ಬದಾಮಿ ತಾಲೂಕಾ ಅಧ್ಯಕ್ಷರಾಗಿ ಆಯ್ಕೆಯಾದ ಆಶೋಕ ದವನಿ ಅವರನ್ನು ಸನ್ಮಾನಿಸಲಾಯಿತು.

ಬಾಗಲಕೋಟ ಗ್ರಾಮೀಣ ಅಧ್ಯಕ್ಷ ಪರಶುರಾಮ ಚಲವಾದಿ, ಶ್ರೀಮತಿ ಶೀಲಾದೇವಿ ಗೆಜ್ಜಲಗಟ್ಟಿ, ಶ್ರೀಮತಿ ಕಲಾಶ್ರೀ ಬನಸೋಡೆ, ಹೆಚ್.ಡಿ.ಹೊಸಮನಿ, ವೈ.ಎಸ್.ದೊಡಮನಿ, ಮಹೇಶ ಬೀಳಗಿ, ಮನೋಹರ ಗರಸಂಗಿ, ಗಜು ಕಾಂಬಳೆ, ಶನಸಪ್ಪ ನಾರಾಯಣಿ ಸೇರಿದಂತೆ ತಾಲೂಕಾ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಕರ್ನಾಟಕ ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕರಾಗಿ ಎನ್.ರವಿಕುಮಾರ ನೇಮಕ:ಮೇತ್ರಿ ಹರ್ಷ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ: ಎನ್. ರವಿಕುಮಾರ್ ಅವರು ಸದಾ ಜನಸಾಮಾನ್ಯರ ಹಿತಾಸಕ್ತಿಗಾಗಿ, ಪ್ರಜಾಪ್ರಭುತ್ವದ ಮೂಲ್ಯಗಳಿಗಾಗಿ ಹಾಗೂ ನಿಷ್ಠೆಯುತ ಆಡಳಿತಕ್ಕಾಗಿ ನಿರಂತರವಾಗಿ ಹೋರಾಡುತ್ತಿರುವ ಶ್ರೇಷ್ಠನಾಯಕರು. ಅವರ ಅನುಭವ, ತೀಕ್ಷ್ಣ ರಾಜಕೀಯ ದೃಷ್ಟಿಕೋನ ಮತ್ತು ಸಮಾಜಮುಖಿ ಚಿಂತನೆ ಪರಿಷತ್ತಿನಲ್ಲಿ ಪ್ರಬಲ ವಿರೋಧ ಪಕ್ಷದ ಧ್ವನಿಯಾಗಿ ಪ್ರತಿಧ್ವನಿಸುವಲ್ಲಿ ಮಹತ್ತರ ಪಾತ್ರ ವಹಿಸಲಿದ್ದಾರೆ. ನಿಮ್ಮ ನಾಯಕತ್ವದಲ್ಲಿ, ಜನಸಾಮಾನ್ಯರ ಪರ ಹೋರಾಟವನ್ನು ಮತ್ತಷ್ಟು ಸದೃಢಗೊಳಿಸಿ, ಸರ್ಕಾರದ ಜವಾಬ್ದಾರಿತ್ವವನ್ನು ಖಚಿತಪಡಿಸಿಕೊಳ್ಳುವ ಕಾರ್ಯದಲ್ಲಿ ಯಶಸ್ವಿಯಾಗಲಿ ಎಂದು ಬಿಜಪಿ ಓಬಿಸಿ ಮೋರ್ಚಾದ ಜಿಲ್ಲಾ ಉಪಾಧ್ಯಕ್ಷ ದಯಾನಂದ ಮೇತ್ರಿರವರು ತಿಳಿಸಿ, ಹರ್ಷ ವ್ಯಕ್ತಪಡಿಸಿದ್ದಾರೆ.

# ಸದ್ಭಕ್ತರಿಂದ ಶ್ರೀಶೈಲ ಪಾದಯಾತ್ರೆಗಳಿಗೆ ಅನ್ನಪ್ರಸಾದ ವ್ಯವಸ್ಥೆ ಬಗ್ಗೆ ಪೂರ್ವಭಾವಿ ಸಭೆ



ಮಲ್ಲಮ್ಮ ನುಡಿ ವಾರ್ತೆ

ಸುರಪುರ : ತಾಲೂಕಿನ ಕೆಂಭಾವಿಯ ಸದ್ಭಕ್ತರಿಂದ ರಾಮದುರ್ಗ ಕ್ರಾಸ್ ದೇವದುರ್ಗ ತಾಲೂಕಿನಲ್ಲಿ ಅನ್ನಪ್ರಸಾದ ವ್ಯವಸ್ಥೆ ಮಾಡುತ್ತಿದ್ದು, ಇದೊಂದು ಅತ್ಯಂತ ಪವಿತ್ರ ಕೆಲಸ. ನಮ್ಮ ಗುರಿಯೇ ಭಕ್ತರಿಗೆ ಸಂಪ್ರದಾಯದ ಪ್ರಕಾರ ಉತ್ತಮ ಆಹಾರ ಸೇವೆ ನೀಡುವುದು, ಇದು ಅವರಿಗೆ ಆರಾಮ ಮತ್ತು ಶಕ್ತಿಯನ್ನು ನೀಡುತ್ತದೆ. ನಾವು ಸೇವೆಯನ್ನು ಪ್ರಾಮಾಣಿಕವಾಗಿ ಮತ್ತು ನಿರಂತರವಾಗಿ ಮಾಡುತ್ತಿದ್ದೇವೆ. ಈ ವರ್ಷಗಳಿಂದ ಈ ಸೇವೆಗೆ ತಲುಪಿದ ಪ್ರತಿಕ್ರಿಯೆಗಳು ಮನಃಪೂರ್ವಕವಾಗಿವೆ. ಭಕ್ತರು ಸದಾ ಸಂತೋಷದಿಂದ ನಮ್ಮ ಸೇವೆಯನ್ನು ಸ್ವೀಕರಿಸುತ್ತಿದ್ದಾರೆ, ಇದು ನಮ್ಮ ಧಾರ್ಮಿಕ ಕರ್ತವ್ಯ ಮತ್ತು ಸೇವೆಯ ನಿಜವಾದ ಪಥವಾಗಿದೆ. ನಾವು ಇದನ್ನು ಇನ್ನಷ್ಟು ವಿಸ್ತರಿಸಲು ಮುಂದಾಗಿದ್ದೇವೆ, ಹೆಚ್ಚು ಭಕ್ತರಿಗೆ ಸೇವೆ ನೀಡಲು ನಾವು ದೇವರ ಆಶೀರ್ವಾದದಿಂದ ಸಾಧನೆಯತ್ತ ಹೆಜ್ಜೆ ಹಾಕುತ್ತಿದ್ದೇವೆ." ಪೂರ್ವಭಾವಿ ಸಭೆಯಲ್ಲಿ ಹಂಚಿಕೊಂಡ ರವಿ ಅಂಗಡಿಯವರು.!

ನಾಲ್ಕು ವರ್ಷಗಳಿಂದ ಶ್ರೀಶೈಲ ಮಲ್ಲಿಕಾರ್ಜುನ ಪಾದಯಾತ್ರೆಗೆ ಅನುಗುಣವಾಗಿ ಕೆಂಭಾವಿಯ ಸದ್ಭಕ್ತರಿಂದ ಹಾಗೂ ಕೆಂಭಾವಿಯ ಪ್ರಮುಖರಾದ ರವಿ ಸೊನ್ನದ್ ಅವರ ಮಾತುಗಳು ಅವರು ತಮ್ಮ ಮಾತುಗಳಲ್ಲಿ ಈ ಕೆಳಗಿನ ವಿಷಯಗಳನ್ನು ಭಕ್ತಿಯ ಮಹತ್ವ: ರವಿ ಸೊನ್ನದ್ ಅವರು ಭಕ್ತಿಯ ಮಹತ್ವವನ್ನು ಚರ್ಚಿಸುವುದರಲ್ಲಿ, ಪಾದಯಾತ್ರೆಗಳೂ ಸೇರಿದಂತೆ, ಎಲ್ಲಾ ಧಾರ್ಮಿಕ ಸೇವೆಗಳಾದರೂ ಪರಮಾರ್ಥವಾದ ಪ್ರಯೋಜನವನ್ನು ಪಡೆಯುವುದೆಂದು ಹೇಳಿದರು.

ಸಹಕಾರ ಮತ್ತು ಸೇವೆ: "ಅನ್ನಪ್ರಸಾದ್ ವ್ಯವಸ್ಥೆ"ದ ಮೂಲಕ, ಕೆಂಭಾವಿಯ ಜನರು ಶ್ರೇಷ್ಠ ಸೇವೆಯನ್ನು ನಿರ್ವಹಿಸುತ್ತಿದ್ದಾರೆ. ಇದು ಸಮಾಜದ ಶ್ರೇಷ್ಠತೆಯನ್ನು ಪ್ರತಿಬಿಂಬಿಸುವುದಾಗಿದೆ ಎಂದು ಅವರು ಹೇಳಿದರು.

ಪದಯಾತ್ರೆ ಮತ್ತು ಧಾರ್ಮಿಕ ಪ್ರಕ್ರಿಯೆಗಳು: ಶ್ರೀಶೈಲ ಮಲ್ಲಿಕಾರ್ಜುನ ಪಾದಯಾತ್ರೆಗೆ ಸತ್ಯವಂತಿಕೆಯಿಂದ ಸೇವೆ ಸಲ್ಲಿಸುವುದು, ಏಕಾಗ್ರತೆ, ಪ್ರಾಮಾಣಿಕತೆ ಮತ್ತು ದೇವರೊಂದಿಗೆ ನೇರ ಸಂಪರ್ಕವನ್ನು ಸಾಧಿಸುವ ಒಂದು ಮಹತ್ವದ ಮಾರ್ಗವಾಗಿದೆ ಎಂಬುದನ್ನು ಅವರು ವಿಶೇಷವಾಗಿ ಪ್ರಸ್ತಾಪಿಸಬಹುದು.

ದೈವ ಕೃಪೆ: ಅವರು ತಮ್ಮ ಮಾತಿನಲ್ಲಿ, ದೇವರ ಕೃಪೆಯು ಯಾವುದೇ ಸೇವೆಗೆ ಚಾಲನೆ ನೀಡುತ್ತದೆ. "ನಾವು ದೇವರ ಸೇವೆ ಮಾಡುವುದರಿಂದ ಮಾತ್ರ ನಾವು ಆತನ ಆಶೀರ್ವಾದವನ್ನು ಪಡೆಯಬಹುದು"

ಆಧ್ಯಾತ್ಮಿಕ ಪ್ರೇರಣೆ: ಎಲ್ಲರೂ ಈ ಪಾದಯಾತ್ರೆಗಳಲ್ಲಿ ಭಾಗವಹಿಸುವ ಮೂಲಕ ಧಾರ್ಮಿಕ ಜ್ಞಾನ ಹಾಗೂ ಮನೋಶಾಂತಿಯನ್ನು ಪಡೆಯುತ್ತಾರೆ ಎಂದು ರವಿ ಅಭಿಪ್ರಾಯ ಪಟ್ಟರು1. ರಾಜು ಮುತ್ಯಾ, ಗುರು ಕುಂಬಾರ, ಸಂಗಣ್ಣ ಸಾಹುಕಾರ, ಡಾ. ರವೀಂದ್ರ ಅಂಗಡಿ, ವಿರಭದ್ರಪ್ಪ ಸಾಹು ಬಂಡೋಳಿ, ಅಶೋಕ್ ಶಹಾಪುರ,

ರವಿ ಸಾಹು ಸೊನ್ನದ, ನಿಂಗಣ್ಣ ಕುಂಬಾರ, ಗಿರೇಪ್ಪ ಮ್ಯಾಗೇರಿ, ದೇವು ಹಡಪದ, ಸಿದ್ದಪ್ಪ ಸುಂಕದ, ಬೊಗಣ್ಣ ಗುಬ್ಯಾಡ್ , ಪೂರ್ವಭಾವಿ ಸಭೆಯಲ್ಲಿ ಪಾಲ್ಗೊಂಡು ಯಶಸ್ವಿಯಾಯಿತು.

# ಶ್ರೀ ರೇಣುಕಾಚಾರ್ಯ ಜಯಂತಿ ಪೂರ್ವಭಾವಿ ಸಭೆ

ಮಲ್ಲಮ್ಮ ನುಡಿ ವಾರ್ತೆ


ತಾಳಿಕೋಟಿ:ಶ್ರೀರೇಣುಕಾಚಾರ್ಯರ ಜಯಂತಿ ಅಂಗವಾಗಿ ಶ್ರೀ ಪಂಚಾಚಾರ್ಯ ಸಹಕಾರಿ ಪತ್ತಿನ ಸಂಘದ ಸಭಾಂಗಣದಲ್ಲಿ ತಾಳಿಕೋಟಿ ತಾಲೂಕಿನ ಬೇಡ ಜಂಗಮ ಸಮಾಜದ ಗೌರವಧ್ಯಕ್ಷರಾದ ಶ್ರೀ ರಾಮಲಿಂಗ ಮಹಾಸ್ವಾಮಿಗಳು, ಚಬನೂರ ಇವರ ನೇತೃತ್ವದಲ್ಲಿ ಹಾಗೂ ದೇವರ ಹಿಪ್ಪರಗಿಯ ಪ.ಪೂ. ಶಿವಯೋಗಿ ಮಹಾಸ್ವಾಮಿಗಳು ಇವರ ಸಾನಿಧ್ಯದಲ್ಲಿ ಪೂರ್ವಭಾವಿ ಸಭೆ ಜರುಗಿತು.

ಸಭೆಯಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ ಕೂಡಾ ಜಯಂತಿಯನ್ನು ಸಡಗರ ಸಂಭ್ರಮದಿಂದ ಆಚರಣೆಯನ್ನು ಮಾಡಲು ತೀರ್ಮಾನಿಸಲಾಯಿತು. ಮಾರ್ಚ್ 12, 2025 ರಂದು ಜಯಂತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲು ತೀರ್ಮಾನಿಸಲಾಯಿತು. ಈ ಕಾರ್ಯಕ್ರಮದಲ್ಲಿ ತಾಲೂಕಿನ ಸರ್ವ ಜಂಗಮ ಸಮಾಜದ ಬಂಧುಗಳನ್ನು ಸೇರಿಸಲು ತೀರ್ಮಾನಿಸಲಾಯಿತು.

ಇದಕ್ಕಾಗಿ ಅಗತ್ಯ ಸಿದ್ದತೆ ಮಾಡಿಕೊಳ್ಳಲು ಸಭೆಯಲ್ಲಿ ಎಲ್ಲರೂ ಒಮ್ಮತ ಅಭಿಪ್ರಾಯ ವ್ಯಕ್ತಪಡಿಸಿದರು. ಈ ಸಭೆಯಲ್ಲಿ ಬೇಡ ಜಂಗಮ ಸಮಾಜದ ಅಧ್ಯಕ್ಷರು, ಸರ್ವ ಪದಾಧಿಕಾರಿಗಳು, ಸಮಾಜದ ಹಿರಿಯರು ಭಾಗವಹಿಸಿದ್ದರು.

ಸರ್ಕಾರಿ ನೌಕರರ ಸಮುದಾಯ ಭವನದಲ್ಲಿ ಸಂಸದ ಸಾಗರ ಖಂಡ್ರೆ ಹಾಗೂ ಎಂಎಲ್‌ಸಿ ಡಾ. ಎಂ.ಜಿ ಮೂಳೆ ಅವರಿಗೆ ಸನ್ಮಾನ

# ಮರಾಠಾ ಸಮಾಜದ ಅಭಿವೃದ್ಧಿಗೆ ಶ್ರಮಸುವೆ: ಸಾಗರ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ

ಬೀದರ: ಮರಾಠಾ ಸಮಾಜದ ಅಭಿವೃದ್ಧಿಗೆ ನಾನು ನಿರಂತರವಾಗಿ ಶ್ರಮಿಸುವೆ. ಮರಾಠಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಸ್ಥಾನವನ್ನು ಬೀದರ ಜಿಲ್ಲೆಗೆ ನೀಡಬೇಕೆಂದು ಹೈಕಮಾಂಡ್ ಮಟ್ಟದಲ್ಲಿ ಚರ್ಚಿಸಲು ಪ್ರಯತ್ನಿಸುವೆ ಎಂದು ಲೋಕಸಭಾ ಸದಸ್ಯರಾದ ಸಾಗರ ಖಂಡ್ರೆ ತಿಳಿಸಿದರು.

ಸಕಲ ಮರಾಠಾ ಸಮಾಜದ ವತಿಯಿಂದ ಪ್ರತಾಪನಗರದ ಸರ್ಕಾರಿ ನೌಕರರ ಸಮುದಾಯ ಭವನದ ಸಭಾಂಗಣದಲ್ಲಿ ಆಯೋಜಿಸಿದ ಅಭಿನಂದನಾ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು. ಕ್ಷತ್ರೀಯ ಮರಾಠಾ ಸಮುದಾಯದ ಭವನ ನಿರ್ಮಾಣ ಅರ್ಧಕ್ಕೆ ನಿಂತಿದ್ದು, ಕೂಡಲೇ ಈ ಭವನಕ್ಕೆ ಸಂಸದರ ಅನುದಾನದಲ್ಲಿ ರೂ. 25 ಲಕ್ಷ ನೀಡುವುದಾಗಿ ಭರವಸೆ ನೀಡಿದರು.

ಸಮಾಜವನ್ನು ಸಮಾಜದ ಮುಖ್ಯವಾಹಿನಿಗೆ ತರುವ ನಿಟ್ಟಿನಲ್ಲಿ ಈ ಮರಾಠಾ ಸಮಾಜವನ್ನು 2ಎ ಪ್ರವರ್ಗಕ್ಕೆ ಸೇರಿಸಬೇಕಾಗಿರುವುದು ಅತಿ ಅವಶ್ಯಕತೆಯಿದೆ. ಹಾಗಾಗಿ ಲೋಕಸಭೆಯಲ್ಲಿ ಈ ಕುರಿತು ಅಧಿವೇಶನದ ಸಂದರ್ಭದಲ್ಲಿ ಧ್ವನಿ ಎತ್ತುತ್ತೇನೆ ಎಂದು ಸಂಸದ ಸಾಗರ ಖಂಡ್ರೆ ತಿಳಿಸಿದರು. ಬೀದರ ನಗರದಲ್ಲಿ ಮರಾಠಾ ಸಮುದಾಯ ಭವನಕ್ಕೆ 2 ಎಕರೆ ಜಮೀನು ನೀಡಬೇಕೆಂಬ ಬೇಡಿಕೆ ಈಡೇರಿಸುವೆ ಜೊತೆಗೆ ಪ್ರತಿಯೊಂದು ತಾಲೂಕಿನಲ್ಲಿ ಶಿವಸೃಷ್ಟಿ ಹೆಸರಿನ ಶಿವಾಜಿ ಮಹಾರಾಜರ ಸಾಧನೆಗಳನ್ನು ತಿಳಿಸುವ ವಸ್ತುಪ್ರದರ್ಶನ ನಿರ್ಮಾಣ ಮಾಡಲು ಪ್ರಯತ್ನಿಸುವೆ ಎಂದು ಸಾಗರ ಖಂಡ್ರೆ ಹೇಳಿದರು.

ಅಭಿನಂದನಾ ಸಮಾರಂಭದ ಸ್ವಾಗತ ಸಮಿತಿ ಅಧ್ಯಕ್ಷರಾದ ಅಶೋಕಕುಮಾರ ಕಣಜಿಕರ್ ಅವರು ಸಂಸದ ಸಾಗರ ಖಂಡ್ರೆಯವರಿಗೆ ಹಲವು ಬೇಡಿಕೆಗಳುಳ್ಳ ಮನವಿ ಪತ್ರವನ್ನು ಸಲ್ಲಿಸಿದರು.

ವಿಧಾನ ಪರಿಷತ್ ಸದಸ್ಯರಾದ ಡಾ. ಎಂ.ಜಿ.ಮೂಳೆ ಮಾತನಾಡಿ ಮರಾಠಾ ಸಮಾಜವನ್ನು 2ಎಗೆ ಸೇರ್ಪಡೆ ಮಾಡಬೇಕು. ಕರ್ನಾಟಕ ಮರಾಠ ಅಭಿವೃದ್ಧಿ ನಿಗಮಕ್ಕೆ ಅಧ್ಯಕ್ಷ ಸ್ಥಾನದ ಭರ್ತಿ ಮಾಡಬೇಕು. ಮರಾಠಾ ಸಮುದಾಯದ ಮಕ್ಕಳು ಉನ್ನತ ವ್ಯಾಸಂಗಕ್ಕಾಗಿ ವಿದೇಶಕ್ಕೆ ತೆರಳಿದರೆ ನಿಗಮದ ವತಿಯಿಂದ ರೂ. 50 ಲಕ್ಷ ಅನುದಾನವಿದೆ. ಈಗಾಗಲೇ ಬೀದರ ಜಿಲ್ಲೆಯ ಒಬ್ಬ ವಿದ್ಯಾರ್ಥಿಗೆ ಹಣ ಬಿಡುಗಡೆ ಸರ್ಕಾರ ಮಾಡಿದೆ. ಹೀಗಾಗಿ ಅವಶ್ಯಕತೆ ಇರುವ ವಿದ್ಯಾರ್ಥಿಗಳು ಅರ್ಜಿ ಭರ್ತಿ ಮಾಡಿ ಸದುಪಯೋಗ ಪಡೆದುಕೊಳ್ಳಬೇಕೆಂದು ತಿಳಿಸಿದರು. ಮರಾಠ ನಿಗಮ ಮಂಡಳಿ ವತಿಯಿಂದ ಅನೇಕ ಸೌಲಭ್ಯಗಳನ್ನು ಸಮಾಜದ ಜನರಿಗೆ ಸರ್ಕಾರ ನೀಡುತ್ತಿದ್ದು, ಸಮಾಜದ ಜನರು ಈ ಕುರಿತು ತಿಳಿದುಕೊಂಡು ಸದುಪಯೋಗ ಪಡೆದುಕೊಳ್ಳಬೇಕು. ಅರ್ಥವಾಗದಿದ್ದರೆ ನಾನು ಜನರಿಗೆ ಮಾರ್ಗದರ್ಶನ ಮಾಡಲು ಸದಾ ಸಿದ್ಧನಿದ್ದೇನೆ ಎಂದು ಮೂಳೆ ತಿಳಿಸಿದರು.

ಬೆಂಗಳೂರಿನ ಪೂಜ್ಯಶ್ರೀ ಜಗದ್ಗುರು ವೇದಾಚಾರ್ಯ ಮಂಜುನಾಥ ಭಾರತಿ ಸ್ವಾಮೀಜಿ ಮಾತನಾಡಿ ಮರಾಠ ಸಮಾಜದ ಇದೊಂದು ಕ್ಷತ್ರೀಯ ಸಮಾಜವಾಗಿದ್ದು, ಇದು ಎಲ್ಲರನ್ನೂ ಇಂಬಿಟ್ಟುಕೊಂಡು ಸಮಾನತೆಯಿಂದ ಸಾಗುವ ಸಮಾಜವಾಗಿದೆ.

ಎಲ್ಲರೂ ಐಕ್ಯತೆಯಿಂದ ಬದುಕಬೇಕು. ಪರಸ್ಪರ ಪ್ರೀತಿ ವಿಶ್ವಾಸ ಮತ್ತು ನಂಬಿಕೆಯಿಂದ ಸಮಾಜದ ಏಳ್ಗೆಗೆ ಶ್ರಮಿಸಬೇಕು. ಪ್ರತಿಯೊಬ್ಬರೂ ತಮ್ಮ ತಮ್ಮ ಮಕ್ಕಳಿಗೆ ಉನ್ನತ ಶಿಕ್ಷಣ ಕೊಡಿಸಬೇಕು. ಸದಾ ಜಾಗೃತರಾಗಿ ಸಮಾಜದ ಸೇವೆಯ ಜೊತೆಗೆ ಸ್ವಯಂ ಏಳ್ಗೆಗೆ ಸಮಯ ನೀಡಬೇಕೆಂದು ತಿಳಿಸಿದರಲ್ಲದೆ, ಕಾರವಾರ ಜಿಲ್ಲೆಯ ಹಳಿಯಾಳ ತಾಲೂಕಿನಲ್ಲಿ ಶ್ರೀಹರಿ ಛತ್ರಪತಿ ಶಿವಾಜಿ ಮಹಾರಾಜ ಗುರುಕುಲ ಸ್ಥಾಪಿಸಲಾಗುತ್ತಿದೆ. ಅಲ್ಲಿ ಸಮಾಜದ ಮಕ್ಕಳಿಗೆ ಶಿಕ್ಷಣ, ಸಂಗೀತ, ವೇದಾಂತ, ಸಂಸ್ಕೃತ, ಸಂಸ್ಕಾರ, ಭಾಷಾ ಜ್ಞಾನ ಸೇರಿದಂತೆ ಮಕ್ಕಳ ಏಳ್ಗೆಗೆ ಬೇಕಾಗುವ ಸಂಸ್ಕಾರ ಇಲ್ಲಿ ನೀಡಲಾಗುವುದು ಎಂದು ತಿಳಿಸಿದರು.

ವೇದಿಕೆ ಮೇಲೆ ಕರ್ನಾಟಕ ಕ್ಷತ್ರೀಯ ಮರಾಠಾ ಪರಿಷತ್ ಅಧ್ಯಕ್ಷ ದಿಗಂಬರರಾವ ಮಾನಕಾರಿ, ಸ್ವಾಗತ ಮತ್ತು ಸತ್ಕಾರ ಸಮಿತಿ ಕಾರ್ಯದರ್ಶಿ ವೆಂಕಟರಾವ ಮಾಯಿಂದೆ, ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷ ಬಾಬುರಾವ ಮಾನಕಾರಿ, ಸಕಲ ಮರಾಠಾ ಸಮಾಜದ ಮುಖಂಡರಾದ ಜನಾರ್ಧನ ಬಿರಾದಾರ, ಪಂಚಶೀಲ ಪಾಟೀಲ, ಜನಾರ್ಧನ ವಾಘಮಾರೆ, ಸಕಲ ಮರಾಠಾ ಸಮಾಝದ ಸಂಯೋಜಕರಾದ ಪ್ರದೀಪ ಬಿರಾದಾರ, ಪ್ರಮುಖರಾದ ಪ್ರಕಾಶ ಪಾಟೀಲ, ಕಿರಣ ಬಿರಾದಾರ, ತಾತ್ಯಾರಾವ ಪಾಟೀಲ ಬಸವಕಲ್ಯಾಣ, ರಘುನಾಥರಾವ ಜಾಧವ್, ಪಾಂಡುರಂಗ ಕಣಜಿ, ಮೀನಾಕ್ಷಿ ಕಾಳೆ, ಹಣಮಂತರಾವ ಚವ್ಹಾಣ, ಸತೀಶ ಪಾಟೀಲ, ಕಿಶನರಾವ ಪಾಟೀಲ, ಬನಸಿಲಾಲ್ ಬೊರೊಳೆ, ನಾರಾಯಣ ಪಾಟೀಲ, ವಿದ್ಯಾವಾನ್ ಪಾಟೀಲ, ಶಾಹುರಾಜ್ ಪವಾರ್, ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಇದೇ ವೇಳೆ ಲೋಕಸಭಾ ಸದಸ್ಯ ಸಾಗರ ಖಂಡ್ರೆ ಹಾಗೂ ವಿಧಾನ ಪರಿಷತ್ ಸದಸ್ಯರಾದ ಡಾ. ಎಂ.ಜಿ.ಮೂಳೆ ಅವರನ್ನು ಸಕಲ ಮರಾಠಾ ಸಮಾಜದ ವತಿಯಿಂದ ಅದ್ದೂರಿಯಾಗಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲೆಯ ಮರಾಠಾ ಸಮಾಜದ ಸುಮಾರು 5 ಸಾವಿರಕ್ಕೂ ಅಧಿಕ ಜನರು ಪಾಲ್ಗೊಂಡಿದ್ದರು.


ಕರ್ನಾಟಕ ಸರ್ಕಾರ. ಗ್ಯಾರಂಟಿ ಸರ್ಕಾರ
ಅನ್ನಭಾಗ್ಯ
ಬಡವರಿಗೆ ಪ್ರತಿ ತಿಂಗಳು
10 kg
5 ಕೆಜಿ ಆಹಾರಧಾನ್ಯ ಬದಲಿಗೆ ರೂ. 170
ಹೆಚ್ಚುವರಿ 5 ಕೆ.ಜಿ ಅಕ್ಕಿ ಬದಲು 170 ರೂ. ನೀಡಿಕೆ
ಪಡಿತರ ಚೀಟಿಯ ಮುಖ್ಯಸ್ಥರ ಬ್ಯಾಂಕ್ ಖಾತೆಗೆ
ನೇರ ನಗದು ವರ್ಗಾವಣೆ
ಶ್ರೀ ಡಿ.ಕೆ. ಶಿವಕುಮಾರ್
ಮಾನ್ಯ ಉಪ ಮುಖ್ಯಮಂತ್ರಿಗಳು
3.99 ಕೋಟಿ
ಫಲಾನುಭವಿಗಳಿಗೆ
ರೂ.3751 ಕೋಟಿ ಹಣವನ್ನು
ವರ್ಗಾಯಿಸಲಾಗಿದೆ
'ಅನ್ನ ದೇವರಿಗಿಂತ ಇನ್ನು ದೇವರು ಇಲ್ಲ" ಎಂಬುವ ಸರ್ವಜ್ಞರ ಕವಿವಾಣಿಯಂತೆ ಹಸಿವುಮುಕ್ತ ಕರ್ನಾಟಕ ರೂಪಿಸುವ ಜೀವಮಾನದ ಆಶಯ ಹೊತ್ತ ಸನ್ಮಾನ್ಯ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯನವರ ನಾಯಕತ್ವದ ಅಡಿಯಲ್ಲಿ ಕರ್ನಾಟಕ ಸರ್ಕಾರವು ಅನ್ನಭಾಗ್ಯ ಯೋಜನೆ ಜಾರಿಗೆ ತಂದಿದ್ದು, ಕರ್ನಾಟಕದ ಜನತೆ ನೆಮ್ಮದಿಯ ಬದುಕು ಸಾಗಿಸಲು ಆಹಾರ ಭದ್ರತೆ ಸಾಕಾರವಾಗಿದೆ.
ಶ್ರೀ ಸಿದ್ದರಾಮಯ್ಯ
ಸನ್ಮಾನ್ಯ ಮುಖ್ಯಮಂತ್ರಿಗಳು
ಶಕ್ತಿ ಮಹಿಳೆಯರಿಗೆ ಬಸ್ ಪ್ರಯಾಣ ಉಚಿತ
ಪ್ರತಿನಿತ್ಯ 62 ಲಕ್ಷ ಮಹಿಳಾ ಪ್ರಯಾಣಿಕರು. ಇದುವರೆಗೆ 136 ಕೋಟಿ ಟ್ರಿಪ್
ಗೃಹಲಕ್ಷ್ಮಿ ₹2000
1.09 ಕೋಟಿ ಖಾತೆಗಳಿಗೆ ನಗದು ವರ್ಗಾವಣೆ
ಸನ್ಮಾನ್ಯ ಮುಖ್ಯಮಂತ್ರಿ ಹಾಗೂ ಮಾನ್ಯ ಉಪ ಮುಖ್ಯಮಂತ್ರಿಗಳ ಜೊತೆಯಲ್ಲಿ ಮಾನ್ಯ ಆಹಾರ ಮತ್ತು ನಾಗರಿಕ ಪೂರೈಕೆ ಹಾಗೂ ಗ್ರಾಹಕ ವ್ಯವಹಾರಗಳ ಸಚಿವರಾದ ಶ್ರೀ ಕೆ. ಹೆಚ್. ಮುನಿಯಪ್ಪರವರು ಅನ್ನಭಾಗ್ಯ ಯೋಜನೆಗೆ ಚಾಲನೆ ನೀಡುತ್ತಿರುವರು
1.59 ಕೋಟಿಗೂ ಅಧಿಕ ಕುಟುಂಬಗಳಿಗೆ ಉಚಿತ ವಿದ್ಯುತ್ ನೀಡಿಕೆ
ಗೃಹ ಜ್ಯೋತಿ ಪ್ರತಿ ಮನೆಗೆ 200 ಯೂನಿಟ್‌ವರೆಗೆ ವಿದ್ಯುತ್ ಉಚಿತ
4.5 ಲಕ್ಷ ಯುವ ಜನರಿಗೆ ನೆರವಾಗುವ ನಿರೀಕ್ಷೆ
ಯುವನಿಧಿ ಪ್ರತಿ ತಿಂಗಳು ನಿರುದ್ಯೋಗ ಭತ್ಯೆ ₹3000 ₹1500
ನುಡಿದಂತೆ ನಡೆದಿದ್ದೇವೆ...
ಕರ್ನಾಟಕದಲ್ಲಿ 96% ಗೂ ಹೆಚ್ಚಿನ ಜನರು ಒಂದು ಅಥವಾ ಹೆಚ್ಚು ಗ್ಯಾರಂಟಿ ಯೋಜನೆಗಳ ಅನುಕೂಲವನ್ನು ಪಡೆಯುತ್ತಿರುವರು.
"ಸಾರ್ವಜನಿಕ ಆಸ್ತಿ ಪಾಸ್ತಿ ರಕ್ಷಿಸುವುದು ಮತ್ತು ಹಿಂಸೆಯನ್ನು ತ್ಯಜಿಸುವುದು ಪ್ರತಿಯೊಬ್ಬ ಭಾರತೀಯನ ಮೂಲಭೂತ ಕರ್ತವ್ಯ"
CMofKarnataka https://dipr.karnataka.gov.in/
ಕರ್ನಾಟಕ ವಾರ್ತೆ
ಗಡಿಭಾಗದ ಹಾಗೂ ವಿಶೇಷ ಮಾಧ್ಯಮ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದ ಜಾಹೀರಾತು